14 October 2025 Tuesday

SINCE 1957

ಬೆಳಗಿನ ಪ್ರಾದೇಶಿಕ ದಿನ ಪತ್ರಿಕೆ

# ವರ್ತಮಾನ

ಭವಿಷ್ಯದ ಮುನ್ನುಡಿ

ಸಂಪಾದಕ: ಕೆ.ಎನ್.ರವಿ

info.varthaman@gmail.com

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು ಗ್ರಾಮಾಂತರ | ಕೊಡಗು | ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್

VARTHAMAN | Volume: 69 | Issue: 13 | Pages: 06 | KA/SK/MYS/1098/2023-2025 | R.N.I. No.3577/1957 | www.varthaman.in | Price-3

**ಭಾವನಾಂತರಂಗ**

ಬದುಕಿನ ಪುಸ್ತಕ
ಎಷ್ಟೇ ಪುರಾತನವಾದರೂ,
ನೆನಪಿನ ಪುಟಗಳು ನಿತ್ಯ ನೂತನ!

ಸ್ನೇಹಾ ಆನಂದ್

**ಒಂದೊಳ್ಳೆ ಮಾತು**

ನಾವು ಬದುಕಿನಲ್ಲಿ
ಇಟ್ಟುಕೊಂಡ ನಿರೀಕ್ಷೆಗಿಂತ
ಬದುಕು ನಡೆಸುವ
ಪರೀಕ್ಷೆಗಳೇ ಹೆಚ್ಚು, ಗೆದ್ದರೆ
ಮುಂದಿನ ದಾರಿ ಸುಗಮ,
ಸೋತರೆ ಬಾಳಿನ ಹೊಸ
ಅಧ್ಯಾಯದ ಉಗಮ

ಮೈಲಾರ ಸಾವಿತ್ರಿಬಾಯಿ


# ಸಿಎಂ ಬದಲಿಸಲು ಶಾಸಕರ ಬೆಂಬಲವೂ ಅಗತ್ಯ

## ಹೈಕಮಾಂಡ್ ತೀರ್ಮಾನವೂ ಮುಖ್ಯ | ಡಿಕೆಶಿ ಹೇಳಿಕೆಗೆ ಸಿದ್ದರಾಮಯ್ಯ ತಿರುಗೇಟು

**ಬಾಗಲಕೋಟೆ:** ಮುಖ್ಯಮಂತ್ರಿ ಬದಲಾವಣೆ ವಿಚಾರದಲ್ಲಿ ಹೈಕಮಾಂಡ್ ತೀರ್ಮಾನ ಮುಖ್ಯ. ಅದರ ಜೊತೆಗೆ ಶಾಸಕರ ನಿರ್ಧಾರವೂ ಮುಖ್ಯವಾಗುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮಾರ್ಮಿಕವಾಗಿ ಮಾತನಾಡಿದ್ದಾರೆ. ಈ ಮೂಲಕ ಮುಖ್ಯಮಂತ್ರಿ ಸ್ಥಾನ ತ್ಯಜಿಸುವ ವಿಚಾರಕ್ಕೆ ತಿರುಗೇಟು ನೀಡಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಸೋಮವಾರ ಮಾತನಾಡಿದ ಅವರು, ಸಿಎಂ ಬದಲಾವಣೆ ವಿಷಯದಲ್ಲಿ ಹೈಕಮಾಂಡ್ ನಿರ್ಧಾರ ಅಂತಿಮ ಎಂದಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿಕೆ ಕುರಿತ ಮಾಧ್ಯಮಗಳ ಪ್ರಶ್ನೆಗೆ ಪ್ರತಿಕ್ರಿಯಿಸಿದರು.

ಯಾರೂ ಶಾಸಕರ ಬೆಂಬಲ ಇಲ್ಲದೇ ಮುಖ್ಯಮಂತ್ರಿ ಆಗುವುದಕ್ಕೆ ಸಾಧ್ಯವಿಲ್ಲ. ಬಹುಮತ ಇದ್ದರೆ ಆಗಬಹುದು. ಜೊತೆಗೆ ಹೈಕಮಾಂಡ್ ಆಶೀರ್ವಾದವೂ ಬೇಕು. ಹೈಕಮಾಂಡ್ ಸಹ ಶಾಸಕರ ಬೆಂಬಲವನ್ನು ಪರಿಗಣಿಸುತ್ತದೆ ಎಂದು ಹೇಳುವ ಮೂಲಕ ಡಿ.ಕೆ.ಶಿವಕುಮಾರ್ ಹೇಳಿಕೆಗೆ ತಿರುಗೇಟು ನೀಡಿದ್ದಾರೆ. ಡಿನ್ನರ್ ಪಾರ್ಟಿಗೂ ಸಂಪುಟ ಪುನಾರಚನೆಗೂ ಯಾವುದೇ ಸಂಬಂಧವಿಲ್ಲ. ಆಗಾಗ ಪುಟ 2ಕ್ಕೆ



### ಆರ್‌ಎಸ್‌ಎಸ್ ವಿರುದ್ಧ ತ.ನಾಡು ಮಾದರಿ ಕ್ರಮ

**ಬಾಗಲಕೋಟೆ:** ತಮಿಳು ನಾಡಿನಲ್ಲಿ ಆರ್‌ಎಸ್ ಎಸ್ ವಿರುದ್ಧ ಯಾವ ರೀತಿ ಕ್ರಮ ಕೈಗೊಂಡಿದ್ದಾರೆಯೋ ರಾಜ್ಯ ದಲ್ಲಿಯೂ ಪರಿಶೀಲಿಸಿ ಅದೇ ರೀತಿ ಕ್ರಮ ಕ್ರಮ ಕೈಗೊಳ್ಳುವಂತೆ ಮುಖ್ಯ ಕಾರ್ಯದರ್ಶಿ ಅವರಿಗೆ ಸೂಚಿಸಿದ್ದೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.ಮಾಧ್ಯಮಗಳ ಜೊತೆ ಸೋಮವಾರ ಮಾತನಾಡಿದ ಅವರು, ಸರ್ಕಾರಿ ಜಾಗದಲ್ಲಿ ಆರ್‌ಎಸ್‌ಎಸ್ ಕಾರ್ಯಕ್ರಮಗಳಿಗೆ ಪುಟ 2ಕ್ಕೆ

### ಊಟಕ್ಕೆ ಸೇರುವುದೇ ಅಪರಾಧವೇ

**ಬೆಂಗಳೂರು:** ನಾವು ಆಗಾಗ್ಗೆ ಊಟಕ್ಕೆ ಸೇರುತ್ತೇವೆ. ಊಟಕ್ಕೆ ಸೇರುವುದೇ ದೊಡ್ಡ ಅಪರಾಧವೇ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನಿಸಿದರು.

ಹುಬ್ಬಳ್ಳಿಗೆ ತೆರಳುವ ಮುನ್ನ ಸೋಮವಾರ ಕಿತ್ತೂರು ಉತ್ಸವ ಜ್ಯೋತಿಗೆ ಚಾಲನೆ ನೀಡಿ ಮಾಧ್ಯಮದವರೊಂದಿಗೆ ಸೋಮವಾರ ಮಾತನಾಡಿದರು. ಸಂಪುಟ ಸದಸ್ಯರಿಗೆ ಆಯೋಜಿಸಿರುವ ಭೋಜನಕೂಟದ ಬಗ್ಗೆ ಸುದ್ದಿಗಾರರು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ಅವರು, ನಾವು ಯಾವಾಗಲೂ ಭೇಟಿಯಾಗುತ್ತಲೇ ಇರುತ್ತೇವೆ. ನಮ್ಮ 'ಡಿನ್ನರ್ ಮೀಟಿಂಗ್'ಗೆ ವಿಶೇಷ ಅರ್ಥ ಕಲ್ಪಿಸುವ ಅಗತ್ಯವಿಲ್ಲ ಎಂದು ಹೇಳಿದರು. ರಾಜ್ಯ ಸರ್ಕಾರ ಎರಡೂವರೆ ವರ್ಷಗಳ ಆಡಳಿತವನ್ನು ಪೂರೈಸುತ್ತಿರುವ ಹೊತ್ತಿನಲ್ಲಿ ಮತ್ತು ನಾಯಕತ್ವ ಪುಟ 2ಕ್ಕೆ

## ಡಿಕೆಶಿ ಸಿಎಂ ಆಗುವುದು ಊಹಾಪೋಹಾ: ಯತೀಂದ್ರ

**ರಾಯಚೂರು:** ಡಿಸೆಂಬರ್‌ನಲ್ಲಿ ರಾಜ್ಯ ಸಚಿವ ಸಂಪುಟ ವಿಸ್ತರಣೆ ಆಗಲಿದೆ. ಡಿ.ಕೆ.ಶಿವಕುಮಾರ್ ಸಿಎಂ ಆಗುತ್ತಾರೆ ಎಂಬುದು ಊಹಾಪೋಹಾ ಎಂದು ವಿಧಾನ ಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ತಿಳಿಸಿದರು.

ನಗರದಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಅವರು. ರಾಜ್ಯ ಸರ್ಕಾರದಲ್ಲಿ ನವೆಂಬರ್‌ನಲ್ಲಿ ಕ್ರಾಂತಿಯಾಗಲಿದೆ. ಡಿ.ಕೆ.ಶಿವಕುಮಾರ್ ಸಿಎಂ ಆಗುತ್ತಾರೆ ಎನ್ನುವ ಮಾತುಗಳು ಕೇವಲ ಊಹಾಪೋಹ. ಈ ಬಗ್ಗೆ ಹೈಕಮಾಂಡ್ ಮಟ್ಟದಲ್ಲಿ ಏನು ಮಾತುಕತೆ ನಡೆದಿದೆ ಎನ್ನುವುದರ ಕುರಿತು ಯಾರಿಗೂ ಗೊತ್ತಿಲ್ಲ ಎಂದರು.



ಊಹಾಪೋಹದ ಆಧಾರದ ಮೇಲೆಯೇ ಹೇಳಿಕೆಗಳನ್ನು ಕೊಡುತ್ತಿದ್ದಾರೆ. ನನಗೆ ತಿಳಿದಿರುವ ಹಾಗೆ ಅಧಿಕಾರ ಹಂಚಿಕೆ ಚರ್ಚೆಯೇ ಆಗಿಲ್ಲ. ನಮ್ಮ ಪಕ್ಷದಲ್ಲಿ ಸಾಕಷ್ಟು ಹಿರಿಯರು ಸಿಎಂ ಪದವಿಗೆ ಅರ್ಹರಾಗಿದ್ದಾರೆ. ಅದಕ್ಕಾಗಿ ಅವರು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸುತ್ತಿದ್ದಾರೆ ಎಂದು ಹೇಳಿದರು.

ಅನೇಕ ಹಿರಿಯರಿಗೆ ಸಚಿವ ಸ್ಥಾನ ಕೊಡಬೇಕು ಎನ್ನುವ ಬೇಡಿಕೆಯಿದೆ. ಕೆಲವರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಅಂತೆಯೇ ಮುಖ್ಯಮಂತ್ರಿ ಸೂಚ್ಯವಾಗಿ ಹೇಳಿಕೆ ಕೊಟ್ಟಿದ್ದಾರೆ ಎಂದು ತಿಳಿಸಿದರು.

ಮಾಜಿ ಸಂಸದ ಪ್ರತಾಪಸಿಂಹ ಅಪ್ರಸ್ತುತ ರಾಜಕಾರಣಿ. ಅವರ ಪಕ್ಷದವರೇ ಅವರನ್ನು ಕೇಳುವುದಿಲ್ಲ. ನಾವೇಕೆ ಅವರ ಮಾತಿಗೆ ಬೆಲೆ ಕೊಡಬೇಕು. ಆಧಾರ ರಹಿತ ಟೀಕೆಗಳಿಗೆ ಅರ್ಥವಿಲ್ಲ ಎಂದರು.

## ಗೃಹ ಇಲಾಖೆಗೆ ಪತ್ರ ಬಂದರೆ ಪರಿಶೀಲಿಸಿ ಕ್ರಮ: ಪರಂ

**ಬೆಂಗಳೂರು:** ಸರ್ಕಾರಿ ಜಾಗಗಳಲ್ಲಿ ಆರ್‌ಎಸ್‌ಎಸ್ ಕಾರ್ಯಕ್ರಮ ನಿಷೇಧ ಮಾಡಬೇಕು ಎಂದು ಪ್ರಿಯಾಂಕ್ ಖರ್ಗೆ ಸಿಎಂಗೆ ಪತ್ರ ಬರೆದಿರುವ ಬಗ್ಗೆ ನನಗೇನು ಗೊತ್ತಿಲ್ಲ. ಗೃಹ ಇಲಾಖೆಗೆ ಆ ಪತ್ರ ಬಂದರೆ ಪರಿಶೀಲನೆ ಮಾಡುತ್ತೇವೆ ಎಂದು ಗೃಹ ಸಚಿವ ಪರಮೇಶ್ವರ್ ತಿಳಿಸಿದರು.



ಬೆಂಗಳೂರಿನಲ್ಲಿ ಸೋಮವಾರ ಮಾತನಾಡಿದ ಅವರು, ಪ್ರಿಯಾಂಕ್ ಪತ್ರದ ಬಗ್ಗೆ ಅಧಿಕೃತ ಮಾಹಿತಿ ಇಲ್ಲ. ಸಿಎಂ ಅವರು ಅದರ ಬಗ್ಗೆ ಚರ್ಚೆ ಮಾಡುತ್ತಾರೆ. ಸಿಎಸ್ ಅವರು ನಿರ್ಧಾರ ತೆಗೆದುಕೊಳ್ತಾರೆ ಎಂದು ವಿವರಿಸಿದರು.

ಈ ಬಗ್ಗೆ ನಮ್ಮ ಇಲಾಖೆಗೆ ಬಂದರೆ ಪರಿಶೀಲನೆ

## ನಟ, ನಿರ್ದೇಶಕ ರಾಜು ತಾಳೀಕೋಟೆ ನಿಧನ

**ಉಡುಪಿ:** ಹಿರಿಯ ರಂಗಭೂಮಿ ಕಲಾವಿದ ಮತ್ತು ಹಾಸ್ಯ ಚಿತ್ರನಟ ರಾಜು ತಾಳಿಕೋಟೆ ಅವರು ಹೃದಯಾಘಾತದಿಂದ ಸೋಮವಾರ ನಿಧನರಾದರು

ವಿಜಯಪುರದ ಸಿಂದಗಿ ತಾಲ್ಲೂಕಿನ ಚಿಕ್ಕ ಸಿಂದಗಿ ಗ್ರಾಮದ ಮೂಲದ ರಾಜು ತಾಳಿಕೋಟೆ ಅವರು, ಕುಡುಕನ ಪಾತ್ರಗಳ ಮೂಲಕ ಮನೆಮಾತಾಗಿದ್ದರು.



ಉಡುಪಿಯಲ್ಲಿ ಸಿನಿಮಾವೊಂದರ ಚಿತ್ರೀಕರಣ ಮುಗಿಸಿ ಕೋಣೆಯಲ್ಲಿ ಮಲಗಿದ್ದಾಗ ಹಾರ್ಟ್ ಅಟ್ಯಾಕ್ ಆಗಿದೆ ಕೂಡಲೇ ಅವರನ್ನು ಉಡುಪಿಯ ಮಣಿಪಾಲ್ ಆಸ್ಪತ್ರೆಗೆ ಕರೆದೊಯ್ಯಲಾಗಿತ್ತು. ಅವರನ್ನು ಪರೀಕ್ಷಿಸಿದ ವೈದ್ಯರು ಮೃತಪಟ್ಟಿರುವುದಾಗಿ ಘೋಷಿಸಿದರು.

ವೃತ್ತಿ ರಂಗಭೂಮಿ ಮೂಲಕ ಸಿನಿಮಾ ರಂಗಕ್ಕೆ ರಾಜು ತಾಳಿಕೋಟೆ ಎಂಟ್ರಿ ಕೊಟ್ಟಿದ್ದರು. ರಾಜು ತಾಳಿಕೋಟೆ ಅವರು ಮನಸಾರೆ, ಪಂಚರಂಗಿ, ಮತ್ತೊಂದು ಮದುವೆನಾ, ಮೈನಾ ಸಿನಿಮಾಗಳಲ್ಲಿ ನಟಿಸಿದ್ದಾರೆ. ಉತ್ತರ ಕರ್ನಾಟಕದ ರಂಗಭೂಮಿಯಲ್ಲಿ 'ಖಾಸ್ಗತೇಶ್ವರ' ನಾಟಕ ಮಂಡಳಿಯ ಮಾಲೀಕರಾಗಿ, ಕುಡುಕನ ಪಾತ್ರಗಳ ಮೂಲಕ ಮನೆಮಾತಾಗಿದ್ದರು.

ಬ್ರಹ್ಮೋಸ್ ಗಣಪತಿ ವಿಸರ್ಜನೆ: ಅದ್ದೂರಿ ಮೆರವಣಿಗೆ
ಪುಟ–4
ಪುಟ್ಟರಂಗಶೆಟ್ಟಿಗೆ ಸಚಿವ ಸ್ಥಾನ ನೀಡಲು ಒತ್ತಾಯ
ಪುಟ–4
ವಿದ್ಯುತ್ ದೀಪಾಲಂಕಾರಕ್ಕೆ ತೆರೆ
ಪುಟ–4
ಅಂತರ್ಜಲ ವೃದ್ಧಿಗೆ ಒತ್ತು ಸಿ.ಪುಟ್ಟರಂಗಶೆಟ್ಟಿ
ಪುಟ–4

## ಆರ್‌ಎಸ್‌ಎಸ್ ಬ್ಯಾನ್ ಮರೆತುಬಿಡಿ

### ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಪ್ರತಾಪ್ ಸಿಂಹ ವಾಗ್ದಾಳಿ

**ಮೈಸೂರು:** ನೆಹರು ಮರಿ ಮೊಮ್ಮಗಳ ಹೆಸರು ಇಟ್ಕೊಂಡಿರುವ ನಿಮ್ಮ ಕೈಯಲ್ಲಿ ಆರ್‌ಎಸ್‌ಎಸ್ ಬ್ಯಾನ್ ಮಾಡಲು ಸಾಧ್ಯವಿಲ್ಲ ಎಂದು ಸಚಿವ ಪ್ರಿಯಾಂಕ್ ಖರ್ಗೆ ವಿರುದ್ಧ ಪ್ರತಾಪ್ ಸಿಂಹ ವಾಗ್ದಾಳಿ ನಡೆಸಿದರು,

ನಗರದಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಆರ್‌ಎಸ್‌ಎಸ್ ಬ್ಯಾನ್ ಮಾಡುವ ವಿಚಾರವನ್ನು ಮರೆತುಬಿಡಿ. ನೆಹರು ಕೈಯಲ್ಲೇ ಆಗಿಲ್ಲ. ನಿಮ್ಮ ಕೈಯಲ್ಲಿ ಇದು ಸಾಧ್ಯವಿಲ್ಲ ಎಂದು ವಾಗ್ದಾಳಿ ನಡೆಸಿದ್ದಾರೆ.



ಪ್ರಿಯಾಂಕ್ ಖರ್ಗೆ 3 ತಿಂಗಳಿಗೊಮ್ಮೆ ಆರ್‌ಎಸ್‌ಎಸ್ ಬೈಯ್ದು ತಮ್ಮ ಅಸ್ತಿತ್ವ ತೋರಿಸುವ ಪ್ರಯತ್ನ ಮಾಡಿದ್ದಾರೆ ಅಷ್ಟೆ. ಎಮ್ಮೆ ಮೇಲೆ ಮಳೆ ಸುರಿದರೆ ಪ್ರಯೋಜನವಿಲ್ಲ. ಅದೇ ರೀತಿ ಪಿಯುಸಿ ಫೇಲ್ ಆಗಿರುವ ಪ್ರಿಯಾಂಕ್ ಖರ್ಗೆಗೆ ಎಷ್ಟೇ ಬುದ್ಧಿ ಹೇಳಿದರು ಅರ್ಥವಾಗಲ್ಲ. ಪ್ರಚಾರದ ಹುಚ್ಚು, ಗೀಳು ಜಾಸ್ತಿಯಾಗಿ ಈ ರೀತಿ ಆಡ್ತಿದ್ದಾರೆ ಎಂದು ಟೀಕಿಸಿದರು.

ಪ್ರಿಯಾಂಕ್ ಪಿಯುಸಿ ಫೇಲ್ ಆಗಿ ಅನಿಮೇಷನ್ ಸರ್ಟಿಫಿಕೇಟ್ ಇಟ್ಟುಕೊಂಡು ಓಡಾಡುತ್ತಿದ್ದಾರೆ. ನೀವಂತೂ ಓದಿಲ್ಲ, ನಿಮ್ಮ ಕ್ಷೇತ್ರದ ಮಕ್ಕಳು ಓದುವಂತೆ ಮಾಡುವ ವಾತಾವರಣವನ್ನೂ ಸೃಷ್ಟಿ ಮಾಡ್ತಿಲ್ಲ. ನಿಮ್ಮ ಖಾತೆಯಲ್ಲಿ ಏನೂ ಕಡಿದು ಕಟ್ಟೆ ಹಾಕಿದ್ದೀರಾ ಹೇಳಿ ಎಂದು ವಾಗ್ದಾಳಿ ಮಾಡಿದರು.

ಸ್ಥಳೀಯ ಶಾಸಕರಿಗೆ, ಸಂಸದರಿಗೆ ಗೌರವ ಕೊಡಿ. ಈ ಗುಂಪಲ್ಲಿ ಜಮೀರ್ ಕೂತಿದ್ದರೆ ಹೇ ಬಿಳಿ ಟೋಪಿ ಸಾಬಣ್ಣ ಬಾ ಅಂತಾ ಕರೀತಿರಾ? ಕರೆಯುವ ಧಮ್ ಇದ್ಯಾ? ಕುಸುಮಾ ಅವರನ್ನು ನಿಮಗೆ ಬೇಕಾದರೆ ಎಂಎಲ್ಸಿ ಮಾಡಿಸಿ, ರಾಜ್ಯಸಭೆ ಸ್ಥಾನ ಕೊಡಿಸಿ. ಇದನ್ನು ಬಿಟ್ಟು ಸ್ಥಳೀಯ ಶಾಸಕರಿಗೆ ಯಾಕೆ ಕಿರುಕುಳ ಕೊಡ್ತೀರಾ ಎಂದು ಡಿ.ಕೆ.ಶಿವಕುಮಾರ್ ಅವರನ್ನು ಪ್ರಶ್ನಿಸಿದರು.

## ಆರ್‌ಎಸ್‌ಎಸ್‌ಗೆ ಎಚ್ಚರಿಕೆ ನೀಡಲು ಖರ್ಗೆ ಭೇಟಿ: ಪ್ರಿಯಾಂಕ್ ತಿರುಗೇಟು

**ಬೆಂಗಳೂರು:** ಮಲ್ಲಿಕಾರ್ಜುನ ಖರ್ಗೆ ಹೊಗಳಲು ಅಲ್ಲ. ಉಗಿಯಲು ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಶಿಬಿರಕ್ಕೆ ಹೋಗಿದ್ದರು ಎಂದು ಸಚಿವ ಪ್ರಿಯಾಂಕ್ ಖರ್ಗೆಯವರು ಸೋಮವಾರ ಹೇಳಿದ್ದಾರೆ.

ನಿಮ್ಮ ತಂದೆ ಮಲ್ಲಿಕಾರ್ಜುನ ಖರ್ಗೆ ಅವರು ಸ್ವತಃ ಆರ್‌ಎಸ್‌ಎಸ್ ಶಿಬಿರಕ್ಕೆ ಭೇಟಿ ನೀಡಿ, ಆರೆಸ್ಸೆಸ್‌ನ ಸಮಾಜಮುಖಿ ಕಾರ್ಯಗಳನ್ನು ಮೆಚ್ಚಿಕೊಂಡಿದ್ದರು. ಪೂರ್ಣ ಸಹಕಾರ ನೀಡಿದ್ದರು ಎಂಬ ಬಿಜೆಪಿ ಹೇಳಿಕೆಗೆ ಸಚಿವ ಪ್ರಿಯಾಂಕ್ ಖರ್ಗೆ ತಿರುಗೇಟು ನೀಡಿದ್ದಾರೆ.

ಆರೆಸ್ಸೆಸ್ ಕಾರ್ಯಕ್ರಮ ಸ್ಥಳಕ್ಕೆ ಮಲ್ಲಿಕಾರ್ಜುನ ಖರ್ಗೆ ಭೇಟಿ ನೀಡಿದ ಸಂದರ್ಭದಲ್ಲಿ ರಾಜ್ಯದ ಗೃಹ ಸಚಿವರಾಗಿದ್ದರು. ಅಂದು ಎಲ್ಲ ಸಮುದಾಯಗಳ ಅಧಿಕಾರಿಗಳು ಮತ್ತು ಪ್ರತಿನಿಧಿಗಳೊಂದಿಗೆ ಶಾಂತಿ ಸಭೆ ನಡೆಸಿದ ಬಳಿಕ ಆರೆಸ್ಸೆಸ್ ಕಾರ್ಯಕ್ರಮದ ಸ್ಥಳಕ್ಕೆ ಭೇಟಿ ನೀಡಿದ್ದರು. ಅದು ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ತರದಂತೆ ಎಚ್ಚರಿಕೆ ನೀಡಲು ನೀಡಿದ ಭೇಟಿಯಾಗಿತ್ತು ಎಂದು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಅಂದಿನ ಬೆಂಗಳೂರು ನಗರ ಪೊಲೀಸ್ ಆಯುಕ್ತ ಸಾಂಗ್ಲಿಯಾನ ಪುಟ 2ಕ್ಕೆ




### ಕೈ ಶಾಸಕರ ಶಾಲೆಯಲ್ಲಿ ಆರ್‌ಎಸ್‌ಎಸ್ ಬೈಠಕ್!

**ಬೆಂಗಳೂರು:** ಪ್ರಿಯಾಂಕ್ ಖರ್ಗೆ ತವರು ಜಿಲ್ಲೆ ಕಲಬುರಗಿಯ ಕಾಂಗ್ರೆಸ್ ಶಾಸಕರ ಶಾಲೆಯಲ್ಲೇ ಆರ್ ಎಸ್‌ಎಸ್ ಬೈಠಕ್ ನಡೆಸಿರುವುದು ಪ್ರಿಯಾಂಕ್‌ಗೆ ಮುಖಭಂಗ ಆದಂತಾಗಿದೆ.

ಕಾಂಗ್ರೆಸ್ ಶಾಸಕ ಎಂವೈ ಪಾಟೀಲ್ ಒಡೆತನದ ಮಹಾಂತೇಶ್ವರ ವಿದ್ಯಾವರ್ಧಕ ಶಿಕ್ಷಣ ಪುಟ 2ಕ್ಕೆ

## ಕೋಲ್ಡ್ರಿಫ್ ಕಂಪನಿ ಬಂದ್

**ಚೆನ್ನೈ:** ವಿಷಯುಕ್ತ ಕೋಲ್ಡ್ರಿಫ್ ಕೆಮ್ಮಿನ ಸಿರಪ್ ತಯಾರಕರಾದ ಸ್ರೆಸನ್ ಫಾರ್ಮಾ ಕಂಪನಿಯ ಉತ್ಪಾದನಾ ಪರವಾನಗಿಯನ್ನು ರದ್ದುಗೊಳಿಸಲಾಗಿದೆ. ಅಲ್ಲದೇ ಕಂಪನಿಯನ್ನು ಮುಚ್ಚಲು ತಮಿಳುನಾಡು ಸರ್ಕಾರ ಆದೇಶಿಸಿದೆ.



ರಾಜ್ಯ ಔಷಧ ನಿಯಂತ್ರಣ ಇಲಾಖೆ ಅಧಿಕಾರಿಗಳು ತಪಾಸಣೆ ನಡೆಸಿದಾಗ ಕೆಮ್ಮಿನ ಸಿರಪ್‌ನಲ್ಲಿ ಶೇ.48.6 ರಷ್ಟು ಡೈಎಥಿಲೀನ್ ಗ್ಲೈಕಾಲ್ ಅಂಶವಿರುವುದು ಪತ್ತೆಯಾಗಿದೆ. ಈ ಔಷಧಿ ಮಧ್ಯಪ್ರದೇಶದ ಮಕ್ಕಳ ಸಾವಿಗೂ ಕಾರಣವಾಗಿದೆ. ಸ್ರೆಸನ್ ಫಾರ್ಮಾಸ್ಯುಟಿಕಲ್ಸ್ ಔಷಧ ತಯಾರಿಕಾ ಪರವಾನಗಿಯನ್ನು ಸಂಪೂರ್ಣವಾಗಿ ರದ್ದುಗೊಳಿಸಲಾಗಿದೆ. ಕಂಪನಿಯನ್ನು ಮುಚ್ಚಲಾಗಿದೆ. ತಮಿಳುನಾಡಿನ ಇತರ ಔಷಧ ತಯಾರಿಕಾ ಕಂಪನಿಗಳ ವಿವರವಾದ ತಪಾಸಣೆ ನಡೆಸಲು ಆದೇಶ ನೀಡಲಾಗಿದೆ ಎಂದು ರಾಜ್ಯ ಸರ್ಕಾರ ತಿಳಿಸಿದೆ.

## ನಿಮ್ಮ ಮುಖಕ್ಕೆ ಹೊಡಿತಿನಿ!

**ಮಾಗಡಿ:** ನಿಮ್ಮ ಯೋಗ್ಯತೆಗೆ ರೈತರ ಕೆಲಸವನ್ನು ಸರಿಯಾಗಿ ಮಾಡುವುದಕ್ಕೆ ಆಗುವುದಿಲ್ಲವೆ? ಹೀಗೆ ಮಾಡಿದರೆ ನಿಮ್ಮ ಮುಖಕ್ಕೆ ಹೊಡಿತಿನಿ. ನಿಮ್ಮಿಂದಾಗಿ ಜನ ನಮ್ಮ ಮುಖಕ್ಕೆ ಉಗಿಯುತ್ತಿದ್ದಾರೆ ಎಂದು ಅಧಿಕಾರಿಗಳಿಗೆ ಶಾಸಕ ಎಚ್.ಸಿ.ಬಾಲಕೃಷ್ಣ ತರಾಟೆಗೆ ತೆಗೆದಿಕೊಂಡಿದ್ದಾರೆ.



**ಕೆಲಸ ಮಾಡದ ಅಧಿಕಾರಿಗಳಿಗೆ ಶಾಸಕ ಬಾಲಕೃಷ್ಣ ಧಮ್ಕಿ**

ನಗರದಲ್ಲಿ ಸೋಮವಾರ ನಡೆದ ಜನಸಂಪರ್ಕ ಸಭೆಯಲ್ಲಿ ತಹಶೀಲ್ದಾರ್ ಮತ್ತು ಭೂ ದಾಖಲೆಗಳ ಸಹಾಯಕ ನಿರ್ದೇಶಕರಿಗೆ ನಿಮ್ಮ ಮುಖಕ್ಕೆ ಹೊಡಿತಿನಿ ಎಂದು ಎಚ್ಚರಿಕೆ ನೀಡಿದರು. ನಿಮ್ಮ ಘನ ಕಾರ್ಯಕ್ಕೆ ಇಬ್ಬರನ್ನೂ ರಸ್ತೆಯಲ್ಲಿ ನಿಲ್ಲಿಸಿ ಹಾರ ಹಾಕಿ ಸನ್ಮಾನ ಮಾಡ್ತಿನಿ. ರೈತರ ವಿಷಯದಲ್ಲಿ ತಮಾಷೆ ಮಾಡುತ್ತಿದ್ದೀರಾ ಎಂದು ತರಾಟೆಗೆ ತೆಗೆದುಕೊಂಡರು.

ಪೋಡಿ ದುರಸ್ತಿಗೆ ಅರ್ಜಿ ಕೊಟ್ಟು ತಿಂಗಳುಗಳಾದರೂ ಅಧಿಕಾರಿಗಳು ಕೆಲಸ ಮಾಡದೆ ನಿರ್ಲಕ್ಷ್ಯ ತೋರುತ್ತಿದ್ದಾರೆ ಎಂದು ರೈತರು ಅಳಲು ತೋಡಿಕೊಂಡರು. ಆಗ ಪಕ್ಕದಲ್ಲಿದ್ದ ತಹಶೀಲ್ದಾರ್ ಶರತ್ ಕುಮಾರ್ ಅವರನ್ನು ಬಾಲಕೃಷ್ಣ ವಿಚಾರಿಸಿದಾಗ, ಅವರು ಭೂದಾಖಲೆಗಳ ಇಲಾಖೆ ಸಹಾಯಕ ನಿರ್ದೇಶಕ ಆನಂದಕುಮಾರ್

## ಶಾಸಕರ ಅಭಿಪ್ರಾಯ ಪಡೆದೇ ಸಿಎಂ ಆಯ್ಕೆ: ಪರಮೇಶ್ವರ್

**ಬೆಂಗಳೂರು:** ಶಾಸಕರ ಅಭಿಪ್ರಾಯ ಪಡೆದೇ ಹೈಕಮಾಂಡ್ ಸಿಎಂ ಆಯ್ಕೆ ಮಾಡುತ್ತದೆ ಎಂದು ಗೃಹ ಸಚಿವ ಪರಮೇಶ್ವರ್ ತಿಳಿಸಿದರು. ಈ ಮೂಲಕ ಡಿಸಿಎಂ ಡಿ.ಕೆ.ಶಿವಕುಮಾರ್ ಹೇಳಿಕೆಗೆ ತಿರುಗೇಟು ನೀಡಿದ್ದಾರೆ.

ಸಿಎಂ ಆಯ್ಕೆಗೆ ಶಾಸಕರ ಬಲ ಬೇಡ ಹೈಕಮಾಂಡ್ ತೀರ್ಮಾನ ಸಾಕು ಎಂಬ ಡಿಸಿಎಂ ಡಿ.ಕೆ ಶಿವಕುಮಾರ್ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ ಅವರು, ನಮ್ಮಲ್ಲಿ ಒಂದು ನಿಯಮ ಇದೆ. ಒಂದು ಪಕ್ಷ ಆಯ್ಕೆ ಆದ ಮೇಲೆ ಸರ್ಕಾರ ಮಾಡುವಾಗ, ಸಿಎಲ್‌ಪಿ ಲೀಡರ್ ಅಂದರೆ ಮುಖ್ಯಮಂತ್ರಿ ನೇಮಕ ಮಾಡುವಾಗ ಶಾಸಕರ ಅಭಿಪ್ರಾಯ ಕೇಳಲು ಹೈಕಮಾಂಡ್ ವೀಕ್ಷಕರು ಬರುತ್ತಾರೆ. ಅವರು ಶಾಸಕರ ಅಭಿಪ್ರಾಯ ತಗೊಂಡು ಹೈಕಮಾಂಡ್‌ಗೆ ತಿಳಿಸುತ್ತಾರೆ. ಯಾರ ಪರ ಎಷ್ಟು ಜನ ಇದ್ದಾರೆ ಎಂದು ಹೇಳುತ್ತಾರೆ. ಯಾರಿಗೆ ಸಿಎಂಗೆ ಮೆಜಾರಿಟಿ ಬಂದಿದೆ ಎಂದು ಆ ನಂತರ ಹೆಸರು ಘೋಷಣೆ ಮಾಡುತ್ತಾರೆ ಎಂದರು. ಸಿದ್ದರಾಮಯ್ಯ ಅವರನ್ನು ಆಯ್ಕೆ ಮಾಡಿದ್ದು ಸಹ ಇದೇ ರೀತಿಯಲ್ಲಿ. ಹಿಂದೆ ಎಸ್.ಎಂ ಕೃಷ್ಣ

## ಸಿಬಿಐ ತನಿಖೆಗೆ ಸುಪ್ರೀಂ ಆದೇಶ

### ಕರೂರ್ ಕಾಲ್ತುಳಿತ ಪ್ರಕರಣ: ತ್ರಿಸದಸ್ಯ ಸಮಿತಿ ನೇಮಕ

**ನವದೆಹಲಿ:** ಕರೂರ್ ಕಾಲ್ತುಳಿತ ಪ್ರಕರಣದ ತನಿಖೆಯನ್ನು ಸುಪ್ರೀಂ ಕೋರ್ಟ್ ಸೋಮವಾರ ಸಿಬಿಐಗೆ ವಹಿಸಿ ಆದೇಶಿಸಿದೆ.

ಟಿವಿಕೆ ಮುಖ್ಯಸ್ಥ ಮತ್ತು ನಟ ವಿಜಯ್ ಅವರ ಸೆಪ್ಟೆಂಬರ್ 27ರಂದು ನಡೆದ ಬೃಹತ್ ಕಾರ್ಯಕ್ರಮದಲ್ಲಿ ಸಂಭವಿಸಿದ ಕಾಲ್ತುಳಿತ ಘಟನೆಯಲ್ಲಿ 41 ಜನರು ಸಾವನ್ನಪ್ಪಿದ್ದರು. ನ್ಯಾ. ಜೆಕೆ ಮಹೇಶ್ವರಿ ಮತ್ತು ನ್ಯಾ. ಎನ್ ವಿ ಅಂಜಾರಿಯಾ ಅವರಿದ್ದ ಪೀಠ, ದುರಂತದ ಬಗ್ಗೆ ನಿಷ್ಪಕ್ಷಪಾತ ತನಿಖೆ ನಡೆಯುವುದನ್ನು ಖಾತ್ರಿಪಡಿಸಿಕೊಳ್ಳುವುದಕ್ಕಾಗಿ ಸಿಬಿಐ ತನಿಖೆಯ ಮೇಲ್ವಿಚಾರಣೆಗಾಗಿ ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ಅಜಯ್ ರಸ್ತೋಗಿ ನೇತೃತ್ವದ ತ್ರಿಸದಸ್ಯ ಸಮಿತಿಯನ್ನೂ ರಚಿಸಿದೆ.

ಇದಕ್ಕೂ ಮೊದಲು, ಕರೂರ್ ಕಾಲ್ತುಳಿತದ ತನಿಖೆಗೆ ಸಂಬಂಧಿಸಿದಂತೆ ವಿಜಯ್ ಅವರ ಟಿವಿಕೆ (ತಮಿಳಗ ವೆಟ್ರಿ ಕಳಗಂ) ಮೃತರ ಎರಡು ಕುಟುಂಬಗಳು ಮತ್ತು ಇತರ ಪಕ್ಷಗಳು ಸಲ್ಲಿಸಿದ ವಿವಿಧ ಅರ್ಜಿಗಳ ಮೇಲಿನ ಆದೇಶವನ್ನು ಸುಪ್ರೀಂ



ಕೋರ್ಟ್ ಕಾಯ್ದಿರಿಸಿತ್ತು. ಎಲ್ಲಾ ಪಕ್ಷಗಳು ತನ್ನ ಮುಂದೆ ಮಾಡಿದ ವಿವರವಾದ ಸಲ್ಲಿಕೆಗಳನ್ನು ಆಲಿಸಿದ ನಂತರ, ನ್ಯಾಯಪೀಠವು ತನ್ನ ಆದೇಶವನ್ನು ಕಾಯ್ದಿರಿಸುವ ಮೊದಲು ಮೃತ ವ್ಯಕ್ತಿಗಳ ಪರವಾಗಿ ಕೇಂದ್ರ ಸಂಸ್ಥೆಯ ತನಿಖೆ ಕೋರಿ ಸಲ್ಲಿಸಲಾದ ಮನವಿಗಳಿಗೆ ಪ್ರತಿಕ್ರಿಯೆಯಾಗಿ ಅಫಿಡವಿಟ್ ಸಲ್ಲಿಸುವಂತೆ ತಮಿಳುನಾಡು ಸರ್ಕಾರವನ್ನು ಕೇಳಿದೆ.

ಕರೂರ್ ಕಾಲ್ತುಳಿತ ಪ್ರಕರಣದ ತನಿಖೆಗೆ ಸಂಬಂಧಿಸಿದಂತೆ ರಾಜ್ಯ ಪೊಲೀಸರ ಸ್ವಾತಂತ್ರ್ಯದ ಬಗ್ಗೆ ಅನುಮಾನಗಳನ್ನು ಪುಟ 2ಕ್ಕೆ

## ಗ್ಯಾರಂಟಿಗಳಿಂದ ಆರ್ಥಿಕ ಹೊರೆ ಹೆಚ್ಚಳ

### ಸರ್ಕಾರ ನಡೆಸುವುದೇ ಕಷ್ಟ | ಆರ್.ವಿ.ದೇಶಪಾಂಡೆ ಲೇವಡಿ

ಕಾರವಾರ: ನಾನು ಮುಖ್ಯಮಂತ್ರಿ ಆಗಿದ್ದರೆ ಪಂಚ ಗ್ಯಾರಂಟಿ ಯೋಜನೆಗಳನ್ನ ಅನುಷ್ಠಾನ ಮಾಡುತ್ತಿರಲಿಲ್ಲ ಎಂದು ಸ್ವಪಕ್ಷದ ಯೋಜನೆ ಕುರಿತು ಮಾಜಿ ಸಚಿವ ಆರ್.ವಿ ದೇಶಪಾಂಡೆ ಲೇವಡಿ ಮಾಡಿದ್ದಾರೆ.

ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳಿಂದ ಆರ್ಥಿಕ ಹೊರೆ ಆಗಿದೆ. ಜನರಿಗೆ ಅನುಕೂಲವಾಗಿರುವುದು ಒಂದೆಡೆಯಾದರೆ, ಇನ್ನೊಂದೆಡೆ ಸರ್ಕಾರ ನಡೆಸಲು ಕಷ್ಟವಾಗಿದೆ. ಮಹಿಳೆಯರು ಎಲ್ಲ ಸೌಲಭ್ಯಗಳನ್ನ ಪಡೆಯುತ್ತಿದ್ದಾರೆ. ಪುರುಷರಿಗೆ ಯಾವುದೇ ಯೋಜನೆ ಸಿಗುತ್ತಿಲ್ಲ. ಸರ್ಕಾರದ ಈ ಯೋಜನೆಗಳನ್ನ ಜನರಿಗೆ ತಲುಪಿಸಲು ಅನೇಕ ಸಮಿತಿಗಳನ್ನ ರಚಿಸಲಾಗಿದೆ. ಅವುಗಳನ್ನು ನಿಭಾಯಿಸುವುದೇ ಕಷ್ಟ ಆಗಿದೆ. ಪುಟ 2ಕ್ಕೆ




### ಉಲ್ಟಾ ಹೊಡೆದ ಆರ್.ವಿ

**ಬೆಂಗಳೂರು: ನಾನು ಸಿಎಂ ಆಗಿದ್ದರೆ ಪಂಚ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನ ಮಾಡುತ್ತಿರಲಿಲ್ಲ ಎಂದು ನೀಡಿದ್ದ ಹೇಳಿಕೆ ವಿವಾದವಾಗುತ್ತಿದ್ದಂತೆ ಮಾಜಿ ಸಚಿವ ಆರ್‌ವಿ ದೇಶಪಾಂಡೆ ಉಲ್ಟಾ** ಪುಟ 2ಕ್ಕೆ

### ದೇಶಪಾಂಡೆ ಸ್ಪಷ್ಟನೆ ಕೇಳಿದ ಸಿಎಂ

**ಬೆಂಗಳೂರು:** ನಾನು ಮುಖ್ಯಮಂತ್ರಿ ಆಗಿದ್ದರೆ ಗ್ಯಾರಂಟಿ ಯೋಜನೆ ಜಾರಿಗೆ ತರುತ್ತಿರಲಿಲ್ಲ ಎಂದು ಹೇಳಿಕೆ ನೀಡಿದ್ದ ಆರ್‌ವಿ ದೇಶಪಾಂಡೆ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ ಕೇಳಿದ್ದಾರೆ.

ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳ ಬಗ್ಗೆ ಕಳವಳ ವ್ಯಕ್ತಪಡಿಸಿದ್ದ ಅವರು, ಸರ್ಕಾರಿ ಬಸ್‌ಗಳು ಈಗ ಮಹಿಳೆಯರಿಗೆ ಮಾತ್ರ ಸೀಮಿತವಾಗಿದ್ದು, ಪುರುಷರಿಗೆ ಜಾಗವಿಲ್ಲದಂತಾಗಿದೆ ಎಂದು ಟೀಕಿಸಿದ್ದರು. ದೇಶಪಾಂಡೆ ಅವರಿಗೆ ಕರೆ ಮಾಡಿರುವ ಸಿಎಂ ಸಿದ್ದರಾಮಯ್ಯ ಅವರು, ತಮ್ಮ ಹೇಳಿಕೆಗೆ ಸಂಬಂಧಿಸಿದಂತೆ ಸ್ಪಷ್ಟನೆ ನೀಡುವಂತೆ ಸೂಚಿಸಿದ್ದಾರೆ. ಬೆಂಗಳೂರಿಗೆ ಬಂದ ಬಳಿಕ ಸ್ಪಷ್ಟನೆ ನೀಡುವುದಾಗಿ ಸಿಎಂಗೆ ದೇಶಪಾಂಡೆ ತಿಳಿಸಿದ್ದಾರೆ ಎನ್ನಲಾಗಿದೆ.



ದೇಶಪಾಂಡೆ ಹೇಳಿಕೆ ವಿಚಾರವಾಗಿ ಮಾತ ಪುಟ 2ಕ್ಕೆ

ಮೊದಲ ಪುಟದಿಂದ

## ಸಿಎಂ ಬದಲಿಸಲು ಶಾಸಕರ ಬೆಂಬಲವೂ ಅಗತ್ಯ

ಊಟಕ್ಕೆ ಕರೆಯುತ್ತೇನೆ. ಊಟಕ್ಕೆ ಕರೆದಿದ್ದರಲ್ಲಿ ಯಾವುದೇ ವಿಶೇಷವಿಲ್ಲ. ನಿಮಗೆ (ಪತ್ರಕರ್ತರಿಗೆ) ಹಾಗೂ ಬಿಜೆಪಿಯವರಿಗೆ ವಿಶೇಷವಾಗಿದೆ ಎಂದು ನಕ್ಕರು.

## ಆರ್‌ಎಸ್‌ಎಸ್ ವಿರುದ್ಧ ತ.ನಾಡು ಮಾದರಿ ಕ್ರಮ

ಅನುಮತಿ ನೀಡದಂತೆ ಪ್ರಿಯಾಂಕ್ ಖರ್ಗೆ ಪತ್ರ ಬರೆದಿದ್ದಾರೆ. ಪರಿಶೀಲಿಸಿ ಕ್ರಮಕೈಗೊಳ್ಳುವಂತೆ ಮುಖ್ಯ ಕಾರ್ಯದರ್ಶಿಗೆ ಸೂಚಿಸಿದ್ದೇನೆ ಎಂದರು.

ದೇವೇಗೌಡರ ಆರೋಗ್ಯ ಚೆನ್ನಾಗಿದೆ, ಚೇತರಿಕೆ ಆಗುತ್ತಿದೆ. ವೈದ್ಯ ಸತ್ಯನಾರಾಯಣ ಅವರ ಜೊತೆ ಮಾತನಾಡಿದ್ದೇನೆ. ಎರಡ್ಮೂರು ದಿನಗಳಲ್ಲಿ ಚೇತರಿಕೆ ಆಗುತ್ತಾರೆ ಎಂದಿದ್ದಾರೆ ಎಂದು ನುಡಿದರು.

## ಊಟಕ್ಕೆ ಸೇರುವುದೇ ಅಪರಾಧವೇ

ಬದಲಾವಣೆಯ ಮಾತು ದಟ್ಟವಾಗಿರುವ ಸಂದರ್ಭದಲ್ಲಿ ಈ ಔತಣಕೂಟವನ್ನು ಕರೆದಿದ್ದಾರೆ. ನವೆಂಬರ್‌ನಲ್ಲಿ ಕಾಂಗ್ರೆಸ್ ಸರ್ಕಾರ ತನ್ನ ಐದು ವರ್ಷಗಳ ಅವಧಿಯ ಅರ್ಧ ದಾರಿ ತಲುಪುತ್ತದೆ. ಈ ವೇಳೆ ರಾಜ್ಯದಲ್ಲಿ ಆಡಳಿತ ಬದಲಾವಣೆಯ ಬಗ್ಗೆ ಊಹಾಪೋಹಗಳು ಎದ್ದಿವೆ. ಈ ನಡುವೆಯೇ ಡಿನ್ನರ್ ಮೀಟ್ ಕೂಡ ಆಯೋಜಿಸಲಾಗಿದೆ ಹೀಗಾಗಿ ಇದನ್ನು ಕೆಲವರು ನವೆಂಬರ್ ಕ್ರಾಂತಿ ಎಂದು ವಿಶ್ಲೇಷಿಸುತ್ತಿದ್ದಾರೆ.

ಸಿದ್ದರಾಮಯ್ಯ ಮತ್ತು ಅವರ ಬೆಂಬಲಿಗರ ಪಾಳಯ ಸಂಪುಟ ಪುನರ್ ರಚನೆಗೆ ಒತ್ತಾಯಿಸುತ್ತಿದೆ. ಸರ್ಕಾರ ಎರಡು ವರ್ಷಗಳನ್ನು ಪೂರ್ಣಗೊಳಿಸಲಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳು ಸಂಪುಟ ಪುನರ್ ರಚನೆ ಮಾಡುವ ಸಾಧ್ಯತೆಯಿದೆ ಎಂದು ಹೇಳಲಾಗುತ್ತಿದೆ. ಸಿದ್ದರಾಮಯಯ್ಯ 5 ವರ್ಷಗಳ ಅಧಿಕಾರಾವಧಿಯನ್ನು ಮುಂದುವರಿಸುತ್ತಾರೆ ಎಂಬ ಸಂದೇಶ ನೀಡಲು ಸಜ್ಜಾಗುತ್ತಿದ್ದಾರೆ ಎನ್ನಲಾಗಿದೆ.

ಮುಖ್ಯಮಂತ್ರಿ ಕುರ್ಚಿಗೆ ಹಕ್ಕು ಸಾಧಿಸಲು ಕಾಯುತ್ತಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಈ ಕ್ರಮ ಹಿನ್ನಡೆಯಾಗಿ ಪರಿಣಮಿಸಬಹುದು. ರಾಜ್ಯದಲ್ಲಿ ಸಂಪುಟ ಪುನರ್ ರಚನೆ ಬಗ್ಗೆ ಹರಡಿರುವ ಊಹಾಪೋಹಗಳನ್ನು ಶಿವಕುಮಾರ್ ತಳ್ಳಿಹಾಕಿದ್ದಾರೆ. ಇದೊಂದು ವದಂತಿ ಎಂದು ಹೇಳಿದ್ದಾರೆ.

# ಮರಿಯಾಲ ಸಿಬಿಎಸ್‌ಇ ಶಾಲೆಯಲ್ಲಿ ಆಹಾರ ಮೇಳ

ಚಾಮರಾಜನಗರ, ನಗರದ ಸಮೀಪದ ಮರಿಯಾಲ ದಲ್ಲಿರುವ ಶ್ರೀ ಮುರುಘರಾಜೇಂದ್ರಸ್ವಾಮಿ ಸಿಬಿಎಸ್‌ಇ ಶಾಲೆಯಲ್ಲಿ ಆಹಾರ ಮೇಳ ನಡೆಯಿತು.



ಶಾಲೆಯ ಎಲ್ಲಾ ವಿದ್ಯಾರ್ಥಿಗಳು ತಂಡವಾಗಿ ಆಹಾರ ಮೇಳದಲ್ಲಿ ಭಾಗವಹಿಸಿ, ತಮಗೆ ಇಷ್ಟವಾದ ಬಗೆ ಬಗೆಯ ಆಹಾರಗಳನ್ನು ಶುಚಿ ರುಚಿಯಾಗಿ ತಯಾರಿಸಿ, ಪ್ರದರ್ಶನ ಮತ್ತು ಮಾರಾಟ ಮಾಡುವಲ್ಲಿ ಯಶಸ್ವಿಯಾದರು. ಸಿಬಿಎಸ್‌ಸಿ ಆಹಾರ ಮೇಳವನ್ನು ಶ್ರೀ ಮುರುಘರಾಜೇಂದ್ರಸ್ವಾಮಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಮಹದೇವಸ್ವಾಮಿ ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, ವಿದ್ಯಾರ್ಥಿಗಳು ಪಾಠ ಪ್ರವಚನಗಳ ಜೊತೆಗೆ ಇಂಥ ಆಹಾರ ಮೇಳಗಳಲ್ಲಿ ಭಾಗವಹಿಸುವ ಮೂಲಕ ಜೀವನ ಪಾಠವನ್ನು ಕಲಿಬೇಕಾಗುತ್ತದೆ. ಅಲ್ಲದೇ ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಎಲ್ಲಾ ರಂಗದಲ್ಲಿಯು ಸಹ ವಿದ್ಯಾರ್ಥಿ ಭಾಗವಹಿಸುವುದು ಮುಖ್ಯವಾಗಿರುತ್ತದೆ. ಆರೋಗ್ಯವಂತ ಜೀವನಕ್ಕೆ ನಾವು ಸೇವಿಸುವ ಆಹಾರವು ಸಹ ಮುಖ್ಯವಾಗಿತ್ತದೆ. ಊಟ ಬಲ್ಲವನಿಗೆ ರೋಗವಿಲ್ಲ ಎಂಬ ನಾಣ್ಣುಡಿಯಂತೆ ಶುಚಿ, ರುಚಿ ಹಾಗೂ ಉತ್ತಮ ಗುಣಮಟ್ಟದ ಅಹಾರಗಳನ್ನು ತಯಾರಿಸಲು ವಿದ್ಯಾರ್ಥಿಗಳು ಮುಂದಾಗಬೇಕು ಎಂದರು ಬಳಿಕ ವಿದ್ಯಾರ್ಥಿಗಳು ತಯಾರಿಸಿರುವ ಆಹಾರದ ಮಾದರಿಗಳನ್ನು ವೀಕ್ಷಿಸಿ ಅದರ ಸವಿರುಚಿಯನ್ನು ಸವಿದರು ನಂತರ ತೀರ್ಪುಗಾರರಾಗಿದ್ದ ಕಾಲೇಜಿನ ಉಪನ್ಯಾಸಕರಾದ ಮಹೇಂದ್ರ , ಶಂಭು, ಮಾನಸ ಹಾಗೂ ಸಿಬಿಎಸ್‌ಇ ಶಾಲೆಯ ನೆಲ್ಸನ್ ವಿನಯ್ ಕುಮಾರ್ ವಿದ್ಯಾರ್ಥಿಗಳು ತಯಾರಿಸಿದ ಆಹಾರದ ಮಾದರಿಗಳ ರುಚಿ ಯನ್ನು ನೋಡಿ ತೀರ್ಪು ನೀಡಿದರು. ಕಾಲೇಜಿನ ಪ್ರಾಂಶುಪಾಲ ಹೆಚ್. ಎಂ. ಗಿರೀಶ್ ಶಿಕ್ಷಕರು, ಶಿಕ್ಷಕೇತರ ವರ್ಗದವರು, ಪೊ?ಷಕರು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

**▸▸ ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗಿ, ವಿವಿಧ ಬಗೆಯ ಸವಿ ರುಚಿಯಾದ ಖಾದ್ಯಗಳ ತಯಾರಿಕೆ**

ಮೊದಲ ಪುಟದಿಂದ

## ಕೈ ಶಾಸಕರ ಶಾಲೆಯಲ್ಲಿ ಆರ್–ಎಸ್‌ಎಸ್ ಬೈಠಕ್!

ಸಂಸ್ಥೆಯ ಅನುದಾನಿತ ಶಾಲೆಯಲ್ಲಿ ಆರ್‌ಎಸ್‌ಎಸ್ ಬೈಠಕ್ ನಡೆದಿದೆ. ಶಾಲೆಯ ಆವರಣದಲ್ಲಿ ಆರ್‌ಎಸ್‌ಎಸ್ ಪಥಸಂಚಲನ, ಬೌದ್ಧಿಕ ಕಾರ್ಯಕ್ರಮ ಕೂಡ ನಡೆದಿದೆ.

ಆರ್‌ಎಸ್‌ಎಸ್ ಚಟುವಟಿಕೆ ನಿಷೇಧ ಕುರಿತು ಸಿಎಂಗೆ ಪ್ರಿಯಾಂಕ್ ಖರ್ಗೆ ಪತ್ರ ಬರೆದಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಶಾಸಕ ಎಂ.ವೈ.ಪಾಟೀಲ್, ನಮ್ಮ ಶಾಲೆ ಸಾರ್ವಜನಿಕರ ಸ್ವತ್ತು. ಎಲ್ಲಾ ಪಕ್ಷದವರಿಗೆ ಕಾರ್ಯಕ್ರಮ ಮಾಡಲು ಜಾಗ ಕೊಟ್ಟಿದ್ದೇವೆ ಎಂದು ಹೇಳಿದರು.

ರಾಷ್ಟ್ರೀಯ ಸ್ವಯಂಸೇವಕ ಸಂಘಕ್ಕೆ ನೂರು ವರ್ಷ ತುಂಬಿದ ಹಿನ್ನೆಲೆಯಲ್ಲಿ ರಾಜ್ಯದೆಲ್ಲೆಡೆ ಸಂಘದ ಪಥಸಂಚಲನ ನಡೆಯುತ್ತಿದೆ. ಕಾಂಗ್ರೆಸ್ ಶಾಸಕರೊಬ್ಬರ ಒಡೆತನದ ಶಾಲೆಯಲ್ಲೇ ಆರ್‌ಎಸ್‌ಎಸ್ ಕಾರ್ಯಕ್ರಮ ನಡೆದಿರುವುದನ್ನು ಉಲ್ಲೇಖಿಸಿ ಪ್ರಿಯಾಂಕ್ ಖರ್ಗೆ ಪತ್ರದ ಬಗ್ಗೆ ಸಾರ್ವಜನಿಕರು ವ್ಯಂಗ್ಯ ಮಾಡುತ್ತಿದ್ದಾರೆ.

## ಸಿಬಿಐ ತನಿಖೆಗೆ ಸುಪ್ರೀಂ ಆದೇಶ

ಹುಟ್ಟುಹಾಕಿದ್ದರೂ, ತನಿಖೆಯನ್ನು ವಿಶೇಷ ತನಿಖಾ ತಂಡ (ಎಸ್‌ಐಟಿ) ತನಿಖೆಗೆ ಆದೇಶಿಸುವ ಮದ್ರಾಸ್ ಹೈಕೋರ್ಟ್ ನಿರ್ಧಾರವನ್ನು ಟಿವಿಕೆ ಪ್ರಧಾನ ಕಾರ್ಯದರ್ಶಿ ಆಧವ್ ಅರ್ಜುನ ಮೂಲಕ ಪ್ರಶ್ನಿಸಿತ್ತು. ಈ ದುರಂತದ ಬಗ್ಗೆ ಸಮಗ್ರ ತನಿಖೆ ನಡೆಸಲು ಪೊಲೀಸ್ ಮಹಾನಿರ್ದೇಶಕರ ನೇತೃತ್ವದಲ್ಲಿ ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸುವಂತೆ ಮದ್ರಾಸ್ ಹೈಕೋರ್ಟ್ ಅ.3ರಂದು ಆದೇಶಿಸಿತ್ತು.

## ಉಲ್ಟಾ ಹೊಡೆದ ಆರ್.ವಿ

**ಹೊಡೆದಿದ್ದಾರೆ. ನನ್ನ ಮಾತುಗಳನ್ನು ತಪ್ಪಾಗಿ ಅರ್ಥೈಸಿ, ವಾಸ್ತವದ ವಿರುದ್ಧವಾಗಿ ಸುದ್ದಿ ಪ್ರಕಟವಾಗಿದೆ ಎಂದು ಹೇಳಿದರು. ಸಿದ್ದರಾಮಯ್ಯನವರು ಯಾವ ಯೋಜನೆಗಳನ್ನು ಘೋಷಿಸುತ್ತಾರೆ ಎಂಬುದು ನನಗೂ ಗೊತ್ತಿರುವುದಿಲ್ಲ. ಅವರು ಗ್ಯಾರಂಟಿ ಯೋಜನೆಗಳನ್ನು ಘೋಷಣೆ ಮಾಡಿ, ಒಳ್ಳೆಯ ಆಡಳಿತ ನೀಡುತ್ತಿರುವುದು ಅವರ ಶಕ್ತಿ. ಗ್ಯಾರಂಟಿ ಯೋಜನೆಗಳನ್ನು ಘೋಷಣೆ ಮಾಡಿರುವುದು ಜನಪರ ಮನೋಭಾವದಿಂದಾಗಿದೆ ಎಂದಿದ್ದಾರೆ.**

## ಗ್ಯಾರಂಟಿಗಳಿಂದ ಆರ್ಥಿಕ ಹೊರೆ ಹೆಚ್ಚಳ

ರಚಿಸಲಾಗಿದೆ. ಅವುಗಳನ್ನು ನಿಭಾಯಿಸುವುದೇ ಕಷ್ಟ ಆಗಿದೆ. ಹೀಗಾಗಿ ರಾಜ್ಯದಲ್ಲಿ ಅಭಿವೃದ್ಧಿಯ ವೇಗ ತಗ್ಗಿದೆ ಎಂದು ಟೀಕಿಸಿದರು.

ಇನ್ನೂ 5 ಕೆಜಿ ಅಕ್ಕಿ ಬದಲಿಗೆ ಸರ್ಕಾರದಿಂದ ಇಂದಿರಾ ಕಿಟ್ ಕೊಡುವ ನಿರ್ಧಾರ ಕುರಿತು ಮಾತನಾಡಿ, ಮುಖ್ಯಮಂತ್ರಿಗಳು ಇಂದಿರಾ ಕಿಟ್ ಕೊಡ್ತಾರೋ ತೆಂಗಿನಕಾಯಿ ಕೊಡ್ತಾರೋ ನಮಗೇ ಗೊತ್ತಿಲ್ಲ. ಸಿದ್ದರಾಮಯ್ಯ ಎಲ್ಲವನ್ನೂ ಕೊಡ್ತಾರೆ. ಅವರು ದೇವರಿದ್ದಂತೆ ಎಂದು ವ್ಯಂಗ್ಯವಾಡಿದ್ದಾರೆ.

## ಗೃಹ ಇಲಾಖೆಗೆ ಪತ್ರ ಬಂದರೆ ಪರಿಶೀಲಿಸಿ ಕ್ರಮ: ಪರಮೇಶ್ವರ್

ಮಾಡ್ತೇವೆ. ಅದರ ಸಾಧಕ ಬಾಧಕದ ಬಗ್ಗೆ ಚರ್ಚಿಸುತ್ತೇವೆ. ದೂರು ಬಂದರೆ ಮಾಡಬಹುದು. ವೈಯುಕ್ತಿಕವಾಗಿ ನನ್ನ ಅಭಿಪ್ರಾಯ ಯಾಕೆ ಹೇಳಬೇಕು ಎಂದು ಅವರು ಪ್ರಶ್ನಿಸಿದರು.

## ನಿಮ್ಮ ಮುಖಕ್ಕೆ ಹೊಡಿತಿನಿ!

ಅವರತ್ತ ಬೆರಳು ತೋರಿಸಿದರು. ಅವರು ಮತ್ತೆ ತಹಶೀಲ್ದಾರ್ ಅವರತ್ತ ಮುಖ ಮಾಡಿದರು.

ಇದರಿಂದ ಕೆರಳಿದ ಬಾಲಕೃಷ್ಣ, ನಿನ್ನ ಮೇಲೆ ಅವನು, ಅವನ ಮೇಲೆ ನೀನು ಹೇಳಿಕೊಂಡು ರೈತರ ಕೆಲಸ ಮಾಡದೆ ತಮಾಷೆ ಮಾಡುತ್ತಿದ್ದೀರಾ? ಇಬ್ಬರಿಗೆ ನಾಚಿಕೆ ಆಗುವುದಿಲ್ಲವೆ? ನಾವು ಕೊಡುವ ಗೌರವವನ್ನು ಉಳಿಕೊಳ್ಳುವ ಕೆಲಸ ಮಾಡಿ. ಈಗಲೇ ರೈತನ ದೂರು ಆಲಿಸಿ, ನಾಳೆಯೊಳಗೆ ಸಮಸ್ಯೆ ಬಗೆಹರಿಸಬೇಕು ಎಂದು ಸೂಚಿಸಿದರು.

# ಮಾರಿಷಷ್‌ನಲ್ಲಿ ವೈದ್ಯಕೀಯ ಕಾಲೇಜು

## ಜೆಎಸ್‌ಎಸ್ ಮೈಲಿಗಲ್ಲು, ಪ್ರಸಕ್ತ ವರ್ಷದಿಂದಲೇ ಪ್ರವೇಶ ಆರಂಭ: ರಾಜ್ಯದ ನಿವೃತ್ತ ಪ್ರಾಧ್ಯಾಪಕರ ನೇಮಕ, ವಿದೇಶದಲ್ಲಿ ಎಂಬಿಬಿಎಸ್ ಕೋರ್ಸ್ ತೆಗೆದು ಜೆಎಸ್‌ಎಸ್ ಸಾಧನೆ

ಮೈಸೂರು: ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿ (ಜೆಎಸ್‌ಎಸ್ ಎಎಚ್ ಇಆರ್) ಮಾರಿಷಸ್‌ನಲ್ಲಿ ಎಂಬಿಬಿಎಸ್ ಕೋರ್ಸ್ ಆರಂಭಿಸುತ್ತಿದ್ದು, ಅಂತಾರಾಷ್ಟ್ರೀಯ ವೈದ್ಯಕೀಯ ಶಿಕ್ಷಣದಲ್ಲಿ ಹೊಸ ಮೈಲಿಗಲ್ಲು ಸಾಧಿಸಿದೆ.

ಈ ಕುರಿತು ಚಾಮುಂಡಿಬೆಟ್ಟದ ತಪ್ಪಲಿನ ಸುತ್ತೂರು ಶಾಖಾ ಮಠದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಹ ಕುಲಪತಿ ಬಿ.ಸುರೇಶ್, ಮಾರಿಷಸ್‌ನಲ್ಲಿ ಎಂಬಿಬಿಎಸ್ ಕೋರ್ಸ್ ಆರಂಭಿಸಲು ಅಲ್ಲಿನ ಸರ್ಕಾರದ ಉನ್ನತ ಶಿಕ್ಷಣ ಆಯೋಗದಿಂದ ಅನುಮೋದನೆ ಸಿಕ್ಕಿದೆ. ಜೆಎಸ್‌ಎಸ್ ಸ್ಕೂಲ್ ಆಫ್ ಮೆಡಿಸಿನ್ ಸ್ಥಾಪನೆಗೆ ಅನುಮೋದನೆ ದೊರೆತಿದ್ದು, ಪ್ರಸಕ್ತ ವರ್ಷದಲ್ಲೇ ವಿದ್ಯಾರ್ಥಿಗಳ ಪ್ರವೇಶ ಪ್ರಾರಂಭಿಸಲಾಗುತ್ತಿದೆ. ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿಯ ದಿವ್ಯಸಂಕಲ್ಪ ಹಾಗೂ ದೂರದೃಷ್ಟಿಯ ಮಾರ್ಗದರ್ಶನದಿಂದ ಇದು ಸಾಧ್ಯವಾಗಿದೆ. ಅಧಿಕೃತ ಅಂಗೀಕಾರದೊಂದಿಗೆ, ಜೆಎಸ್‌ಎಸ್ ಮಹಾವಿದ್ಯಾಪೀಠ ಅಂತರಾಷ್ಟ್ರೀಯ ವೈದ್ಯಕೀಯ ಶಿಕ್ಷಣದಲ್ಲಿ ಮೈಲಿಗಲ್ಲು ಸ್ಥಾಪಿಸಿದಂತಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು. 100 ಸೀಟುಗಳ ಪ್ರವೇಶಕ್ಕೆ ಅಲ್ಲಿನ ಸರ್ಕಾರದಿಂದ ಅನುಮತಿ ದೊರೆತಿದೆ. ಇದೇ ನವೆಂಬರ್‌ನಲ್ಲಿ ಆರಂಭಿಸಲಾಗುವುದು. ನೀಟ್ (ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ) ಅರ್ಹತೆ ಇರುವವರು ಪ್ರವೇಶ ಪಡೆಯಬಹುದು. ಬೇರೆ ದೇಶದ ವಿದ್ಯಾರ್ಥಿಗಳು ಅಲ್ಲಿನ ಅರ್ಹತಾ ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು. ಎನ್‌ಎಂಸಿ (ನ್ಯಾಷನಲ್ ಮೆಡಿಕಲ್ ಕೌನ್ಸಿಲ್) ಮಾರ್ಗಸೂಚಿಯಂತೆ ಕೋರ್ಸ್ ನಡೆಸಲಾಗುವುದು. ಭಾರತೀಯ ಪಠ್ಯಕ್ರಮದಲ್ಲೇ ಬೋಧಿಸಲಾಗುವುದು. ಬೋಧಕರಲ್ಲಿ ಬಹುತೇಕರು ನಮ್ಮ ದೇಶದವರೇ ಇರುತ್ತಾರೆ. ಅಲ್ಲದೆ ಕ್ಲಿನಿಕಲ್ ತರಬೇತಿಯನ್ನೂ



ಕೊಡಲಾಗುವುದು. ಇದಕ್ಕೆ ಬೇಕಾದ ಸೌಕರ್ಯ, ಅತ್ಯಾಧುನಿಕ ವ್ಯವಸ್ಥೆ ಮಾಡಿಕೊಳ್ಳಲಾಗಿದೆ. ಜತೆಗೆ, ಎಫ್‌ಎಂಜಿ (ಫಾರಿನ್ ಮೆಡಿಕಲ್ ಗ್ರಾಜುಯೇಟ್) ಪರೀಕ್ಷೆಗೆ ಬೇಕಾಗುವ ತರಬೇತಿಯನ್ನೂ ನೀಡಲಾಗುವುದು. ಅಲ್ಲಿನ ಆರೋಗ್ಯ ಇಲಾಖೆ ಎಸ್‌ಎಸ್‌ಆರ್‌ಎನ್ ಆಸ್ಪತ್ರೆ, ಐದು ಪ್ರಾದೇಶಿಕ ಆಸ್ಪತ್ರೆಗಳು ಮತ್ತು ಹಲವು ಪ್ರಾಥಮಿಕ ಆರೋಗ್ಯ ಕೇಂದ್ರಗಳೊಂದಿಗೆ ಒಪ್ಪಂದ ಮಾಡಿಕೊಂಡಿದ್ದು, 600 ಹಾಸಿಗೆಗಳ ಸೌಲಭ್ಯವನ್ನು ನಮ್ಮ ಕಾಲೇಜಿನ ವಿದ್ಯಾರ್ಥಿಗಳ ಕ್ಲಿನಿಕಲ್ ತರಬೇತಿಗೆ ಒದಗಿಸಿದೆ ಎಂದರು. ಭಾರತದಿಂದ ವಿದ್ಯಾರ್ಥಿಗಳು ಹೊರ ದೇಶ ಗಳಿಗೆ ಎಂಬಿಬಿಎಸ್‌ಗಾಗಿ ತೆರಳುವುದು ಹಾಗೂ ಕೊರೊನಾ, ಯುದ್ಧದ ವೇಳೆ ಅಲ್ಲಿ ವಿದ್ಯಾಭ್ಯಾಸ ಪೂರ್ಣಗೊಳಿಸಲಾಗದೇ ವಾಪಸಾಗುವುದು ಗಮನಕ್ಕೆ ಬಂತು. ಹೀಗಾಗಿ ಮಾರಿಷಸ್ ಸರ್ಕಾರದ ಅನುಮೋದನೆಯೊಡನೆ ಸಂಸ್ಥೆಯ ಸುಸಜ್ಜಿತ ಕಟ್ಟಡ ಹಾಗೂ ಸೌಲಭ್ಯದಲ್ಲಿ ಎಂಬಿಬಿಎಸ್ ಶಿಕ್ಷಣ ಪ್ರಾರಂಭಿಸಲಾಗುತ್ತಿದೆ. ಭಾರತದ ವಿದ್ಯಾರ್ಥಿಗಳು ಹಾಗೂ ಅಲ್ಲಿನ ಭಾರತೀಯ ಮೂಲದವರು, ಇನ್ನಿತರರು ಇದರ ಪ್ರಯೋಜನ ಪಡೆಯಬಹುದಾಗಿದೆ ಎಂದರು.

### 2006ರಿಂದ ಪ್ರಾರಂಭ

ಮಾರಿಷಸ್‌ನಲ್ಲಿ 2006ರಲ್ಲಿ ಸ್ಥಾಪಿತವಾದ ಜೆಎಸ್‌ಎಸ್ ಅಕಾಡೆಮಿ ಆ ದೇಶದಲ್ಲಿ ಎಂಜಿನಿಯರಿಂಗ್ ಶಿಕ್ಷಣವನ್ನು ನೀಡಿದ ಮೊದಲ ಖಾಸಗಿ ಶಿಕ್ಷಣ ಸಂಸ್ಥೆಯಾಗಿದೆ. ಬಳಿಕ ಕಾರ್ಯವ್ಯಾಪ್ತಿ ವಿಸ್ತರಿಸಿಕೊಂಡು ಆರೋಗ್ಯ ವಿಜ್ಞಾನ, ಲೈಫ್ ಸೈನ್ಸ್ ಹಾಗೂ ಮ್ಯಾನೇಜ್‌ಮೆಂಟ್ ವಿಭಾಗದಲ್ಲಿ 9 ಯುಜಿ, ಪಿಜಿ ಕೋರ್ಸ್‌ಗಳನ್ನೂ ನಡೆಸುತ್ತಿದೆ. ಜೆಎಸ್‌ಎಸ್ ಎಜುಕೇಶನ್ ಫೌಂಡೇಷನ್ ಪ್ರೈ.ಲಿ ಇದನ್ನು ನಿರ್ವಹಿಸುತ್ತಿದೆ ಎಂದು ವಿವರಿಸಿದರು.

ಮಾರಿಷಸ್‌ನ ವಕೋಯಾಸ್ ಉಪನಗರದ ಬೋನ್‌ಟೇರ್‌ನಲ್ಲಿ 8 ಎಕರೆ ಪ್ರದೇಶದ ಕ್ಯಾಂಪಸ್‌ನ 14,689 ಚ.ಮೀ. ವಿಸ್ತೀರ್ಣದಲ್ಲಿ ಅಕಾಡೆಮಿಯ ಕಟ್ಟಡ ನಿರ್ಮಿಸಲಾಗಿದೆ. ಅಂತರರಾಷ್ಟ್ರೀಯ ದರ್ಜೆಯ ತರಗತಿ ಕೊಠಡಿಗಳು, ಪ್ರಯೋಗಾಲಯಗಳು, ಸಿಮ್ಯುಲೇಷನ್ ಮತ್ತು ಕೌಶಲ ತರಬೇತಿ, ಹಾಗೂ ವಸತಿ ಸೌಲಭ್ಯಗಳಿಗೆ ಅವಕಾಶ ಕಲ್ಪಿಸಲಾಗಿದೆ. ಪದವಿ ಪ್ರದಾನ ಅಧಿಕಾರ ಹೊಂದಿರುವ ಸಂಸ್ಥೆಯಾಗಿ 2018ರಲ್ಲಿ ನೋಂದಣಿಯಾಗಿದೆ. 12 ದೇಶಗಳ ವಿದ್ಯಾರ್ಥಿಗಳು ಈಗ ವ್ಯಾಸಂಗ ಮಾಡುತ್ತಿದ್ದಾರೆ ಎಂದು ಮಾಹಿತಿ ನೀಡಿದರು.

### ಜಾಗತಿಕ ಸ್ಥಾನಮಾನ

ಮಾರಿಷಸ್‌ನ ಜೆಎಸ್‌ಎಸ್ ಎಎಚ್‌ಇಆರ್ ಸಂಸ್ಥೆ 2024ರಲ್ಲಿ ಟೈಮ್ಸ್ ಹೈಯರ್ ಎಜುಕೇಶನ್ ಸಬ್–ಸಹಾರನ್ ಆಫ್ರಿಕಾದ ರ‍್ಯಾಂಕಿಂಗ್‌ನಲ್ಲಿ 81–100 ಶ್ರೇಣಿಯಲ್ಲಿದ್ದರೆ, ವಿದ್ಯಾರ್ಥಿ ಪಾಲ್ಗೊಳ್ಳುವಿಕೆ ವಿಭಾಗದಲ್ಲಿ ಪ್ರಥಮ ಸ್ಥಾನ ಪಡೆದಿದೆ. ಎಂಬಿಬಿಎಸ್ ಶಿಕ್ಷಣ ಮಾರಿಷಸ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರದಲ್ಲಿ ಗಮನ ಸೆಳೆಯಲಿದೆ. ಅಂತಾರಾಷ್ಟ್ರೀಯ ವಿದ್ಯಾರ್ಥಿಗಳನ್ನು ಆಕರ್ಷಿಸಿ ಮಾರಿಷಸ್‌ನ ಶಿಕ್ಷಣ ಕ್ಷೇತ್ರವನ್ನು ಸುಭದ್ರಗೊಳಿಸುತ್ತದೆ. ಆರೋಗ್ಯ ಶಿಕ್ಷಣ ಮತ್ತು ಸಂಶೋಧನೆಯಲ್ಲಿ ನವೀನತೆಗೆ ಉತ್ತೇಜನ ನೀಡಲಿದೆ ಎಂದು ಹೇಳಿದರು. ಗೋಷ್ಠಿಯಲ್ಲಿ ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯದರ್ಶಿ ಎಸ್.ಪಿ.ವ ಂಜುನಾಥ್, ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ.ಸಿ.ಜಿ.ಬೆಟಸೂರಮಠ, ನಿರ್ದೇಶಕ ಶಂಕರಪ್ಪ, ಜೆಎಸ್‌ಎಸ್‌ಎಎಚ್‌ಇಆರ್ ಉಪಕುಲಪತಿ ಬಸವನಗೌಡಪ್ಪ, ಕುಲಸಚಿವ ಡಾ.ಮಂಜುನಾಥ್ ಇದ್ದರು.

> **ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಮನವಿಯ ಮೇರೆಗೆ ಮಾರಿಷಸ್‌ನಲ್ಲಿ ನಮ್ಮ ಶಿಕ್ಷಣ ಸಂಸ್ಥೆ ಸ್ಥಾಪಿಸಲಾಯಿತು. ವಿದೇಶದಲ್ಲಿ ವೈದ್ಯಕೀಯ ಶಿಕ್ಷಣ ಪಡೆಯಬೇಕೆಂದು ಬಯಸುವ ಭಾರತದ ವಿದ್ಯಾರ್ಥಿಗಳಿಗೆ ಅನುವಾಗಲೆಂದು ಎಂಬಿಬಿಎಸ್ ಕೋರ್ಸ್ ಆರಂಭಿಸಲಾಗುತ್ತಿದ್ದು, ಮಾರಿಷಸ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಶಿಕ್ಷಣ ಹಾಗೂ ಆರೋಗ್ಯ ಕ್ಷೇತ್ರದಲ್ಲಿ ಕ್ರಾಂತಿಕಾರಿ ಹೆಜ್ಜೆಯಾಗಲಿದೆ.**
>
> ▸▸ **ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ,** ಸುತ್ತೂರು ಮಠ

> **ಮಾರಿಷಸ್‌ನಲ್ಲಿ ಬಹುತೇಕ ಮಂದಿ ಭಾರತೀಯ ಮೂಲದವರೇ ಆಗಿದ್ದಾರೆ. ಹೀಗಾಗಿ ಇಲ್ಲಿಂದ ಭಾರತೀಯರು ಹೋಗಿ ವಿದ್ಯಾಭ್ಯಾಸ ಮಾಡುವುದು ಕಷ್ಟದ ಕೆಲಸವಾಗದು. ಈ ಕೋರ್ಸ್‌ಗೆ ಮಾರಿಷಸ್ ಸರ್ಕಾರದಿಂದ ಅನುಮೋದನೆ ದೊರೆತಿದೆ. ಶುಲ್ಕ ಸಹಾ ಕಡಿಮೆ ಇರಲಿದೆ. ಅಕಾಡೆಮಿ ಎಂಬಿಬಿಎಸ್ ಪದವಿ ನೀಡಿದರೆ, ಅದಕ್ಕೆ ಎಲ್ಲೆಡೆ ಮಾನ್ಯತೆ ಇದೆ.**
>
> ▸▸ **ಡಾ.ಬಿ.ಸುರೇಶ್** ಸಹ ಕುಲಪತಿ, ಜೆಎಸ್‌ಎಸ್ ಎಎಸ್‌ಇಆರ್

ಮೊದಲ ಪುಟದಿಂದ

## ಪ್ರಿಯಾಂಕ್ ತಿರುಗೇಟು

ಅವರೊಂದಿಗೆ ಅಲ್ಲಿಗೆ ಆಗಮಿಸಿದ್ದರು. ಒಂದೋ ದೇಶದ ಕಾನೂನಿಗೆ ಬದ್ಧರಾಗಿರಿ ಅಥವಾ ಪರಿಣಾಮಗಳನ್ನು ಎದುರಿಸಲು ಸಿದ್ಧರಾಗಿರಿ ಎಂದು ಮಲ್ಲಿಕಾರ್ಜುನ ಖರ್ಗೆ ಅಂದು ನಿಮ್ಮನ್ನು ಎಚ್ಚರಿಸಿದ್ದರು ಎಂದು ತಿಳಿಸಿದ್ದಾರೆ.

## ಸ್ಪಷ್ಟನೆ ಕೇಳಿದ ಸಿಎಂ

ನಾಡಿದ ಗೃಹ ಸಚಿವ ಪರಮೇಶ್ವರ್, ಅವರು ಸಿಎಂ ಆದಾಗ ಬೇಕಿದ್ದರೆ ಗ್ಯಾರಂಟಿ ನಿಲ್ಲಿಸಲಿ. ಅಭಿವೃದ್ಧಿ ಕುಂಠಿತವಾಗಿರುವುದು ಎಲ್ಲಿ? ಅಭಿವೃದ್ಧಿ ಕಾಮಗಾರಿಗೆ ಸಿಎಂ ಚಾಲನೆ ನೀಡುತ್ತಿದ್ದಾರೆ. ನಮ್ಮ ಜಿಲ್ಲೆಗೆ ಸಿಎಂ ಮೂರು ಬಾರಿ ಭೇಟಿ ನೀಡಿದ್ದಾರೆ. ಅದು ಸರ್ಕಾರದ ಅಭಿಪ್ರಾಯ ಅಲ್ಲ ಎಂದರು.

## ಶಾಸಕರ ಅಭಿಪ್ರಾಯ ಪಡೆದೇ ಸಿಎಂ ಆಯ್ಕೆ: ಪರಮೇಶ್ವರ್

ಅವರನ್ನು ಆಯ್ಕೆ ಮಾಡುವಾಗಲೂ ಇದೇ ರೀತಿ ಆಗಿತ್ತು. ಇವಾಗ್ಲೂ ಕೂಡ ಶಾಸಕರ ಅಭಿಪ್ರಾಯ ಪಡೆಯಬೇಕೆಂಬುದು ಪದ್ಧತಿ. ಇಲ್ಲ ಹೈಕಮಾಂಡ್ ತೀರ್ಮಾನ ತಗೊಳ್ತೇವೆ ಎಂದರೆ ಅದು ಅವರಿಗೆ ಬಿಟ್ಟಿದ್ದು. ಅದಕ್ಕೆ ನಾವು ಹೈಕಮಾಂಡ್ ತೀರ್ಮಾನ ಅನ್ನೋದು ಎಂದರು.

# ಡಿಸಿಎಂ ವಿರುದ್ಧ ಹೇಳಿಕೆ ನೀಡಿದ ಮುನಿರತ್ನ: ದೂರು

ಮೈಸೂರು: ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ಹುದ್ದೆಗೇರಲು ಸಿಎಂ ವಿರುದ್ಧ ಮಾಟಮಂತ್ರ ಪ್ರಯೋಗ ನಡೆಸಿದ್ದಾರೆಂದು ಸುಳ್ಳು ಮಾಹಿತಿ ಹರಡಿ ಸಮಾಜದಲ್ಲಿ ಅಶಾಂತಿ, ದ್ವೇಷ ಸೃಷ್ಟಿಸಲು ಹೊರಟಿರುವ ಶಾಸಕ ಮುನಿರತ್ನ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿ ನಗರದಲ್ಲಿ ನಗರ ಕಾಂಗ್ರೆಸ್ ಸಮಿತಿಯಿಂದ ದೂರು ನೀಡಲಾಯಿತು.



ನಗರ ಕಾಂಗ್ರೆಸ್ ವಕ್ತಾರ ಎಂ.ರಾಜೇಶ್ ನೇತೃತ್ವದಲ್ಲಿ ನಗರ ಪೊಲೀಸ್ ಉಪ ಆಯುಕ್ತೆ ಬಿಂದುಮಣಿ ಅವರಿಗೆ ದೂರು ನೀಡಿ ಮಾತನಾಡಿದ ಅವರು, ಅ.12ರಂದು ರಾಜರಾಜೇಶ್ವರಿ ನಗರದ ಶಾಸಕ ಮುನಿರತ್ನ ಸುದ್ದಿ ಮಾಧ್ಯಮಗಳಿಗೆ ನೀಡಿದ ಸಂದರ್ಶನದಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕೇರಳದಲ್ಲಿ ಮಾಟಮಂತ್ರ ಮಾಡಿ ಒಂದು ಕೋಣ ಮತ್ತು ಕಾಡುಹಂದಿಯನ್ನು ಬಲಿ ಕೊಟ್ಟಿದ್ದಾರೆ. ಇದರಿಂದ ಮುಖ್ಯಮಂತ್ರಿ ಸಿದ್ದರಾಮಯ್ಯರಿಗೆ ಗಂಡಾಂತರ ಕಾದಿದೆ ಎಂಬ ಅಸತ್ಯ ಮತ್ತು ಅವಹೇಳನಕಾರಿ ಹೇಳಿಕೆಯನ್ನು ನೀಡಿದ್ದಾರೆ.

ಇದರಿಂದಾಗಿ ರಾಜ್ಯದ ಜನಸಾಮಾನ್ಯರ ನಡುವೆ ತಪ್ಪು ಗ್ರಹಿಕೆ ಹಾಗೂ ಮೂಢನಂಬಿಕೆಗಳನ್ನು ಹುಟ್ಟಿಸುವಂತಹುದಾಗಿದೆ. ಸಮುದಾಯಗಳ ನಡುವೆ ದ್ವೇಷ ಮತ್ತು ಭಿನ್ನಾಭಿಪ್ರಾಯಗಳನ್ನು ಉಂಟುಮಾಡುವ ಅಪಾಯವನ್ನು ಉಂಟುಮಾಡುತ್ತದೆ. ಈ ಹಿನ್ನೆಲೆಯಲ್ಲಿ ಮುನಿರತ್ನ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು. ಅವರು ಮಾಡಿದ ಹೇಳಿಕೆಗೆ ಸಂಬಂಧಿಸಿದಂತೆ ಯಾವುದೇ ಪುರಾವೆ ಇದ್ದರೆ, ಅದನ್ನು ಮಾಧ್ಯಮದ ಮುಂದೆ ಪ್ರಕಟಿಸಬೇಕು. ಪುರಾವೆ ನೀಡದೆ ತಪ್ಪು ಮಾಹಿತಿ ಹರಡಿರುವುದರಿಂದ ಭಾರತೀಯ ನ್ಯಾಯ ಸಂಹಿತೆಗಳ ಸೆಕ್ಷನ್ ಅಡಿ ಕಾನೂನು ಕ್ರಮ ಜರುಗಿಸಬೇಕೆಂದು ಆಗ್ರಹಿಸಿದರು. ಲೋಕೇಶ್ ಕುಮಾರ್ ಮಾದಾಪುರ, ಕಾಳೇಗೌಡ ಕೆರ್ಗಳ್ಳಿ, ರದಿ ಉಲ್ಲಾಖಾನ್, ಸೈಯದ್ ಫಾರೂಕ್, ರಂಗಸ್ವಾಮಿ, ನಾಗೇಶ್, ಕೃಷ್ಣಪ್ಪ, ಮೋಹನ್ ಇನ್ನಿತರರು ಉಪಸ್ಥಿತರಿದ್ದರು.

**ಶ್ರೀ ಬನ್ನಿಮಹಾಕಾಳಿ ಅಮ್ಮನವರ ದೇವಾಲಯ**

# ದೇಗುಲ ನವೀಕರಣ ಕಾಮಗಾರಿಗೆ ಚಾಲನೆ

ರಾಮನಗರ: ನಗರದ ಪ್ರಧಾನ ದೇವತೆ ಶ್ರೀ ಬನ್ನಿಮಹಾಕಾಳಿ ಅಮ್ಮನವರ ದೇವಾಲಯವನ್ನು 26 ಲಕ್ಷ ರೂ ವೆಚ್ಚದಲ್ಲಿ ನವೀಕರಣ ಕಾಮಗಾರಿಗೆ ನಗರಸಭಾಧ್ಯಕ್ಷ ಕೆ.ಶೇಷಾದ್ರಿ (ಶಶಿ) ಚಾಲನೆ ನೀಡಿದರು.

ಕಾಮಗಾರಿಗೆ ಚಾಲನೆ ನೀಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ನಗರದ ಮಂಡಿಪೇಟೆಯಲ್ಲಿರುವ ಶ್ರೀ ಬನ್ನಿಮಹಾಕಾಳಿ ಅಮ್ಮನವರ ದೇವಾಲಯ ಪುರಾತನ ದೇವಾಲಯ. ಮುಜರಾಯಿ ವ್ಯಾಪ್ತಿಗೆ ಸೇರಿದ್ದು "ಸಿ" ವರ್ಗದ ದೇವಾಲಯವಾಗಿದೆ. ದೇವಾಲಯ ಒಳಾಂಗಣದಲ್ಲಿ ಗ್ರ್ಯಾನೈಟ್ ಅಳವಡಿಕೆ ಸೇರಿದಂತೆ ಕಲ್ಲು ಮಂಟಪ ನಿರ್ಮಿಸಲು ದೇವಾಲಯದ ಉಸ್ತುವಾರಿ ಸಮಿತಿ ಉದ್ದೇಶಿಸಿದೆ. ದೇವಾಲಯದ ಗರ್ಭಗುಡಿಗೆ ಯಾವುದೇ ತೊಂದರೆಯಾಗದಂತೆ ದೇವಾಲಯದ ಮೂಲ ವಿನ್ಯಾಸದಲ್ಲಿ ಯಾವುದೇ ಬದಲಾವಣೆಯಾಗದಂತೆ ಜೀರ್ಣೋದ್ಧಾರ ಮಾಡಲಾಗುತ್ತಿದೆ. ಒಳಭಾಗದ ಕಾಮಗಾರಿಗೆ ಇಂದು ಚಾಲನೆ ನೀಡಲಾಗಿದೆ. ಎಲ್ಲ ಕಾಮಗಾರಿ ನಿರ್ವಿಘ್ನವಾಗಿ ನಡೆಯಲು ತಾವು ಶ್ರೀ ಬನ್ನಿಮಹಾಕಾಳಿ ಅಮ್ಮನವರನ್ನು ಪ್ರಾರ್ಥಿಸಿರುವುದಾಗಿ ತಿಳಿಸಿದರು.



ಶಾಸಕ ಹೆಚ್.ಎ.ಇಕ್ಬಾಲ್ ಹುಸೇನ್ ಗ್ರ್ಯಾನೈಟ್ ನೀಡಿದ್ದಾರೆ. ದೇವಾಲಯದ ಎಲ್ಲ ಕೆಲಸಗಳು ಪೂರ್ಣವಾಗಬೇಕಾದರೆ ಸಾರ್ವಜನಿಕರು, ದಾನಿಗಳು, ಭಕ್ತರು ಸಹ ಉದಾರವಾಗಿ ತನು, ಮನ, ಧನ ನೆರವು ನೀಡಬೇಕು ಎಂದು ಮನವಿ ಮಾಡಿದರು.

ದೇವಾಲಯದ ಹಿಂಭಾಗದಲ್ಲಿರುವ ಪುರಾತನ ಭಾವಿಯನ್ನು ಸ್ವಚ್ಛತೆ ಮಾಡಿಕೊಡುವಂತೆ ಭಕ್ತರು ಮನವಿ ಮಾಡಿದ್ದಾರೆ ಎಂದ ಅವರು ದೇವಾಲಯದ ನವೀಕರಣಕ್ಕೆ ತಮ್ಮ ಸಹಕಾರ ನೀಡುವುದಾಗಿ ತಿಳಿಸಿದರು.

ಈ ವೇಳೆ ನಗರಸಭೆ ಸದಸ್ಯೆ ನಾಗಮ್ಮ, ಪ್ರಾಧಿಕಾರದ ಮಾಜಿ ಅಧ್ಯಕ್ಷ ಎಸ್.ಆರ್.ನಾಗರಾಜು, ನಿರ್ದೇಶಕ ಪ್ರವೀಣ್, ದೇವಾಲಯದ ಕರಗಧಾರಕ ಮೂರ್ತಿ, ಕನ್ವಿನರ್ ಮಧುರೈವೀರನ್, ಪ್ರಮುಖರಾದ ಮಣಿ, ದೀಪು, ಮಂಜು, ಚೇತನ್, ಪುನಿತ್ ಮತ್ತಿತರರು ಇದ್ದರು.

**ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಕೃಷ್ಣರಾಜನಗರ**
ಮೈಸೂರು – ಹಾಸನ ರಸ್ತೆ, ಕೆ.ಆರ್.ನಗರ, ತಾ, ಮೈಸೂರು ಜಿಲ್ಲೆ
**ದೂರವಾಣಿ:** 08223–262352, **ಇಮೇಲ್:** apmckrnagar@gmail.com

**ಸಂಖ್ಯೆ:** ಕೃಉಮಾಸ(ಕೃರಾನ)/533/2025–26 **ದಿನಾಂಕ:** 10.10.2025

**"ಟೆಂಡರ್ ಕಂ ಬಹಿರಂಗ ಹರಾಜು ಪ್ರಕಟಣೆ" – 4ನೇ ಕರೆ**

ಕೆ.ಆರ್.ನಗರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ತರಕಾರಿ ಮಾರುಕಟ್ಟೆ ಪ್ರಾಂಗಣದಲ್ಲಿರುವ 50 ಮೆ.ಟನ್ ಸಾಮರ್ಥ್ಯದ ಎಲೆಕ್ಟ್ರಾನಿಕ್ ತೂಕದ ಯಂತ್ರಕ್ಕೆ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ಮಾರುಕಟ್ಟೆ ಪ್ರಾಂಗಣದಲ್ಲಿ ಸವತ್ತಿನ ಹಂಚಿಕೆ ನಿಯಂತ್ರಣ) ನಿಯಮಗಳು 2004 ರ ಪ್ರಕಾರ ಲೀವ್ ಅಂಡ್ ಲೈಸನ್ಸ್ ಶುಲ್ಕದ ಆಧಾರದ ಮೇಲೆ ಟೆಂಡರ್–ಕಂ–ಬಹಿರಂಗ ಹರಾಜಿನ ಮೂಲಕ ಹಂಚಿಕೆ ಮಾಡಲು ಅರ್ಹ ಪೇಟೆ ಕಾರ್ಯಕರ್ತರು ಹಾಗು ಸಾರ್ವಜನಿಕರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

| ಕ್ರ.ಸಂ. | ಎಲೆಕ್ಟ್ರಾನಿಕ್ ತೂಕದ ಯಂತ್ರದ ವಿವರ | ಮಾಸಿಕ ಲೀವ್ ಅಂಡ್ ಲೈಸನ್ಸ್ ಶುಲ್ಕ | ಮುಂಗಡ ಠೇವಣಿ |
|---|---|---|---|
| 1 | ತರಕಾರಿ ಮಾರುಕಟ್ಟೆ ಪ್ರಾಂಗಣದಲ್ಲಿರುವ 50 ಮೆ.ಟ ಸಾಮರ್ಥ್ಯದ ಎಲೆಕ್ಟ್ರಾನಿಕ್ ತೂಕದ ಯಂತ್ರ | 25,213–00 | 50,426–00 |

**ಷರತ್ತು ಮತ್ತು ನಿಬಂಧನೆಗಳು**

1. **ದಿನಾಂಕ: 27/10/2025** ರ ಒಳಗಾಗಿ **ರೂ.500–00** ಗಳನ್ನು ಪಾವತಿಸಿ ಅರ್ಜಿ ಸಲ್ಲಿಸಿ ನೊಂದಣಿ ಮಾಡಿಕೊಳ್ಳತಕ್ಕದ್ದು, 2. ನೊಂದಣಿ ಪಡೆದ ಅರ್ಜಿದಾರರು ನಮೂನೆ 6 ರ ಅರ್ಜಿಯನ್ನು ಮುಚ್ಚಿದ ಲಕೋಟೆಯಲ್ಲಿ ಅರ್ಜಿ ಸಲ್ಲಿಸಲು ಕೊನೆಯ **ದಿನಾಂಕ : 31–10–2025 ಮಧ್ಯಾಹ್ನ 12–00 ಗಂಟೆಯವರೆಗೆ.** 3. ಬಹಿರಂಗ ಹರಾಜನ್ನು ಅದೇ **ದಿನಾಂಕ: 31–10–2025** ರ **ಮಧ್ಯಾಹ್ನ 03–00 ಗಂಟೆಗೆ** ಕೆ.ಆರ್.ನಗರದ ಸಮಿತಿಯ ಆಡಳಿತ ಕಛೇರಿಯಲ್ಲಿ ನಡೆಸಲಾಗುವುದು. 4. ಕಾರ್ಯದರ್ಶಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಕೆ.ಆರ್.ನಗರ ಇವರ ಹೆಸರಿನಲ್ಲಿ ಮುಂಗಡ ಠೇವಣಿಯ ಡಿ.ಡಿ. ಖರೀದಿಸಿ ಕೆ.ಆರ್.ನಗರದಲ್ಲಿ ನಗದಾಗುವಂತೆ ಪ್ರತ್ಯೇಕ ಲಕೋಟೆಯಲ್ಲಿರಿಸಿ ಟೆಂಡರ್ ಪೆಟ್ಟಿಗೆಯಲ್ಲಿ ಹಾಕುವುದು. 5. ಟೆಂಡರ್ ಪ್ರಕ್ರಿಯೆಯಲ್ಲಿ ಭಾಗವಹಿಸುವವರು ಕಡ್ಡಾಯವಾಗಿ ಟೆಂಡರ್ ಹಾಗೂ ಬಹಿರಂಗ ಹರಾಜು ಎರಡಲ್ಲೂ ಭಾಗವಹಿಸತಕ್ಕದ್ದು, ಒಂದರಲ್ಲಿ ಭಾಗವಹಿಸಿದರೆ ಪರಿಗಣಿಸಲಾಗುವುದಿಲ್ಲ. 6. ಹೆಚ್ಚಿನ ಷರತ್ತು ಹಾಗೂ ನಿಬಂಧನೆಗಳನ್ನು ಕಛೇರಿ ವೇಳೆಯಲ್ಲಿ ಪಡೆಯಬಹುದು.

ಸಹಿ/– ಕಾರ್ಯದರ್ಶಿ,
ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಕೆ.ಆರ್.ನಗರ

ಸಹಿ/– ಆಡಳಿತಾಧಿಕಾರಿ
ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಕೆ.ಆರ್.ನಗರ

DIPR/MYS/KAVITA/1072/25-26

# ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷರ ಆಯ್ಕೆ



ಕೆ.ಆರ್.ಪೇಟೆ: ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿ ನೇಮಕಗೊಂಡು, ಅಧಿಕಾರ ಸ್ವೀಕಾರ ಮಾಡಿ ಇದೇ ಮೊದಲ ಭಾರಿಗೆ ತವರೂರು ಕೆ.ಆರ್.ಪೇಟೆಗೆ ಆಗಮಿಸಿದ ತಾಲ್ಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, ಕೈಮಗ್ಗ ಅಭಿವೃದ್ಧಿ ನಿಗಮದ ರಾಜ್ಯಾಧ್ಯಕ್ಷ ಐಪನಹಳ್ಳಿ ಬಿ.ನಾಗೇಂದ್ರ ಕುಮಾರ್ ಅವರನ್ನು ಕಾಂಗ್ರೆಸ್ ಕಾರ್ಯಕರ್ತರು, ಅಭಿಮಾನಿಗಳು ಅದ್ದೂರಿ ಸ್ವಾಗತ ಕೋರಿದರು.

ತಾಲ್ಲೂಕಿನ ಗಡಿಭಾಗ ಅಶೋಕ್ ನಗರದ ಬಳಿ ಸ್ವಾಗತಿಸಿ, ಬೈಕ್ ರಾಲಿ ಮೂಲಕ ಕೆ. ಆರ್.ಪೇಟೆ ಪಟ್ಟಣದ ವರೆಗೆ ಮೆರವಣಿಗೆ ಮೂಲಕ ಬರಮಾಡಿಕೊಂಡು ಪ್ರವಾಸಿ ಮಂದಿರ ವೃತ್ತದಲ್ಲಿ ನಾಗೇಂದ್ರಕುಮಾರ್ ಅವರನ್ನು ಹೆಗಲಮೇಲೆ ಹೊತ್ತು, ಪಟಾಕಿ ಸಿಡಿಸಿ, ಸಾರ್ವಜನಿಕರಿಗೆ ಸಿಹಿ ವಿತರಣೆ ಮಾಡಿ ಸಂಭ್ರಮಾಚರಣೆ ಮಾಡಿದರು.

ನಂತರ ಪ್ರವಾಸಿ ಮಂದಿರದಲ್ಲಿ ಸಾವಿರಾರು ಅಭಿಮಾನಿಗಳಿಂದ ಅಭಿನಂದನೆ ಸ್ವೀಕಾರ ಮಾಡಿದರು. ತಾಲ್ಲೂಕು ಕಾಂಗ್ರೆಸ್ ಉಸ್ತುವಾರಿ ಸಿ. ಆರ್.ರಮೇಶ್, ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಎ.ಬಿ.ಕುಮಾರ್, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯರಾದ ವಿ.ಮಂಜೇಗೌಡ, ತಾಲ್ಲೂಕು ಬ್ಲಾಕ್ ಕಾಂಗ್ರೆಸ್ ಮಾಜಿ ಅಧ್ಯಕ್ಷ ಹಾಗೂ ಕಾಡಾ ನಿರ್ದೇಶಕರಾದ ರುಕ್ಮಾಂಗದ, ಜಿಲ್ಲಾ ಕುರುಬರ ಸಂಘಸ ಪ್ರಧಾನ ಕಾರ್ಯದರ್ಶಿ ಎಂ.ಜೆ.ಶಶಿಧರ್, ತಾಲ್ಲೂಕು ದರಖಾಸ್ತು ಕಮಿಟಿ ಸದಸ್ಯರಾದ ಬಸ್ತಿ ರಂಗಪ್ಪ, ಮಡುವಿನಕೋಡಿ ಕಾಂತರಾಜು, ತಾ.ಪಂ.ಮಾಜಿ ಸದಸ್ಯರಾದ ವಿನೂತ ಸುರೇಶ್, ಮೂಡನಹಳ್ಳಿ ನಾಗೇಂದ್ರ, ಪುರಸಭಾ ಅಧ್ಯಕ್ಷೆ ಪಂಕಜಪ್ರಕಾಶ್, ಉಪಾಧ್ಯಕ್ಷೆ ಸೌಭಾಗ್ಯ ಉಮೇಶ್, ಸದಸ್ಯರಾದ ಡಿ.ಪ್ರೇಮಕುಮಾರ್, ಪಿ.ಎಲ್.ಡಿ.ಬ್ಯಾಂಕ್ ನಿರ್ದೇಶಕ ಹೆಚ್.ಎ.ಕೃಷ್ಣೇಗೌಡ, ಕೆಡಿಪಿ ಸದಸ್ಯ. ಆಕಾಶ್, ಬೀರುವಳ್ಳಿ ಸೊಸೈಟಿ ಅಧ್ಯಕ್ಷ ನವೀನ್, ಆಲಂಬಾಡಿಕಾವಲು ಸೊಸೈಟಿ ಅಧ್ಯಕ್ಷ ಮೋಹನ್ ಭಾಗವಹಿಸಿದ್ದರು

# ಉಗ್ರಪ್ಪ ವಿರುದ್ಧ ಹೇಳಿಕೆಗೆ ಖಂಡನೆ



ಚಾಮರಾಜನಗರ : ಮಾಜಿ ಸಂಸದ ವಿ.ಎಸ್. ಉಗ್ರಪ್ಪ ವಿರುದ್ಧವಾಗಿ ಕುರುಬ ಸಮುದಾಯದ ಕೆಲವು ಮುಖಂಡರು ಅನಗತ್ಯ ಹೇಳಿಕೆ ನೀಡುತ್ತಿರುವುದುನ್ನು ವಾಲ್ಮೀಕಿ ಸಮಾಜ ಸೇವಾ ಸಮಿತಿ ರಾಜ್ಯಾಧ್ಯಕ್ಷ ಕೆಲ್ಲಂಬಳ್ಳಿ ಸೋಮನಾಯಕ ತೀವ್ರವಾಗಿ ಖಂಡಿಸಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಅವರು ಮಾತನಾಡಿ, ಈಗಾಗಲೇ ರಾಜ್ಯಾದ್ಯಂತ ಕುರುಬ ಸಮುದಾಯವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವಂತೆ ಸಮುದಾಯದ ಮುಖಂಡರು ಹೋರಾಟ ಮಾಡುತ್ತಿದ್ದಾರೆ. ಅದು ಸರಿಯಷ್ಟೆ. ಆದರೆ ಬೇರೆ ಸಮುದಾಯ ಒಬ್ಬ ವ್ಯಕ್ತಿಯ ಮೇಲೆ ವಿನಾಕಾರಣ ಹೇಳಿಕೆ ನೀಡುವ ಮೂಲಕ ಒಂದು ಸಮುದಾಯಕ್ಕೆ ನೋವು ಉಂಟು ಮಾಡುವ ಕೆಲಸವನ್ನು ಕುರುಬ ಸಮಾಜದ ಕೆಲ ಮುಖಂಡರು ಮಾಡುವುದು ಯಾರಿಗೆ ಒಳಿತಲ್ಲ ಎಂದರು.

ಎ.ಜಿ.ಹಾವನೂರು ಅವರು ನಾಯಕ ಸಮುದಾಯವನ್ನು ಎಸ್‌ಟಿಗೆ ಸೇರಿಸಲು ಹೋರಾಟ ಮಾಡಿದರು. ಅವರ ಹಾದಿಯಲ್ಲಿ ವಿ.ಎಸ್.ಉಗ್ರಪ್ಪ, ಸತೀಶ್ ಜಾರಕಿಹೊಳಿ ಸಮುದಾಯದ ಇತರರ ಮುಖಂಡರು ಹೋರಾಟ ಮಾಡಿಕೊಂಡು ಬಂದಿದ್ದಾರೆ ಹೊರತು ನಾಯಕ ಸಮುದಾಯ ಯಾರನ್ನು ಭಿಕ್ಷೆ ಕೇಳಿಲ್ಲ. ಯಾವುದೇ ಸರ್ಕಾರವನ್ನು ಭಿಕ್ಷೆ ಕೇಳಿಲ್ಲ. ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅವರು ಕೊಟ್ಟಿರುವ ಸಂವಿಧಾನಬದ್ಧವಾಗಿ ಎಸ್‌ಟಿ ಪಡೆದಿದ್ದೇವೆ ಹೊರತು ಯಾವ ಮುಖ್ಯಮಂತ್ರಿ, ಪ್ರಧಾನಿಯನ್ನು ಕೇಳಿಲ್ಲ ವಿ.ಎಸ್.ಉಗ್ರಪ್ಪ ಆಗಲಿ ಯಾರು ಕೂಡ ಹಿಂಬಾಗಿಲು ಮೂಲಕ ನಾಯಕ ಸಮುದಾಯ ಎಸ್‌ಟಿ ಪಡೆದಿಲ್ಲ. ಹೋರಾಟದ ಮೂಲಕ ನಾಯಕ ಸಮುದಾಯ ಎಸ್‌ಟಿ ಪಡೆದಿದೆ ಎಂದು ಹೇಳಿದರು.

# ರಕ್ತದಾನ ಶ್ರೇಷ್ಠ ದಾನ– ಪಟೇಲ್ ಸಿ ರಾಜು

ರಾಮನಗರ: ಅಗತ್ಯವಿದ್ದವರಿಗೆ ರಕ್ತದಾನ ಮಾಡುವುದರಿಂದ ಮತ್ತೊಂದು ಜೀವವನ್ನು ಉಳಿಸುವುದರ ಜೊತೆಗೆ ದಾನಿಯ ದೇಹಾರೋಗ್ಯಕ್ಕೂ ಒಳ್ಳೆಯದು ಎಂದು ನೇಗಿಲಯೋಗಿ ಸಮಾಜ ಸೇವಾ ಟ್ರಸ್ಟ್ ಜಿಲ್ಲಾ ಘಟಕದ ಅಧ್ಯಕ್ಷ ಪಟೇಲ್ ಸಿ. ರಾಜು ಹೇಳಿದರು.

ನಗರದ ನ್ಯೂ ಎಕ್ಸಪರ್ಟ್ ಕಾಲೇಜು ಅವರಣದಲ್ಲಿ ನೇಗಿಲಯೋಗಿ ಸಮಾಜ ಸೇವಾ ಟ್ರಸ್ಟ್ (ರಿ), ಬೆಂಗಳೂರು ದಕ್ಷಿಣ ಜಿಲ್ಲಾ ಘಟಕ, ಜೀವಾಮೃತ ರಕ್ತನಿಧಿ ಚನ್ನಪಟ್ಟಣ, ರೋಟರಿ ಸಿಲ್ಕ್ ಸಿಟಿ, ರಾಮನಗರ ಮತ್ತು ಲಯನ್ಸ್ ಸಿಲ್ಕ್ ಸಿಟಿ, ರಾಮನಗರ ಇವರುಗಳ ಸಂಯುಕ್ತ ಆಶ್ರಯದಲ್ಲಿ ನಡೆದ

ರಕ್ತದಾನ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ದಾನಗಳಲ್ಲೇ ಶ್ರೇಷ್ಠದಾನ ರಕ್ತದಾನ. ರಕ್ತವು ಬಹಳ ಅಮೂಲ್ಯವಾಗಿದ್ದು, ರಕ್ತಕ್ಕೆ ಪರ್ಯಾಯವಾದ್ದು ಇಲ್ಲಿ. ನೀವು ನೀಡಿದ ರಕ್ತ ಸಂಕಷ್ಟದಲ್ಲಿರುವ ರೋಗಿಯ ಜೀವ ಉಳಿಸಲು ನೆರವಾಗುತ್ತದೆ ಎಂದು ಹೇಳಿದರು.

ನ್ಯೂ ಎಕ್ಸಪರ್ಟ್ ಕಾಲೇಜಿನ ಸಂಸ್ಥಾಪಕ ಕಾರ್ಯದರ್ಶಿ ಆರ್. ರವಿಕುಮಾರ್ ಮಾತನಾಡಿ ಇತ್ತೀಚಿನ ದಿನಗಳಲ್ಲಿ ಕೆಲ ಯುವಕರು ಮದ್ಯ ಸೇವನೆ ಸೇರಿದಂತೆ ಹಲವಾರು ದುಶ್ಚಟಗಳಿಂದ ಅನಾರೋಗ್ಯಕ್ಕೆ ತುತ್ತಾಗುತ್ತಿದ್ದಾರೆ. ಚಟಗಳಿಗೆ ಬಲಿಯಾಗದೆ ಆರೋಗ್ಯವಂತರಾಗಿ ಬಾಳಬೇಕು. ಯುವಕರು ರಕ್ತದಾನ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ರಕ್ತದಾನ ಮಾಡುವಂತೆ ಕರೆ ನೀಡಿದರು. ಜೀವಾಮೃತ ರಕ್ತನಿಧಿಯ ಆಡಳಿತಾಧಿಕಾರಿ ಚಂದ್ರೇಗೌಡ ಮಾತನಾಡಿ ಒಂದು ಬಾರಿ ರಕ್ತದಾನದಿಂದ ನಾಲ್ಕು ಜೀವಗಳನ್ನು ಉಳಿಸಬಹುದು. ರಕ್ತದಾನ ಮಾಡಿದ 48 ಗಂಟೆಗಳ ಒಳಗೆ ದೇಹದಲ್ಲಿ ಕಳೆದು ಹೋದ ದ್ರವಾಂಶವು ಉತ್ಪತ್ತಿಯಾಗುತ್ತದೆ. ಆದ್ದರಿಂದ ಯುವಕರು ಹೆಚ್ಚಾಗಿ ರಕ್ತದಾನ ಮಾಡಲು ಮುಂದಾಗುವಂತೆ ಕರೆ ನೀಡಿದರು.

ಶಿಬಿರದಲ್ಲಿ ಸುಮಾರು 60 ಯೂನಿಟ್ ರಕ್ತ ಸಂಗ್ರವಾಯಿತು. ರೋಟರಿ ಸಿಲ್ಕ್ ಸಿಟಿ ಅಧ್ಯಕ್ಷ ಪ್ರಕಾಶ್, ಲಯನ್ಸ್ ಸಿಲ್ಕ್ ಸಿಟಿ ಅಧ್ಯಕ್ಷೆ ಶಾರದ, ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಬಿ.ಟಿ. ದಿನೇಶ್, ರೈತ ಮುಖಂಡ ಶಿವಕುಮಾರ್, ರೋಟರಿ ಸಿಲ್ಕ್ ಸಿಟಿ ಮಾಜಿ ಅಧ್ಯಕ್ಷ ಶ್ರೀಧರ್, ನೇಗಿಲಯೋಗಿ ಟ್ರಸ್ಟ್ ನ ಗಬ್ಬಾಡಿ ಕಾಡೇಗೌಡ, ನ್ಯೂ ಎಕ್ಸಪರ್ಟ್ ಕಾಲೇಜಿನ ಪ್ರಾಂಶುಪಾಲರು, ಉಪನ್ಯಾಸಕರು, ಮತ್ತು ಜೀವಾಮೃತ ರಕ್ತನಿಧಿಯ ಸಿಬ್ಬಂದಿವರ್ಗ ಹಾಜರಿದ್ದರು.



# ಕೆರೆಗಳಿಗೆ ನೀರು ತುಂಬಿಸಿ, ಅಂತರ್ಜಲ ವೃದ್ಧಿಗೆ ಒತ್ತು ಶಾಸಕ ಸಿ.ಪುಟ್ಟರಂಗಶೆಟ್ಟಿ

## ಹುರಳಿನಂಜನಪುರದಲ್ಲಿ 2 ಕೋಟಿ ರೂ. ವೆಚ್ಚದಲ್ಲಿ ಕೆರೆ ಅಭಿವೃದ್ಧಿಗೆ ಚಾಲನೆ



ಚಾಮರಾಜನಗರ, ನದಿ ಮೂಲಗಳಿಂದ ಕೆರೆಗಳಿಗೆ ನೀರು ತುಂಬಿಸಿ, ಅಂತರ್ಜಲ ವೃದ್ದಿಗೊಳಿಸಿ ಜನ ಜನಾನುಗಳಿಗೆ ಕುಡಿಯುವ ನೀರು ಕಲ್ಪಿಸುವ ಬಹುದ್ದೇಶದ ಯೋಜನೆಗಳ ಜಾರಿಗೆ ನಮ್ಮ ಸರ್ಕಾರ ಹೆಚ್ಚಿನ ಒತ್ತು ನೀಡುತ್ತಿದೆ ಎಂದು ಎಂಎಸ್‌ಐಎಲ್‌ನ ಅಧ್ಯಕ್ಷರು ಆದ ಶಾಸಕ ಸಿ. ಪುಟ್ಟರಂಗಶೆಟ್ಟಿ ತಿಳಿಸಿದರು.

ತಾಲೂಕಿನ ಹುಳಿನಂಜನಪುರ ಕೆರೆಯನ್ನು ಸಣ್ಣ ನೀರಾವರಿ ಇಲಾಖೆ ಹಾಗೂ ಕಾವೇರಿ ನೀರಾವರಿ ನಿಗಮದ ಸಹಯೋಗದಲ್ಲಿ 2 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿ ಪಡಿಸಿ, ಪೈಪ್‌ಲೈನ್ ಮೂಲಕ ನೀರು ತುಂಬಿಸುವ ಯೋಜನೆಗೆ ಗುದ್ದಲಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಅಂತರ್ಜಲ ಹೆಚ್ಚಿಸಲು ಈ ಹಿಂದೆ ನಮ್ಮ ಪಕ್ಷ ಅಧಿಕಾರದಲ್ಲಿದ್ದಾಗ ಸಚಿವರಾಗಿದ್ದ ದಿ. ಎಚ್.ಎಸ್. ಮಹದೇವಪ್ರಸಾದ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಚಾಲನೆ ನೀಡಿ, 20 ಕೆರೆಗಳಿಗೆ ನೀರು ತುಂಬಿಸಿದ್ದರು. ಇದರ ಪರಿಣಾಮ ಚಾ.ನಗರ ಕ್ಷೇತ್ರದ ಹಾಗೂ ಗುಂಡ್ಲುಪೇಟೆ ಕ್ಷೇತ್ರದ ಬಹುತೇಕ ಗ್ರಾಮಗಳ ಕೆರೆಗಳು ತುಂಬಿ ಅಂತರ್ಜಲ ಹೆಚ್ಚಳವಾಗಿ ಕುಡಿಯುವ ನೀರಿನ ಸಮಸ್ಯೆ ಇಲ್ಲವಾಗಿದೆ. ಅದೇ ಮಾದರಿಯಲ್ಲಿ ಸುತ್ತೂರಿನಿಂದ ಪೈಪ್‌ಲೈನ್ ಮೂಲಕ ಕೋಡಿಮೋಳೆ ಕೆರೆ ತುಂಬಿಸಿ ಅಲ್ಲಿಂದ ನಾಗವಳ್ಳಿ ಸೇರಿದಂತೆ ಅನೇಕ ಕೆರೆಗಳನ್ನು ತುಂಭಿಸುವ ಯೋಜನೆ ಪ್ರಗತಿಯಲ್ಲಿದೆ. ಇದರ ಒಂದು ಭಾಗವಾಗಿ ಹುಳಿನಂಜಪುರದ ಕೆರೆಯನ್ನು ತುಂಬಿಸಲು ಪೈಪ್ ಲೈನ್ ಹಾಗೂ ಕಾಲುವೆ ಮೂಲಕ ಕೆರೆಯನ್ನು ತುಂಬಿಸುವ ಯೋಜನೆ ಸಿದ್ದವಾಗಿದೆ. ಈ ಹಿನ್ನಲೆಯಲ್ಲಿ ಕೆರೆಯನ್ನು ಅಭಿವೃದ್ದಿಸಲು ಕ್ರಿಯಾ ಯೋಜನೆ ಸಲ್ಲಿಸಿ, 2 ಕೋಟಿ ರೂ. ಬಿಡುಗಡೆಯಾಗಿದೆ. ಕೆರೆಯ ಸುತ್ತಲು ಕಲ್ವಟ್ ನಿರ್ಮಾಣ, ಏರಿ ಅಭಿವೃದ್ಧಿ, ರಸ್ತೆ ನಿರ್ಮಾಣ ಮತ್ತು ಕೆರೆಯ ಅವರಣದಲ್ಲಿರುವ ಜಂಗಲ್ , ಹೂಳು ತೆಗೆಸಲು ಕ್ರಮ ವಹಿಸಲಾಗಿದೆ ಎಂದರು.

ಹುಳಿನಂಜನಪುರ ಕೆರೆ ತುಂಬಿದರೆ, ಕಾಗಲವಾಡಿ ಕೆರೆಗೆ ನೀರು ಹರಿದು ಹೋಗುತ್ತದೆ. ಇದರಿಂದ 600 ಎಕರೆ ಪ್ರದೇಶದಲ್ಲಿರುವ ಜಮೀನುಗಳಲ್ಲಿ ಕೃಷಿ ಪಂಪ್‌ಸೆಟ್‌ಗಳಲ್ಲಿ ಅಂತರ್ಜಲ ವೃದ್ಧಿಯಾಗುತ್ತದೆ. ಮಳೆ ಇಲ್ಲದೇ ಕೆರೆಗಳು ಬತ್ತಿ ಹೋದಾಗ, ಈ ಕೆರೆಗಳು ತುಂಬುತ್ತದೆ. ಹೀಗಾಗಿ ಗುತ್ತಿಗೆದಾರರರು ಗುಣಮಟ್ಟದ ಕಾಮಗಾರಿಯನ್ನು ನಿರ್ವಹಣೆ ಮಾಡಿ ಕೆರೆಯನ್ನು ತುಂಬಿಸಲು ಮುಂದಾಗಬೇಕು ಎಂದು ಪುಟ್ಟರಂಗಶೆಟ್ಟಿ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ನಿಗಮದ ಎಇಇ ಮಹೇಶ್, ಜೆಇ ಲೋಕೇಶ್, ಗ್ರಾ.ಪಂ. ಸದಸ್ಯೆ ಕಲಾವತಿ, ಚಂದಕವಾಡಿ ಹೋಬಳಿ ಪರಿಶಿಷ್ಟ ಜಾತಿ ವಿಭಾಗದ ರೈತ ಸಂಘದ ನಿರ್ದೇಶಕ ಯ.ಆರ್. ನಾಗರಾಜು, ಗುತ್ತಿಗೆದಾರ ಭಾಸ್ಕರ್, ಮುಖಂಡರಾದ ಬಸವಣ್ಣ, ಸಿದ್ದರಾಜು, ಡಾ.ಬಿ. ಆರ್. ಅಂಬೇಡ್ಕರ್ ಸಂಘದ ಅಧ್ಯಕ್ಷ ನಾಗೇಂದ್ರ, ಸುರೇಶ್‌ಬಾಬು ಹಾಗು ಪದಾಧಿಕಾರಿಗಳು, ಗ್ರಾಮಸ್ಥರು ಹಾಜರಿದ್ದರು.

### 2 ಕೋಟಿ ರೂ.ಗಳ ಅನುದಾನ

ಕರ್ನಾಟಕ ಸರ್ಕಾರ ಆರ್ಥಿಕ ಇಲಾಖೆಯ ಉಪ ನಿರ್ದೇಶಕ ಅರುಳ್‌ಕುಮಾರ್ ಮಾತನಾಡಿ, ನಮ್ಮ ಗ್ರಾಮದ ಕೆರೆ ತುಂಬಿಸಲು ಶಾಸಕರು ನಮ್ಮ ಮನವಿ ಯಂತೆ 2 ಕೋಟಿ ರು.ಗಳ ಅನುದಾನ ವನ್ನು ಬಿಡು ಗಡೆ ಮಾಡಿಸಿ, ಇಂದು ನಮ್ಮ ಗ್ರಾಮಕ್ಕೆ ಗುದ್ದಲಿಪೂಜೆ ಮಾಡಲು ಆಗಮಿಸಿದ್ದಾರೆ. ಅವರಿಗೆ ಗ್ರಾಮಸ್ಥರು ಹಾಗು ಈ ಭಾಗದ ರೈತರ ಪರವಾಗಿ ತುಂಬು ಹೃದಯ ಧನ್ಯವಾದಗಳನ್ನು ಸಲ್ಲಿಸುತ್ತೇವೆ. ಈ ಹಿಂದೆ ಕೆರೆಗಳನ್ನು ಅಭಿವೃದ್ದಿಪಡಿಸುವ ಕ್ರಿಯಾ ಯೋಜನೆ ಯಲ್ಲಿ ನಮ್ಮ ಗ್ರಾಮದ ಕೆರೆ ಕೈ ತಪ್ಪಿ ಹೋಗಿತ್ತು. ಇದನ್ನು ಮನಗಂಡು ನಾವು ಅನೇಕ ಬಾರಿ ಮನವಿ ಸಲ್ಲಿಸಿದ್ದೇವೆ. ಈಗ ಅದು ಫಲಪ್ರದವಾಗಿದೆ. ಕೆರೆ ಒತ್ತು ವರಿ ತೆರವು ಮತ್ತು ಗುಣಮಟ್ಟದ ಕಾಮಗಾರಿ ನಿರ್ವಹಣೆ ಮಾಡಲು ಸಹಕಾರ ನೀಡಬೇಕು ಎಂದರು.

# ಪತ್ರಕರ್ತರಿಗೆ ಉಚಿತ ಬಸ್‌ಪಾಸ್‌ಗೆ ಅರ್ಜಿ

ಮೈಸೂರು:–ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ತಾಲ್ಲೂಕು ಮಟ್ಟದ ಪತ್ರಕರ್ತರು ತಮ್ಮ ವೃತ್ತಿ ನಿರತ ಚಟುವಟಿಕೆಗಳ ಸಂಬಂಧ ತಮ್ಮ ಜಿಲ್ಲಾದ್ಯಂತ ಉಚಿತವಾಗಿ ಸಂಚರಿಸಲು ಅನುಕೂಲವಾಗುವಂತೆ ಉಚಿತ ಬಸ್ ಪಾಸ್ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪತ್ರಕರ್ತರು ತಾವು ಕಾರ್ಯನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಗಳಿಂದ ಸೇವಾ ಪ್ರಮಾಣಪತ್ರ, ಶಿಫಾರಸ್ಸು ಪತ್ರ ಮತ್ತು 11 ತಿಂಗಳುಗಳ ವೇತನಪತ್ರ (ಲೈನೇಜ್/ಸಂಭಾವನೆ/ಕಮೀ?ನ್ ಪಡೆದಿರುವ ದಾಖಲೆ) ಗಳನ್ನು ಅಥವಾ ವೇತನ ಜಮಾ ಆಗಿರುವ ಮಾಹಿತಿ ಇರುವಂತಹ ಬ್ಯಾಂಕ್ ಸ್ಟೇಟಮೆಂಟ್ ಲಗತ್ತಿಸಿ "ಸೇವಾಸಿಂಧು" ಪೋರ್ಟಲ್ **https://sevasindhu.karnataka.gov.in** ಮೂಲಕ ಆನ್ ಲೈನ್ ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು. ಆನ್ ಲೈನ್ ನಲ್ಲಿ ಸಲ್ಲಿಸಲಾದ ಅರ್ಜಿ ಮತ್ತು ಲಗತ್ತಿಸಲಾಗಿರುವ ದಾಖಲೆಗಳ ಒಂದು ಪ್ರತಿಯನ್ನು ಆಯಾ ಜಿಲ್ಲೆಯ ವಾರ್ತಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು. ಸ್ವೀಕೃತ ಅರ್ಜಿಗಳನ್ನು ಆಯ್ಕೆ ಸಮಿತಿಯ ಸಭೆಯಲ್ಲಿ ಪರಿಶೀಲಿಸಿ ಬಸ್ ಪಾಸ್ ಮಂಜೂರು ಮಾಡಲಾಗುತ್ತದೆ. ರಾಜ್ಯದ ಎಲ್ಲ ತಾಲ್ಲೂಕುಗಳ ಅರ್ಹ ಪತ್ರಕರ್ತರು ಕೂಡಲೇ "ಸೇವಾಸಿಂಧು" ಪೋರ್ಟಲ್ ಮೂಲಕ ಅರ್ಜಿಗಳನ್ನು ಸಲ್ಲಿಸುವುದರ ಮೂಲಕ ಈ ಸದುಪಯೋಗ ಪಡೆದುಕೊಳ್ಳಬಹುದು

# ಮತಗಳ್ಳತನ ವಿರುದ್ದ ಜನಜಾಗೃತಿ ಸಹಿ ಸಂಗ್ರಹಕ್ಕೆ ಚಾಲನೆ




ಗುಂಡ್ಲುಪೇಟೆ: ಗುಂಡ್ಲುಪೇಟೆ ಹಾಗೂ ಬೇಗೂರು ಬ್ಲಾಕ್ ಕಾಂಗ್ರೆಸ್ ವತಿಯಿಂದ ಮತಗಳ್ಳತನದ ವಿರುದ್ಧ ರಾಹುಲ್ ಗಾಂಧಿ ನಡೆಸುತ್ತಿರುವ ಜನಜಾಗೃತಿ ಹೊರಾಟಕ್ಕೆ ಬೆಂಬಲವಾಗಿ ಸಹಿ ಸಂಗ್ರಹ ಅಭಿಯಾನ ವನ್ನು ಶಾಸಕ ಎಚ್ ಎಂ ಗಣೇಶ್ ಪ್ರಸಾದ್ ಪಟ್ಟಣದ ಕಾಂಗ್ರೆಸ್ ಕಚೇರಿಯಲ್ಲಿ ಚಾಲನೆ ನೀಡಿದರು.

ನಂತರ ಮಾತನಾಡಿ ಬಿಜೆಪಿಯಲ್ಲಿ ಅಸಮಾಧಾನಗಳು ಹೆಚ್ಚಾಗಿದೆ ಅವರು ಕಾರ್ಯಕರ್ತರು ತಮ್ಮ ಅಸಮಾಧಾನವನ್ನು ಹೊರಹಾಕಿ ಕಾಂಗ್ರೆಸ್ ಕಡೆಗೆ ಬರುತ್ತಿದ್ದಾರೆ ಪಕ್ಷದಲ್ಲಿ ಯಾರನ್ನು ಸರಿಯಾಗಿ ಗಮನಿಸದೇ ಇರುವುದು ಮತ್ತು ಕಾರ್ಯ ಕಾರ್ಯಕರ್ತರನ್ನು ಕಡೆಗನಿಸುವುದರಿಂದ ನಮ್ಮ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾಗುತ್ತಿದ್ದಾರೆ ಭೀಮನಬೀಡು ಗ್ರಾಮದಲ್ಲಿ ಬಿಜೆಪಿಯಲ್ಲಿ ಅಸಮಾಧಾನಗೊಂಡಿದ್ದ ಹಲವಾರು ಬಿಜೆಪಿ ಕಾರ್ಯಕರ್ತರು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು ಸಭೆಗಳಿಗೆ ಮತ್ತು ಬಿಜೆಪಿ ಸಂಬಂಧಪಟ್ಟ ಪಕ್ಷಕ್ಕೆ ಸಂಬಂಧಪಟ್ಟ ಸಭೆಗಳಿಗೆ ನಮ್ಮನ್ನು ಆಹ್ವಾನಿಸುತ್ತಿಲ್ಲ ಎಂದು ಕಾರ್ಯಕರ್ತರು ಬೇಸರ ವರಹಾಕಿದ್ದಾರೆ.

ಅವರೇ ಬಂದು ನಮ್ಮ ಪಕ್ಷಕ್ಕೆ ಸೇರ್ಪಡೆಗೊಂಡಿದ್ದಾರೆ ಕೆರೆ ತುಂಬಿಸುವ ಯೋಜನೆ ಅಡಿ ಪ್ರತಿಭಟನೆ ನಡೆಸುತ್ತಿದ್ದಾರೆ ನಾವು ರೈತರನ್ನು ಕಡೆಗಣಿಸುತ್ತಿಲ್ಲ ಗಮನದಲ್ಲಿಟ್ಟುಕೊಂಡು ಕೆಲಸ ಮಾಡುತ್ತಿದ್ದೇವೆ ಯಂತ್ರದ ತಾಂತ್ರಿಕ ದೋಷದಿಂದ ತೊಂದರೆಯಾಗಿದೆ ಸಣ್ಣಪುಟ್ಟ ರಿಪೇರಿ ಬಂದರೆ ಸರಿಪಡಿಸಬಹುದು ಆದರೆ ಹೀಗೆ ಬಂದಿರುವ ಯಂತ್ರವನ್ನು ಸರಿಪಡಿಸಲು ಅದರದೇ ಆದ ಉಪಕರಣಗಳು ಸಿಗದೇ ಇರುವುದರಿಂದ ತಡವಾಗಿದೆ ಎಂದರು. ಈಗಾಗಲೇ ನಾನು ಸಂಬಂಧಪಟ್ಟ ಅಧಿಕಾರಿಗಳಿಗೆ ತುರ್ತಾಗಿ ಸರಿಪಡಿಸಲು ತಿಳಿಸಿದ್ದೇನೆ ಆ ಪ್ರಕ್ರಿಯೆ ನಡೆಯುತಿದ್ದು ಅದಷ್ಟು ಬೇಗ ಎಲ್ಲಾ ಕರೆಗಳನ್ನು ತುಂಬಿಸಲಾಗುವುದು ಎಂದರು. ಈ ಸಂದರ್ಭದಲ್ಲಿ ಚಾಮುಲ್ ನಿರ್ದೇಶಕ ನಂಜುಂಡಪ್ರಸಾದ್, ಮಾಜಿ ಕಾಡಾ ಅಧ್ಯಕ್ಷ ಹೆಚ್ ಎಸ್ ನಂಜಪ್ಪ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರುಗಳಾದ ಮುನಿರಾಜು, ಪಿ ಬಿ ರಾಜಶೇಖರ್, ಜಿ.ಪಂ ಮಾಜಿ ಉಪಾಧ್ಯಕ್ಷ ಕೆ ಎಸ್ ಮಹೇಶ್, ಪುರಸಭೆ ಅಧ್ಯಕ್ಷ ಶಶಿಧರ್ ದಿಪು, ಜಿ.ಪಂ ಮಾಜಿ ಸದಸ್ಯ ಕೆರೆಹಳ್ಳಿ ನವೀನ್, ಮಡಿವಾಳಪ್ಪ ಎಚ್ ಎನ್ ಬಸವರಾಜು, ಯುವ ಕಾಂಗ್ರೆಸ್ ನ ಅದರ್ಶ್, ಮೋಹನ್ ದಾಸ್, ಸಾಮಾಜಿಕ ಜಾಲತಾಣ ಅಧ್ಯಕ್ಷ ಮಣಿ ಮಡಹಳ್ಳಿ, ಸಾಹುಲ್, ಶಿವಕುಮಾರ್ ಭೀಮನಭೀಡು ಮತ್ತಿತರರಿದ್ದರು.

# ಸಂಗಮ ಸೌಹಾರ್ದ ಸಹಕಾರಿ ಸಂಘದ ನಿಯಮಿತ ಆಡಳಿಯ ಮಂಡಳಿಯ ಅಧ್ಯಕ್ಷರ ನೇಮಕ



ಚಾಮರಾಜನಗರ, ಸಂಗಮ ಸೌಹಾರ್ದ ಸಹಕಾರಿ ಸಂಘದ ನಿಯಮಿತ ಆಡಳಿಯ ಮಂಡಳಿಯ ನಿರ್ದೇಶಕರ ಸ್ಥಾನಗಳಿಗೆ ಚುನಾವಣೆ ಭಾನುವಾರ ನಡೆಯಿತು. 12 ಮಂದಿಯರು ನಿರ್ದೇಶಕರ ಚುನಾವಣೆಯಲ್ಲಿ ಅವಿರೋಧವಾಗಿ ಆಯ್ಕೆಯಾದರು.

ನಗರದ ಜೋಡಿರಸ್ತೆಯ ಪದ್ಮನಾಭ ವಠಾರದಲ್ಲಿ ಇರುವ ಕಛೇರಿಯಲ್ಲಿ ನಡೆದ ಸಂಗಮ ಸೌಹಾರ್ದ ಸಹಕಾರಿ ಸಂಘದ ನಿಯಮಿತ ಆಡಳಿಯ ಮಂಡಳಿಯ ಚುನಾವಣೆಯ ಅಧಿಕಾರಿಯಾಗಿ ಎಸ್,ಪಿ. ರವಿ ಪ್ರಸಾದ್ ಅವರು ನಿರ್ದೇಶಕರಾಗಿ ವೈ,ಎಸ್.ರಾಘವೇಂದ್ರ, ಸಿ.ಆರ್. ಚಂದ್ರಶೇಖರ್.ಸಿ.ಬಿ.ನಾಗರಾಜು, ವಿಶ್ವನಾಥ್.ಎನ್, ಸಿ.ಕೆ.ಪ್ರಭುಸ್ವಾಮಿ, ನಳಿನಿ, ರಾಜೇಶ್,.ಆರ್, ಸಿದ್ದರಾಜು, ಸಿದ್ದಮಲ್ಲಪ್ಪ, ರಶ್ಮಿ, ಅವರನ್ನು ಅವಿರೋದವಾಗಿ ಆಯ್ಕೆ ಮಾಡಲಾಯಿತು. ನಂತರ ಅಧ್ಯಕ್ಷರ ಹಾಗೂ ಉಪಾದ್ಯಕ್ಷರ ಚುನಾವಣೆಯನ್ನು ನಡೆಸಿ ಎಲ್ಲರ ಒಪ್ಪುಗೆ ಮೇರೆಗೆ ಅವಿರೋಧವಾಗಿ ಅಧ್ಯಕ್ಷರಾಗಿ ವೈ.ಎಸ್.ರಾಘವೇಂದ್ರ ಉಪಾಧ್ಯಕ್ಷರಾಗಿ ಚಂದ್ರಶೇಖರ್.ಸಿ.ಆರ್ ನೇಮಕ ಗೊಂಡರು. ಇವರಿಗೆ ಸಂಗಮ ಸೌಹಾರ್ದ ಸಹಕಾರಿ ಸಂಘದ ನಿಯಮಿತ ಆಡಳಿಯ ಮಂಡಳಿಯ ಸದಸ್ಯರು ಅಭಿನಂದನೆ ಸಲ್ಲಿಸಿದ್ದಾರೆ.

### ನೇರ ಸಂದರ್ಶನ

ಮೈಸೂರು:–ಅಂಚೆ ಜೀವವಿಮೆ ಹಾಗೂ ಗ್ರಾಮೀಣ ಅಂಚೆ ಜೀವ ವಿಮೆಯನ್ನು ಸಾರ್ವಜನಿಕರಿಗೆ ತಲುಪಿಸುವ ಸಲುವಾಗಿ ಏಜೆಂಟ್‌ಗಳ ನೇಮಕ ಮಾಡಿಕೊಳ್ಳಲು ಅಕ್ಟೋಬರ್ 27 ರಂದು ಬೆಳಗ್ಗೆ 11 ಗಂಟೆಗೆ ಹಿರಿಯ ಅಂಚೆ ಅಧೀಕ್ಷಕರ ಕಚೇರಿ, ಮೈಸೂರು ವಿಭಾಗ, ಯಾದವಗಿರಿ, ಇಲ್ಲಿ ನೇರ ಸಂದರ್ಶನವನ್ನು ಹಮ್ಮಿಕೊಳ್ಳಲಾಗಿದೆ.

ಯಾವುದೇ ನಿವೃತ್ತ ಜೀವವಿಮೆ ಸಲಹೆಗಾರರು., ಅಂಗನವಾಡಿ ಮಹಿಳಾ ಮಂಡಲ ಕಾರ್ಯಕರ್ತರು, ಸ್ತ್ರೀಶಕ್ತಿ ಸಂಘದ ಸದಸ್ಯರು, ನಿವೃತ್ತ ಶಿಕ್ಷಕರು, ಮಾಜಿ ಸೈನಿಕರು, ನಿರುದ್ಯೋಗಿ ಹಾಗೂ ಸ್ವಉದ್ಯೋಗಿ ಯುವಕ ಯುವತಿಯರು., ಮೈಸೂರು ನಗರ ಹಾಗೂ ಮೈಸೂರು ತಾಲೂಕು, ಹುಣಸೂರು, ಪಿರಿಯಾಪಟ್ಟಣ, ಎಚ್ ಡಿ ಕೋಟೆ ಹಾಗೂ ಕೆ ಆರ್ ನಗರ ತಾಲೂಕಿನಲ್ಲಿ ವಾಸಿಸುವ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬಹುದಾಗಿದೆ, ಅಭ್ಯರ್ಥಿಗಳು ಖಖಐಅ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.ವಯೋಮಿತಿ ಕನಿಷ್ಠ 18 ವರ್ಷಗಳು; ಗರಿಷ್ಠ ವಯೋಮಿತಿ ಇರುವುದಿಲ್ಲ. ನೇರ ಸಂದರ್ಶನದಲ್ಲಿ ಪಾಲ್ಗೊಳ್ಳಲು ಆಸಕ್ತ ಅಭ್ಯರ್ಥಿಗಳು ಅವರ ಬಯೋಡಾಟಾ/ ಜನ್ಮ ದಿನಾಂಕ ಧೃಡೀಕರಿಸುವ ದಾಖಲೆ (SSLC Marks card)/ ವಿಳಾಸದ ದಾಖಲೆ / ಅನುಭವ ವಿವರಗಳನ್ನು ಒಳಗೊಂಡ ಅರ್ಜಿ ಮತ್ತು ಸಂಬಂಧಪಟ್ಟ ಪ್ರಮಾಣ ಪತ್ರಗಳನ್ನು ತರಬೇಕು. ಹೆಚ್ಚಿನ ಮಾಹಿತಿಗಾಗಿ 0821 2417307 / 308 ನ್ನು

# ದಸರಾ ವಿದ್ಯುತ್ ದೀಪಾಲಂಕಾರಕ್ಕೆ ತೆರೆ



**ಮೈಸೂರು:** ನಾಡಹಬ್ಬ ಮೈಸೂರು ದಸರಾ ಮಹೋತ್ಸವದ ಆಕರ್ಷಣೆಯನ್ನು ಹೆಚ್ಚಿಸಿ, ಅಸಂಖ್ಯಾತ ಜನರ ಕಣ್ಮನಗಳನ್ನು ಸೆಳೆದ ವಿದ್ಯುತ್ ದೀಪಾಲಂಕಾರಕ್ಕೆ ಭಾನುವಾರ ಅದ್ದೂರಿ ತೆರೆಬಿದ್ದಿತು.

ವಿಶ್ವವಿಖ್ಯಾತ ದಸರಾ ಮಹೋತ್ಸವ ಆರಂಭಗೊಂಡ ಸೆ.22ರಿಂದ ಒಟ್ಟು 21 ದಿನಗಳವರೆಗೂ ಮೈಸೂರು ಮಾತ್ರವಲ್ಲದೇ ದೇಶ–ವಿದೇಶಗಳಿಂದ ಬಂದಿದ್ದ ಲಕ್ಷಾಂತರ ಪ್ರವಾಸಿಗರನ್ನು ಈ ಬಾರಿಯ ದಸರಾ ವಿದ್ಯುತ್ ದೀಪಾಲಂಕಾರ ಆಕರ್ಷಿಸಿತ್ತು. ಪ್ರತಿಬಾರಿಯಂತೆ ಈ ವರ್ಷವೂ ದೀಪಾಲಂಕಾರದ ನಿರ್ವಹಣೆ ಜವಾಬ್ದಾರಿ ಹೊತ್ತಿದ್ದ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಗಮಿತ(ಸೆಸ್ಕ್) ಹಿಂದಿನ ವರ್ಷಕ್ಕಿಂತಲ್ಲೂ ಅತ್ಯಂತ ಆಕರ್ಷಣೀಯವಾಗಿ ದೀಪಾಲಂಕಾರವನ್ನು ಮಾಡುವಲ್ಲಿ ಯಶಸ್ವಿಯಾಗಿತ್ತು.

**136 ಕಿಮೀ ದೀಪಾಲಂಕಾರ:** ದಸರಾ ಹಿನ್ನೆಲೆಯಲ್ಲಿ ಈ ಬಾರಿ ನಗರದ 136 ಕಿ.ಮೀ ವ್ಯಾಪ್ತಿಯ ರಸ್ತೆಗಳು ಹಾಗೂ 118 ವೃತ್ತಗಳಲ್ಲಿ ದೀಪಾಲಂಕಾರ ಮಾಡಲಾಗಿತ್ತು. ಇದರೊಂದಿಗೆ ನಗರದ ಪ್ರಮುಖ ಕಡೆಗಳಲ್ಲಿ ಎಲ್‌ಇಡಿ ಬಲ್ಬ್‌ಗಳಿಂದ ನಿರ್ಮಿಸಲಾದ 80 ವಿವಿಧ ಪ್ರತಿಕೃತಿಗಳು ದೀಪಾಲಂಕಾರದ ಅಂದವನ್ನು ಹೆಚ್ಚು ಮಾಡುವುದರ ಜತೆಗೆ ನೋಡುಗರನ್ನು ಆಕರ್ಷಿಸಿತ್ತು. ಸೆ.22ರಂದು ನಗರದ ಸಯ್ಯಾಜಿರಾವ್ ರಸ್ತೆಯಲ್ಲಿರುವ ಹಸಿರು ಚಪ್ಪರದ ಆವರಣದಲ್ಲಿ ನಡೆದ ಸಮಾರಂಭದಲ್ಲಿ ಇಂಧನ ಸಚಿವರಾದ ಕೆ.ಜೆ. ಜಾರ್ಜ್ ಅವರು ದೀಪಾಲಂಕಾರಕ್ಕೆ ವಿಧ್ಯುಕ್ತ ಚಾಲನೆಯನ್ನು ನೀಡಿದ್ದರು.

**ಕೊಲ್ಕತ್ತಾ ಲೈಟಿಂಗ್ ಮೆರಗು:** ದೀಪಾಲಂಕಾರದ ಆಕರ್ಷಣೆ ಹೆಚ್ಚಿಸುವ ಸಲುವಾಗಿ ಸೆಸ್ಕ್ ವತಿಯಿಂದ ಈ ಬಾರಿ ಸಾಕಷ್ಟು ಹೊಸತನದ ಪ್ರಯತ್ನಗಳನ್ನು ಮಾಡಲಾ ಗಿತ್ತು. ಅದರಂತೆ ಈ ಬಾರಿ ಕೊಲ್ಕತ್ತಾ ಮಾದರಿ ಲೈಟಿಂಗ್‌ಗಳನ್ನು ನಗರದ ಹಲವು ಕಡೆಗಳಲ್ಲಿ ಅಳವಡಿಸಲಾಗಿತ್ತು. ಇದರಿಂದಾಗಿ ನಗರದ ಹಲವು ಕಡೆಗಳಲ್ಲಿ ಬಣ್ಣಬಣ್ಣದ ದೀಪಗಳಿಂದ ಅಲಂಕೃತಗೊಂಡಿದ್ದ ರಸ್ತೆ ಹಾಗೂ ವೃತ್ತಗಳು ದಸರಾ ವಿದ್ಯುತ್ ದೀಪಾಲಂಕಾರದ ಮೆರಗು ಹೆಚ್ಚಿಸಿತ್ತು.

**ಅಗತ್ಯ ಸುರಕ್ಷತಾ ಕ್ರಮ:** ದಸರಾ ವಿದ್ಯುತ್ ದೀಪಾಲಂಕಾ ರದಲ್ಲಿ ಸೆಸ್ಕ್ ವತಿಯಿಂದ ಸುರಕ್ಷತೆಗೆ ಹೆಚ್ಚು ಆದ್ಯತೆ ನೀಡಲಾಗಿತ್ತು. ದೀಪಾಲಂಕಾರದ ಕಂಬಗಳನ್ನು ಮುಟ್ಟದೆ, ಅಂತರ ಕಾಯ್ದುಕೊಳ್ಳುವುದು, ಕಂಬಗಳ ಹತ್ತಿರ ನಿಂತು ಫೋಟೋ/ವಿಡಿಯೋ ಶೂಟ್ ಮಾಡುವುದನ್ನು ತಪ್ಪಿಸು ವುದು ಸೇರಿದಂತೆ ಹಲವು ಮುಂಜಾಗ್ರತಾ ಕ್ರಮಗಳನ್ನು ಪಾಲಿಸುವಂತೆ ಸಾರ್ವಜನಿಕರಿಗೆ ಸೂಚನೆ ನೀಡಲಾಗಿತ್ತು.

**ದೀಪಾಲಂಕಾರ ವೀಕ್ಷಿಸಿದ ಸಿಎಂ:** ಸ್ಥಳೀಯರು, ಪ್ರವಾಸಿ ಗರಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೂಡ ಈ ಬಾರಿಯ ದಸರಾ ದೀಪಾಲಂಕಾರವನ್ನು ವೀಕ್ಷಿಸಿದರು. ಅಂಬಾರಿ ಬಸ್ಸಿನ ಮೂಲಕ ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿದ ಮುಖ್ಯಮಂತ್ರಿಗಳು ವಿದ್ಯುತ್ ದೀಪಾಲಂಕಾರ ವನ್ನು ಕಣ್ತುಂಬಿಕೊಂಡರು. ಆ ಮೂಲಕವಾಗಿ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಗಮಿತದ ಪ್ರಯತ್ನಕ್ಕೆ ಮೆಚ್ಚುಗೆಯನ್ನು ವ್ಯಕ್ತಪಡಿಸಿದ್ದರು



ಈ ಬಾರಿಯ ದಸರಾ ಮಹೋತ್ಸವದ ಅಂಗವಾಗಿ ಮಾಡಲಾಗಿದ್ದ ವಿದ್ಯುತ್ ದೀಪಾಲಂಕಾರ ಎಲ್ಲರ ಮನಗೆದ್ದಿದೆ. ದೀಪಾಲಂಕಾರ ಯಶಸ್ವಿಯಾಗಲು ಸಹಕರಿಸಿದ ಮುಖ್ಯಮಂತ್ರಿಗಳು, ಇಂಧನ ಸಚಿವರು, ಉಸ್ತುವಾರಿ ಸಚಿವರು, ನಿಗಮದ ಅಧ್ಯಕ್ಷರು, ಜಿಲ್ಲಾಡಳಿತದ ಎಲ್ಲ ಅಧಿಕಾರಿಗಳು, ದೀಪಾಲಂಕಾರದ ಆಕರ್ಷಣೆ ಹೆಚ್ಚಿಸುವಲ್ಲಿ ಶ್ರಮಿಸಿದ ನಿಗಮದ ಅಧಿಕಾರಿಗಳು, ಗುತ್ತಿಗೆದಾರರು, ಪವರ್ ಮ್ಯಾನ್‌ಗಳು, ಪ್ರಾಯೋಜಕರಿಗೆ ಕೃತಜ್ಞತೆ ತಿಳಿಸುತ್ತೇನೆ.

**ಕೆ.ಎಂ.ಮುನಿಗೋಪಾಲ್ ರಾಜು**
ವ್ಯವಸ್ಥಾಪಕ ನಿರ್ದೇಶಕರು, ಸೆಸ್ಕ್

### ಡ್ರೋನ್ ಶೋ ಗಿನ್ನಿಸ್ ದಾಖಲೆ

ದಸರಾ ದೀಪಾಲಂಕಾರದ ಒಂದು ಭಾಗವಾಗಿದ್ದ ಡ್ರೋನ್ ಪ್ರದರ್ಶನದ ಮೂಲಕ ಸೆಸ್ಕ್ ಈ ಬಾರಿ ಗಿನ್ನಿಸ್ ವಿಶ್ವ ದಾಖಲೆ ನಿರ್ಮಿಸಿತ್ತು. ನಾಲ್ಕು ದಿನಗಳು ನಡೆದ ಡ್ರೋನ್ ಪ್ರದರ್ಶನದಲ್ಲಿ ಮೂಡಿದ ಆಕರ್ಷಕ ಕಲಾಕೃತಿಗಳು ಮೆಚ್ಚುಗೆ ಪಡೆದಿತ್ತು.

# ಬ್ರಹ್ಮೋಸ್ ಗಣಪತಿ ವಿಸರ್ಜನೆ: ಅದ್ದೂರಿ ಮೆರವಣಿಗೆ

ಚಾಮರಾಜನಗರ, ನಗರದ ಪ್ರಸಿದ್ಧ ಶ್ರೀವಿದ್ಯಾಗಣಪತಿ ಮಂಡಳಿ ಪ್ರತಿಷ್ಠಾಪಿಸಿರುವ ಬ್ರಹ್ಮೋಸ್ ಗಣಪತಿ ವಿಸರ್ಜನಾ ಮಹೋತ್ಸವದ ಅಂಗವಾಗಿ ಸೋಮವಾರ ಹಮ್ಮಿಕೊಂಡಿದ್ದ ಮೆರವಣಿಗೆಯು ವಿವಿಧ ಕಲಾ ತಂಡಗಳೊಂದಿಗೆ ಅದ್ದೂರಿಯಾಗಿ ನಡೆಯಿತು.

ನಗರದ ರಥದ ಬೀದಿಯಲ್ಲಿ ಪ್ರತಿಷ್ಠಾಪನೆ ಮಾಡಿದ್ದ ಗಣೇಶ ಮೂರ್ತಿಗೆ ಪೂಜಾ ಕೈಂಕರ್ಯ ಮಾಡಲಾಯಿತು. ಮುಖಂಡರು, ಮಂಡಳಿಯ ಪದಾಧಿಕಾರಿಗಳು ವಿಶೇಷ ಪೂಜೆ ಸಲ್ಲಿಸಿದರು. ಬಳಿಕ ಗಣಪತಿ ಮೂರ್ತಿಯನ್ನು ವಿವಿಧ ಪುಷ್ಪಗಳಿಂದ ಸಿಂಗರಿಸಿದ್ದ ವಾಹನದ ಮೇಲೆ ಕೂರಿಸಿ ಮೆರವಣಿಗೆಗೆ ಚಾಲನೆ ನೀಡಲಾಯಿತು.

ಗಣಪತಿ ಮೆರವಣಿಗೆಯು ಗುರುನಂಜಶೆಟ್ಟರ ಛತ್ರದ ಮುಂಭಾಗದಿಂದ ಹೊರಟು ಖಡಕ್ ಪುರ ಮೊಹಲ್ಲಾ, ಡಾ.ಬಿ.ಆರ್.ಅಂಬೇಡ್ಕರ್ ಬಡಾವಣೆ, ಡಿವಿಯೇಷನ್ ರಸ್ತೆ, ದೇವಾಂಗ 3ನೇ ಬೀದಿ, ದೊಡ್ಡಂಗಡಿ ರಸ್ತೆ, ನಾಗಪ್ಪಶೆಟ್ಟರ ಚೌಕ, ಬೀದಿ, ಗಾಡಿಪೇಟೆ ಚೌಕ, ಮೇಗಲ ನಾಯಕರ ಬೀದಿ, ಶ್ರೀ



ಕನ್ನಿಕಾ ಪರಮೇಶ್ವರಿ ದೇವಸ್ಥಾನದ ದೊಡ್ಡಂಗಡಿ, ಚಿಕ್ಕಂಗಡಿ ಬೀದಿ, ಸಂತೇಮರಹಳ್ಳಿ ವೃತ್ತ, ನಾಯಕರ ಬೀದಿ, ಉಪ್ಪಾರ ಬಡಾವಣೆ, ದೇವಸ್ಥಾನ, ಭ್ರಮರಾಂಬ 2ನೇ ಕ್ರಾಸ್, ಭ್ರಮರಾಂಬ 1ನೇ ಕ್ರಾಸ್, ಕುರುಬರ ಬೀದಿ, ಹಳ್ಳದ ಬೀದಿ ಹೀಗೆ ನಗರದ ಪ್ರಮುಖ ಬೀದಿಯಲ್ಲಿ ಹಾದು ಬಳಿಕ ದೊಡ್ಡರಸನ ಕೊಳದಲ್ಲಿ ಮಧ್ಯರಾತ್ರಿ ಬಾಣ ಬಿರುಸಿನೊಂದಿಗೆ ವಿಸರ್ಜನೆ ಮಾಡಲಾಯಿತು. ಇದಕ್ಕೂ ಮೊದಲು ಗಣಪತಿ ಮೂರ್ತಿ ಮೆರವಣಿಗೆ ಸಾಗಿದ ಬಡಾವಣೆಗಳಲ್ಲಿ ಜನರು ತಮ್ಮ ತಮ್ಮ ಮನೆಗಳಿಂದ ಪೂಜೆ ಸಲ್ಲಿಸಿದರು. ಮಹಿಳೆಯರು, ಮಕ್ಕಳು ರಸ್ತೆಯ ಎರಡು ಬದಿಗಳಲ್ಲಿ ನಿಂತು ಗಣೇಶನ ಉತ್ಸವ ಕಣ್ತುಂಬಿಕೊಂಡರು.

### ಬಿಗಿ ಪೊಲೀಸ್ ಬಂದೋ ಬಸ್ತ್

ಗಣಪತಿಮೂರ್ತಿ ವಿಸರ್ಜನಾ ಹಿನ್ನೆಲೆಯಲ್ಲಿ ನಗರದಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು. ಮೆರವಣಿಗೆ ತೆರಳುವ ಸೂಕ್ಷ್ಮ ಪ್ರದೇಶಗಳಲ್ಲಿ ಪೊಲೀಸ್ ಸರ್ಪಗಾವಲು ಹಾಕಲಾಗಿತ್ತು. ನಗರಕ್ಕೆ ಬರುವ ಹಾಗೂ ಹೋಗುವ ವಾಹನಗಳಿಗೆ ಪರ್ಯಾಯ ರಸ್ತೆಗಳ ಮೂಲಕ ತೆರಳಲು ಅವಕಾಶ ಮಾಡಲಾಗಿತ್ತು. ಯಾವುದೇ ಅಹಿತಕರ ಘಟನೆ ನಡೆಯದಂತೆ ಸೂಕ್ತ ಬಂದೋಬಸ್ತ್ ಗಾಗಿ ಡಿವೈಎಸ್ಪಿ, 14 ಪೊಲೀಸ್ ಇನ್ಸ್‌ಪೆಕ್ಟರ್, 36 ಪಿಎಸ್‌ಐ, 58 ಎಎಸ್‌ಐ, 32 ಹೆಡ್ ಕಾನ್ಸಟೇಬಲ್, 200 ಗೃಹರಕ್ಷಕದಳ ಸಿಬ್ಬಂದಿ ಸೇರಿದಂತೆ 700ಕ್ಕೂ ಹೆಚ್ಚು ಸಿಬ್ಬಂದಿಯನ್ನು ನಿಯೋಜನೆ ಮಾಡಲಾಗಿತ್ತು. ಇವರ ಜತೆ ಬ್ಲಾಕ್ ಕಮಾಂಡೋ ಹಾಗೂ ಸಿಸಿಕ್ಯಾಮರಾ ಅಳವಡಿಕೆ ಮಾಡಲಾಗಿತ್ತು. ಮಾಜಿ ಶಾಸಕ ಸಿ.ಎಸ್.ನಿರಂ ಜನ್ ಕುಮಾರ್ ಬ್ಯಾಂಡ್ ಸೆಟ್ ಸದ್ದಿಗೆ ಕುಣಿದು ಕುಪ್ಪಳಿಸಿದರು.



### ಮೆರುಗು ತಂದ ವಿವಿಧ ಕಲಾತಂಡಗಳು:

ಗಣಪತಿಮೂರ್ತಿ ವಿಸರ್ಜನಾ ಮಹೋತ್ಸವದಲ್ಲಿ ವಿವಿಧ ಕಲಾತಂಡಗಳು ಭಾಗವಹಿಸುವ ಮೂಲಕ ಮೆರವಣಿಗೆಗೆ ಮೆರಗು ನೀಡಿವೆ. ಬ್ಯಾಂಡ್ ಸೆಟ್, ಪೂಜಾ ಕುಣಿತ, ಮಹಿಳಾ ವೀರಗಾಸೆ, ಮಂಗಳ ವಾದ್ಯ, ಗೊರವರ ಕುಣಿತ, ಡೊಳ್ಳು ಕುಣಿತ, ಕಂಸಾಳೆ, ವೀರಗಾಸೆ, ನಗಾರಿ, ತಮಟೆ ಸದ್ದು, ಯಕ್ಷಗಾನ ಗೊಂಬೆ ಎಲ್ಲರ ಕಣ್ಮನ ಸೆಳೆಯಿತು. ನಗರದ ಪ್ರಮುಖ ಬೀದಿಗಳಲ್ಲಿ ಗಣೇಶನ ಮೆರವಣಿಗೆ ಬಳಿಕ ದೊಡ್ಡರಸನ ಕೊಳದಲ್ಲಿ ಗಣೇಶ ಮೂರ್ತಿಯನ್ನು ವಿಸರ್ಜನೆ ಮಾಡಲಾಯಿತು.

### ಮೆರವಣಿಗೆಯಲ್ಲಿ ಜಿಲ್ಲಾಧಿಕಾರಿ

ಶಿಲ್ಪಾನಾಗ್, ಪೊಲೀಸ್ ವರಿಷ್ಠಾಧಿಕಾರಿ ಡಾ.ಬಿ. ಟಿ. ಕವಿತಾ, ನಗರಸಭೆ ಅಧ್ಯಕ್ಷ ಸುರೇಶ್, ಉಪಾಧ್ಯಕ್ಷೆ ಮಮತಾ, ಅಪಾರ ಪೊಲೀಸ್ ವರಿಷ್ಠಾಧಿಕಾರಿ ಎಂ.ಎನ್.ಶಶಿಧರ್, ಡಿವೈಎಸ್ಪಿ ಸ್ನೇಹರಾಜ್, ಪೌರಾಯುಕ್ತ ರಾಮದಾಸ್, ತಹಸೀಲ್ದಾರ್ ಗಿರಿಜಾ, ಗಣಪತಿ ಮಂಡಳಿ ಅಧ್ಯಕ್ಷ ಶಿವಣ್ಣ, ಕೇಂದ್ರ ಪರಿಹಾರ ಸಮಿತಿ ಮಾಜಿ ಅಧ್ಯಕ್ಷ ಎಂ.ರಾಮಚಂದ್ರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮೃಗಾಲಯ ಅರಿತು ಅಭಿವೃದ್ಧಿ ಮಾಡುವೆ

## ಮೃಗಾಲಯ ಪ್ರಾಧಿಕಾರದ ನೂತನ ಅಧ್ಯಕ್ಷ ಹಾಡ್ಯ ರಂಗಸ್ವಾಮಿ ಭರವಸೆ



ಮೈಸೂರು: ನನಗೆ ಮೈಸೂರು ಮೃಗಾಲಯ ಭಾಗದ ಕಾರ್ಯ ವ್ಯಾಪ್ತಿಯ ಅರಿವಿಲ್ಲ. ಆದರೆ, ಮುಂದಿನ ದಿನಗಳಲ್ಲಿ ಅದೆಲ್ಲವನ್ನೂ ಅರಿತು ಅಭಿವೃದ್ಧಿ ಮಾಡುವ ನಿಟ್ಟಿನಲ್ಲಿ ಕಾರ್ಯನಿರತನಾಗುತ್ತೇನೆಂದು ಕರ್ನಾಟಕ ಮೃಗಾಲಯ ಪ್ರಾಧಿಕಾರದ ನೂತನ ಅಧ್ಯಕ್ಷ ಹಾಡ್ಯ ರಂಗಸ್ವಾಮಿ ಭರವಸೆ ವ್ಯಕ್ತಪಡಿಸಿದರು.

ಕೂರ್ಗಳ್ಳಿ ಶ್ರೀ ಚಾಮರಾಜೇಂದ್ರ ಮೃಗಾಲಯದ ಚಾಮುಂಡಿ ವನ್ಯಜೀವಿ ಸಂರಕ್ಷಣೆ, ರಕ್ಷಣೆ ಮತ್ತು ಪುನರ್ ವಸತಿ ಕೇಂದ್ರದಲ್ಲಿರುವ ತಮ್ಮ ಕಚೇರಿಯಲ್ಲಿ ಶತಮಾನಗಳ ಇತಿಹಾಸವುಳ್ಳ ಕರ್ನಾಟಕ ಮೃಗಾಲಯ ಪ್ರಾಧಿಕಾರದ 41ನೇ ಅಧ್ಯಕ್ಷನನ್ನಾಗಿ ರಂಗಸ್ವಾಮಿಯವರು ಅಧಿಕಾರ ಸ್ವೀಕರಿಸಿದರು. ಬಳಿಕ ಮಾತನಾಡಿ, ಮುಖ್ಯಮಂತ್ರಿಗಳು ನನಗೆ ಈ ಹುದ್ದೆ ನೀಡುತ್ತಾರೆಂಬ ನಿರೀಕ್ಷೆ ಇರಲಿಲ್ಲ. ಆತ್ಮೀಯತೆಯ ನಂಬಿಕೆಯಿಟ್ಟು ಹುದ್ದೆ ನೀಡಿದ್ದಾರೆ. ಅವರಿಗೆ ಒಪ್ಪುವ ರೀತಿಯಲ್ಲಿ ಕೆಲಸ ಮಾಡಿ ತೋರಿಸುತ್ತೇನೆ. ಇನ್ನೂ ಮೃಗಾಲಯಗಳ ಅಭಿವೃದ್ಧಿ ವಿಚಾರವಾಗಿ ಮೊದಲಿಗೆ ಅಧಿಕಾರಿಗಳಿಂದ ಮಾಹಿತಿ ಪಡೆಯುವ ಕೆಲಸ ಮಾಡುತ್ತೇನೆಂದರು.

ರಾಜ್ಯದ ಎಲ್ಲಾ ಮೃಗಾಲಯಗಳಿಗೂ ಹಂತ ಹಂತವಾಗಿ ಭೇಟಿ ನೀಡುತ್ತೇನೆ. ಅಗತ್ಯ ಬಿದ್ದರೆ ಪ್ರಾಣಿ ಪ್ರಿಯರು ಹಾಗೂ ಸಾರ್ವಜನಿಕರಿಂದ ಮೃಗಾಲಯಗಳ ಕುರಿತಂತೆ ಅಭಿಪ್ರಾಯ ಸಂಗ್ರಹಿಸುತ್ತೇನೆ. ಅವರ ಅಭಿಪ್ರಾಯಕ್ಕೆ ಅನುಗುಣವಾಗಿ ನನ್ನ ವ್ಯಾಪ್ತಿಯಲ್ಲಿ ಮಾಡಬಹುದಾದ ಎಲ್ಲಾ ಅಭಿವೃದ್ಧಿಯನ್ನು ಮಾಡಲು ಕ್ರಮವಹಿಸುತ್ತೇನೆ. ನನಗೆ ಅಧಿಕಾರ ನೀಡಲು ಕಾರಣರಾದ ಸಿಎಂ, ಡಿಸಿಎಂ ಹಾಗೂ ಸಚಿವರೆಲ್ಲರಿಗೂ ಅಭಿನಂದನೆಗಳನ್ನು ತಿಳಿಸುತ್ತೇನೆಂದರು.

ಜಿಲ್ಲಾ ಗ್ರಾಮಾಂತರ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ.ವಿ. ವಿಜಯಕುಮಾರ್, ಕರ್ನಾಟಕ ವಾಲ್ಮೀಕಿ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಎಸ್.ಸಿ.ಬಸವರಾಜ್, ಕೆಪಿಸಿಸಿ ಕಾರ್ಯದರ್ಶಿ ಬೆಳಗಲಿ ಪುರುಷೋತ್ತಮ್, ಕರ್ನಾಟಕ ಇಂಧನ ಇಲಾಖೆ ಮಾಜಿ ನಿರ್ದೇಶಕ ಕಲ್ಮಳ್ಳಿ ಸುರೇಶ್ ಬಾಬು, ಕಾರ್ಯದರ್ಶಿ ಬಿಳುಗಲಿ ಕುಮಾರ್, ಸುತ್ತೂರು ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷ ಪಿ.ಸೋಮಣ್ಣ, ರೈತ ಘಟಕದ ಜಿಲ್ಲಾಧ್ಯಕ್ಷ ಬಿ. ಮಹಾದೇವ, ಸೋಮಸುಂದರ್, ಸಿ.ಆರ್.ಮಾದೇವ, ಶಿವಕುಮಾರ್, ದೇವನೂರು ಮಹದೇವಮ್ಮ, ಸಿ.ಆರ್. ಮಾದೇವ್, ಗಾರ್ಡನ್ ಮಹೇಶ್, ಹುಳಿಮಾವು ನಟರಾಜ್, ಆರ್.ಮಹದೇವ್, ಸಕಳ್ಳಿ ಬಸವರಾಜ್, ಹೊಸಕೋಟೆ ಬಸವರಾಜ್, ಕುಮಾರ್, ಹಾರಪುರ ಶಿವಣ್ಣ, ಚಿ.ಮಾರಳ್ಳಿ ಜಗದೀಶ್, ಜಯಶೀಲ, ಪುಟ್ಟಸ್ವಾಮಿ, ಮುನಿಯಪ್ಪ, ಮೂಡಳ್ಳಿ ಮಹದೇವಸ್ವಾಮಿ, ನಗರ್ಲೆ ನಾರಾಯಣನಾಯಕ, ಪ್ರಮೋದ್ ಕುಮಾರ್, ಚಿನ್ನಸ್ವಾಮಿ, ಕಾರ್ಯ ಮರಿಸ್ವಾಮಿ ನಾಯಕ, ಬಸವಣ್ಣ, ಚಿನ್ನಂಬಳ್ಳಿ ರಾಜು ಇನ್ನಿತರರು ಉಪಸ್ಥಿತರಿದ್ದರು.

### 41ನೇ ಅಧ್ಯಕ್ಷರಾಗಿ ಪದಗ್ರಹಣ

**2020 ನ.11ರಿಂದ 2022 ಸೆ.7ರವರೆಗೆ ಎಲ್.ಆರ್. ಮಹದೇವಸ್ವಾಮಿ, 2022ರ ಸೆ.22ರಿಂದ 2023ರ ಮೇ22ರವರೆಗೆ ಎಂ.ಶಿವಕುಮಾರ್, 2023ರ ಮೇ.29ರಿಂದ ಏ.13ರವರೆಗೆ ಡಿಸಿಎಫ್ ಜಾವೇದ್ ಅಖ್ತರ್ ಹಾಗೂ 2023ರ ಮೇ13ರಿಂದ ಈವರೆಗೆ ಅರಣ್ಯ ಇಲಾಖೆ ಸಚಿವ ಈಶ್ವರ್ ಖಂಡ್ರೆಯವರೇ ಅಧ್ಯಕ್ಷರಾಗಿದ್ದರು. ಈಗ ಸರ್ಕಾರ ಇವರನ್ನು ನೇಮಿಸಿದ ಹಿನ್ನೆಲೆಯಲ್ಲಿ 41ನೇ ಅವಧಿಯ ಅಧ್ಯಕ್ಷರಾಗಿ ಆಯ್ಕೆಗೊಂಡಿದ್ದಾರೆ.**

**ಒಬ್ಬ ಪ್ರವಾಸಿಗನಾಗಿ ಮೃಗಾಲಯಕ್ಕೆ ತುಂಬಾ ವರ್ಷಗಳ ಹಿಂದೆ ಭೇಟಿ ನೀಡಿದ್ದ ನೆನಪಿದೆಯಷ್ಟೇ, ನಿಜಕ್ಕೂ ಕನಸ್ಸಲ್ಲೂ ಅದೇ ಮೃಗಾಲಯ ಪ್ರಾಧಿಕಾರದ ಅಧ್ಯಕ್ಷನಾಗುತ್ತೇನೆಂಧು ಭಾವಿಸಿರಲಿಲ್ಲ. ಈ ಅವಕಾಶ ನನ್ನ ಇಷ್ಟು ವರ್ಷದ ಸೇವೆಗೆ ನೀಡಿದ್ದಕ್ಕೆ ಅಭಾರಿಯಾಗಿರುವೆ.**

–ರಂಗಸ್ವಾಮಿ ಅಧ್ಯಕ್ಷ

# ದೊಡ್ಡಸ್ವಾಮೇಗೌಡರ ಹುಟ್ಟುಹಬ್ಬ

## ಸಮಾಜಮುಖಿ ಕಾರ್ಯಕ್ರಮಗಳೊಡನೆ ಸಂಭ್ರಮಾಚರಣೆ



ಕೆ.ಆರ್.ನಗರ: ಪಟ್ಟಣದ ಡಾ.ರಾಜಕುಮಾರ್ ಬಾನಂಗಳದಲ್ಲಿ ಭಾನುವಾರ ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ಸಹಕಾರ ಬ್ಯಾಂಕ್ ನಿರ್ದೇಶಕರು ಹಾಗೂ ಕೆಪಿಸಿಸಿ ಕಾರ್ಯಕಾರಣಿ ಸದಸ್ಯರಾದ ದೊಡ್ಡಸ್ವಾಮೇಗೌಡರ 75ನೇ ವರ್ಷದ ಜನ್ಮದಿನೋತ್ಸವವನ್ನು ಅವರ ಅಭಿಮಾನಿ ಬಳಗದವರು ಮತ್ತು ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಸಮಾಜಮುಖಿ ಕಾರ್ಯಕ್ರಮಗಳೊಡನೆ ಆಚರಿಸಿದರು.

ಬೆಳಿಗ್ಗೆ ದೊಡ್ಡ ಸ್ವಾಮಿಗೌಡರು ತಮ್ಮ ಹುಟ್ಟೂರಾದ ಕೆಸ್ತೂರು ಕೊಪ್ಪಲಿನಲ್ಲಿ ಮನೆದೇವರಿಗೆ ಪೂಜೆ ಸಲ್ಲಿಸಿ ಗ್ರಾಮಸ್ಥರಿಂದ ಸನ್ಮಾನ ಸ್ವೀಕರಿಸಿದ

ನಂತರ ಶ್ರೀರಾಮ ಚುಂಚನಕಟ್ಟೆಯ ದೇವಾಲಯದಲ್ಲಿ ಪೂಜೆ ಸಲ್ಲಿಸಿ, ಕೆ.ಆರ್.ನಗರದ ಹಳೆ ಎಡತೊರೆಯ ಅರ್ಕೇಶ್ವರಸ್ವಾಮಿ ದೇವಾಲಯ, ಖಾದರ್ ಲಿಂಗಾವಳಿಯವರ ಸಮಾಧಿಗೆ ಪೂಜೆ, ಅಂಜನೇಯ ಬಡಾವಣೆಯ ಆಂಜನೇಯ ಸ್ವಾಮಿ ದೇವಾಲಯದಲ್ಲಿ ಪೂಜೆ, ಬಸವೇಶ್ವರ ಬಡಾವಣೆಯ ಮಲೆ ಮಹದೇಶ್ವರ ಸ್ವಾಮಿ ದೇವಾಲಯದಲ್ಲಿ ಪೂಜೆ ಸಲ್ಲಿಸಿ ನಂತರ ಡಾ. ರಾಜಕುಮಾರ್ ಬಾನಂಗಳದಲ್ಲಿ ಆಯೋಜಿಸಿದ್ದ ಕಾರ್ಯಕ್ರಮಕ್ಕೆ ಆಗಮಿಸಿದರು. ನಂತರ ವಿವಿಧ ಮಠಾಧೀಶರ ಸಮ್ಮುಖದಲ್ಲಿ ಬೃಹತ್ ಉದ್ಯೋಗ ಮೇಳ ಹಾಗೂ ಆರೋಗ್ಯ ತಪಾಸಣಾ ಶಿಬಿರಕ್ಕೆ ಚಾಲನೆ ನೀಡಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಕಾಗಿನೆಲೆ ಕನಕ ಗುರುಪೀಠದ ಶ್ರೀ ಶಿವಾನಂದಪುರಿ ಸ್ವಾಮೀಜಿ, ಹುಟ್ಟುಹಬ್ಬ ಆಚರಣೆ ಮಾಡಿಕೊಂಡು ಆಡಂಬರ ಮಾಡುವುದು ಮುಖ್ಯವಲ್ಲ. ಆಚರಣೆ ಮೂಲಕ ಬಡವರಿಗೆ ಆರೋಗ್ಯ, ಯುವಕರಿಗೆ ಉದ್ಯೋಗ ನೀಡುವ ಕೆಲಸವನ್ನು ದೊಡ್ಡಸ್ವಾಮೇಗೌಡರು ಮಾಡಿರುವುದು ಶ್ಲಾಘನೀಯ ಎಂದರು.

ಉದ್ಯೋಗ ಮೇಳದಲ್ಲಿ ರಾಜ್ಯದ ವಿವಿಧ ಭಾಗಗಳ 100ಕ್ಕು ಹೆಚ್ಚು ಕಂಪನಿಗಳ ಪ್ರತಿನಿಧಿಗಳು ಭಾಗವಹಿಸಿ ಸಾವಿರಾರು ಮಂದಿ ನಿರುದ್ಯೋಗಿಗಳ ಸಂದರ್ಶನ ನಡೆಸಿ ಕೆಲವರಿಗೆ ಸ್ಥಳದಲ್ಲಿಯೇ ನೇಮಕಾತಿ ಪತ್ರ ನೀಡಿದರು ಆರೋಗ್ಯ ತಪಾಸಣಾ ಶಿಬಿರ ಮತ್ತು ರಕ್ತದಾನ ಶಿಬಿರದಲ್ಲಿ ಸಾವಿರಾರು ಮಂದಿ ಭಾಗವಹಿಸಿ ಅನುಕೂಲ ಪಡೆದರು.

ಕಾರ್ಯಕ್ರಮದಲ್ಲಿ ಶಾಸಕ ಡಿ ರವಿಶಂಕರ್ ಅವರ ಧರ್ಮಪತ್ನಿ ಸುನಿತಾ . ಅರಕೆರೆ ವಿರಕ್ತ ಮಠದ ಶ್ರೀ ಸಿದ್ದೇಶ್ವರ ಸ್ವಾಮಿಗಳು, ಸರಗೂರು ಪಟ್ಟದಮಠದ ಶ್ರೀ ಮೃತ್ಯುಂಜಯ ಸ್ವಾಮಿ, ಹಿರಿಯಾಪಟ್ಟಣದ ಕಗ್ಗುಂಡಿ ಶ್ರೀ ಗುರು ಹರಳಯ್ಯನವರ ಮಠದ ಶ್ರೀ ರುದ್ರಮುನಿ ಸ್ವಾಮಿಗಳು, ಲಾಲನಹಳ್ಳಿ ಗುರು ಮಲ್ಲೇಶ್ವರ ದಾಸೋಹ ಮಠದ ಸರಣಿ ಜಯದೇವಿ ತಾಯಿ, ಕಲ್ಯಾಣಪುರದ ಕಲ್ಯಾಣ ಬಸವೇಶ್ವರ ಮಠದ ಶರಣೆ ಚಿನ್ಮಯಿ ತಾಯಿ, ಮಾರಗೌಡನಹಳ್ಳಿ ಮಠದ ಶಂಭುಲಿಂಗ ಸ್ವಾಮೀಜಿ, ಜಿಲ್ಲಾ ಕಾಂಗ್ರೆಸ್ ಮುಖಂಡರಾದ ವೈ. ಎಸ್.ಜಯಂತ್, ಮಿರ್ಲೆ ನಂದೀಶ್, ತಾ. ಕುರುಬರ ಸಂಘದ ಅಧ್ಯಕ್ಷ ಚೀರನಹಳ್ಳಿ ಶಿವಣ್ಣ, ಹಿರಿಯ ಕಾಂಗ್ರೆಸ್ ಮುಖಂಡರಾದ ದಗ್ಗನಹಳ್ಳಿ ಸಿದ್ದೇಗೌಡ, ಜಿ.ಪಂ. ಮಾಜಿ ಸದಸ್ಯರಾದ ಜಿ.ಆರ್. ರಾಮೇಗೌಡ, ಜಯ ರಾಮೇಗೌಡ, ಮಾರ್ಚಹಳ್ಳಿ ಶಿವರಾಮ್, ಅರ್ಜುನಹಳ್ಳಿ ರಾಜಯ್ಯ, ತಾಲ್ಲೂಕು ಶರಣು ಸಾಹಿತ್ಯ ಪರಿಷತ್ ಅಧ್ಯಕ್ಷ ಸಿ.ಪಿ.ರಮೇಶ್, ತಾ.ಪಂ. ಮಾಜಿ ಅಧ್ಯಕ್ಷ ಹರದನಹಳ್ಳಿ ಮಂಜಪ್ಪ, ಹಾಡ್ಯ ಮಹದೇವಸ್ವಾಮಿ, ನಗರಯೋಜನಾ ಪ್ರಾಧಿಕಾರದ ಅಧ್ಯಕ್ಷ ಗಡ್ಡ ಮಹೇಶ್, ನಿರ್ದೇಶಕರಾದ ಸರಿತಾ ಜವರಪ್ಪ, ಸಯ್ಯದ್ ಜಾಬೀರ್, ಕೆ.ಎನ್.ಪ್ರಸನ್ನ, ಪುರಸಭಾ ಅಧ್ಯಕ್ಷ ಶಿವುನಾಯಕ್, ಉಪಾಧ್ಯಕ್ಷ ಪಲ್ಲವಿ ಆನಂದ್, ಸದಸ್ಯರಾದ ಕೋಳಿ ಪ್ರಕಾಶ್, ಶಂಕರ್ ಸ್ವಾಮಿ, ನಟರಾಜ್, ಸಿದ್ದಿಕ್, ಮಾಜಿ ಸದಸ್ಯ ವಿನಯ್, ಕೆ.ಆರ್ ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ಎಸ್. ಮಹದೇವ್, ಸಾಲಿಗ್ರಾಮ ಕಾಂಗ್ರೆಸ್ ಅಧ್ಯಕ್ಷ ಉದಯಶಂಕರ್, ವಕ್ತಾರ ಸೈಯದ್ ಜಾಬೀರ್, ನಗರಾಧ್ಯಕ್ಷ ಎಂ.ಜೆ. ರಮೇಶ್, ಎಪಿಎಂಸಿ ಮಾಜಿ ನಿರ್ದೇಶಕ ಎಲ್. ಪಿ.ರವಿಕುಮಾರ್, ಕುರುಬರ ಸಂಘದ ನಿರ್ದೇಶಕ ಅಪ್ಪಾಜಿಗೌಡ,

ರಾಜಯ್ಯ, ಚೀರನಹಳ್ಳಿ ಸಿ.ಪಿ.ಶಂಕರ್, ಕರ್ಣಕುಮಾರ್, ಕಾಂಗ್ರೆಸ್ ಸೇವಾದಳದ ಅಧ್ಯಕ್ಷ ಬಿ.ಹೆಚ್.ಕುಮಾರ್, ರಾಷ್ಟ್ರೀಯ ಅಹಿಂದ ಸಂಘಟನೆಯ ಜಿಲ್ಲಾ ಪ್ರಚಾರ ಸಮಿತಿ ಅಧ್ಯಕ್ಷ ಗರುಡಗಂಬ ಮಂಜು, ಕಾಂಗ್ರೆಸ್ ಮುಖಂಡರಾದ ಕೆ.ಪಿ.ಜಗದೀಶ್, ಸ್ವಾಮಿ, ಶಿವಕುಮಾರ್, ಮೋಹನ್ ಕುಮಾರ್, ಇನ್ನಿತರರು ಕಾರ್ಯಕ್ರಮದಲ್ಲಿ ಹಾಜರಿದ್ದರು.

# ಶೂ ಎಸೆದವನ ಗಡಿಪಾರಿಗೆ ಆಗ್ರಹ

ಮೈಸೂರು: ನ್ಯಾಯಮೂರ್ತಿಗಳ ಮೇಲೆ ಶೂ ಎಸೆದ ಮನುವಾದಿ ವಕೀಲನನ್ನು ದೇಶದಿಂದಲೇ ಗಡಿಪಾರು ಮಾಡಿ ಆತನ ವಿರುದ್ಧ ಕ್ರಮಕ್ಕೆ ದೇಶದ ಎಲ್ಲಾ ನ್ಯಾಯಮೂರ್ತಿಗಳು ಪತ್ರಬರೆಯಬೇಕೆಂದು ಮೈಸೂರು ಜಿಲ್ಲಾ ಕಾಂಗ್ರೆಸ್ ಸಂಶೋಧನಾ ವಿಭಾಗದ ಅಧ್ಯಕ್ಷ ಡಾ. ಎಂ.ನಾಗರಾಜು ಒತ್ತಾಯಿಸಿದರು.

ಸರ್ವೋಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಭೂಷಣ್ ರಾಮಕೃಷ್ಣ ಗವಾಯಿ ಅವರ ಮೇಲೆ ವಕೀಲ ರಾಕೇಶ್ ಕಿಶೋರ್ ಶೂ ಎಸೆದ ಪ್ರಕರಣವನ್ನು ಖಂಡಿಸಿ ನಗರದ ಜಿಲ್ಲಾಧಿಕಾರಿ ಕಚೇರಿ ಮುಂದೆ ಮೈಸೂರು ಜಿಲ್ಲಾ ಕಾಂಗ್ರೆಸ್ ಸಂಶೋಧನೆ ಹಾಗೂ ತರಬೇತಿವಿಭಾಗವತಿಯಿಂದ ಪ್ರತಿಭಟಿಸಲಾಯಿತು. ಪ್ರತಿಭಟನೆ ನೇತೃತ್ವವಹಿಸಿ ಮಾತನಾಡಿದ ಅವರು, ನ್ಯಾಯಮೂರ್ತಿಗಳನ್ನು ಗುರಿಯಾಗಿಟ್ಟುಕೊಂಡು ನಡೆದ ಬೆಳವಣಿಗೆ ಆಘಾತಕಾರಿಯಾಗಿದೆ. ದೇಶದ ನ್ಯಾಯಾಂಗ ವ್ಯವಸ್ಥೆ ಮೇಲೆ ನಡೆದಿರುವ ಪೈಶಾಚಿಕ ಕೃತ್ಯವಾಗಿರುತ್ತದೆ. ನ್ಯಾಯಮೂರ್ತಿಯವರು ದಲಿತ ಸಮುದಾಯಕ್ಕೆ ಸೇರಿದ್ದು ಸಾಮಾಜಿಕ ಪ್ರತಿರೋಧಕಗಳನ್ನು ಹೆದರಿಸಿ ಅರ್ಹತೆ ಮತ್ತು ಸಾಧನೆ ಮೂಲಕ ಇಂತಹ ಅತ್ಯುನ್ನತ ಸ್ಥಾನವನ್ನು ಹೊಂದಿರುವುದನ್ನು ಸಹಿಸದೇ ಈ ಕೃತ್ಯ ಎಸಗಿರುತ್ತಾರೆ. ಶೂ ಎಸೆದ ವ್ಯಕ್ತಿ ಸನಾತನಕ್ಕೆ ಅಗೌರವ ತೋರುವುದನ್ನು ಭಾರತ ಸಹಿಸುವುದಿಲ್ಲ ಎಂಬ ಘೋಷಣೆ ಕೂಗಿರುವುದರಿಂದ ಇವನೊಬ್ಬ ಜಾತಿವಾದಿಯಾಗಿದ್ದಾನೆ. ಮತಿಯವಾದಿ ಹಾಗೂ ಸನಾತನವಾದಿಯಾಗಿದ್ದು, ದೇವರ ಪ್ರೇರಣೆಯಿಂದ



ಈ ಕೃತ್ಯ ಎಸಗಿರುವುದಾಗಿ ಹೇಳಿಕೆ ನೀಡಿರುವುದು ನಿಜಕ್ಕೂ ಆಶ್ಚರ್ಯ ಉಂಟು ಮಾಡುತ್ತದೆ. ಭಾರತ ಸಂವಿಧಾನವನ್ನು ಅಡಿಪಾಯವನ್ನಾಗಿರಿಸಿಕೊಂಡು ದೇಶವನ್ನು ಕಟ್ಟಲಾಗಿದೆ ವಿನಃ ಸನಾತನ ಧರ್ಮದಿಂದಲ್ಲ ಎಂಬುದನ್ನು ಯಾರೂ ಮರೆಯಬಾರದು ಎಚ್ಚರಿಕೆ ನೀಡಿದರು. ಇಡೀ ದೇಶ ಈ ಕೃತ್ಯವನ್ನು ಕಂಡಿಸಬೇಕು ಎಂದಿದ್ದಾರೆ. ವಿದೇಶದಲ್ಲಿಯೂ ಸಹ ಈ ಕೃತ್ಯದ ಬಗ್ಗೆ ಚರ್ಚೆಯಾಗಿರುತ್ತದೆ. ಭಾರತ ಸಂವಿಧಾನವನ್ನು ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ರಕ್ಷಣೆ ಮಾಡುವ ಹಾಗೂ ಎತ್ತಿ ಹಿಡಿಯುವ ನ್ಯಾಯಮೂರ್ತಿಗಳನ್ನು ಹೆದರಿಸುವ ಅವಮಾನಿಸುವ ಯತ್ನ ಇದಾಗಿದ್ದು, ಇದರ ಹಿಂದೆ ಸನಾತನ ಧರ್ಮವನ್ನು ಪ್ರತಿಪಾದಿಸುವ ಜಾತಿವಾದಿಗಳ, ಮನುವಾದಿಗಳ ಹಾಗೂ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಬೆಂಬಲ ಇರುತ್ತದೆ ಎನ್ನುವ ಅನುಮಾನ ವ್ಯಕ್ತವಾಗುತ್ತಿದೆ. ಈ ಹಿನ್ನೆಲೆಯಲ್ಲಿ ರಾಷ್ಟ್ರಪತಿಗಳು ಈ ಬಗ್ಗೆ ಸೂಕ್ತ ಕ್ರಮ ಜರುಗಿಸಬೇಕೆಂದು ಈ ಮೂಲಕ ಕೋರಲಾಗಿದೆ ಎಂದರು.

# ರೈತರ ಸಮಸ್ಯೆಗಳಿಗೆ ಸ್ಪಂದಿಸದ ಶಾಸಕರು

ಗುಂಡ್ಲುಪೇಟೆ. ತಾಲೂಕು ಮಳೆಯಾಶ್ರಿತ ಪ್ರದೇಶವಾಗಿದ್ದು ಮಳೆ ಅಬಾವದಿಂದ ಅಂತರ್ಜಾಲ ಕುಸಿತವಾಗಿದೆ ಸಾಲ ಮಾಡಿ ಬೆಳೆದ ಬೆಳೆಗಳಿಗೆ ಸರಿಯಾದ ಸಮಯದಲ್ಲಿ ನೀರು ಸಿಗದೆ ರೈತ ಸಂಕಷ್ಟಕ್ಕೆ ಸಿಲುಕದಾನೆ ಶಾಸಕರು ತಾಲೂಕಿನ ಅಡಳಿತ ರೈತರ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ ಎಂದು ಮಾಜಿ ಶಾಸಕ ಮತ್ತು ಜಿಲ್ಲಾಧ್ಯಕ್ಷ ಸಿ ಎಸ್ ನಿರಂಜನ್ ಕುಮಾರ್ ಅರೋಪಿಸಿದ್ದಾರೆ.



ಪಟ್ಟಣದ ಸಿ ಎಂ ಎಸ್ ಕಲಾ ಮಂದಿರದಲ್ಲಿ ಸುದಿಗೋಷ್ಟಿ ನಡೆಸಿ ಮಾತನಾಡಿದ ಯಾಡಿಯೂರಪ್ಪ.ಮುಖ್ಯ ಮಂತ್ರಿಗಳಾಗಿದ್ದ ಸಮಯದಲ್ಲಿ ತಾಲೂಕಿನ ರೈತರಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಕೆರೆಗಳಿಗೆ ನೀರು ತುಂಬಿಸುವ ಯೋಜನೆಯನ್ನು ಜಾರಿಗೆ ತಂದರು ಅದರೆ ಹಾಲಿ ಶಾಸಕ ಗಣೇಶ ಪ್ರಸಾದ್.ಅವರು ಕೆರೆಗಳನ್ನು ನೀರು ತುಂಬಿಸುವಲ್ಲಿ ವಿಪಲರಾಗಿದ್ದಾರೆ ಎಂದು ದೂರಿದರು.

ನಾನು ಶಾಸಕನಾಗಿದ್ದ ಅವದಿಯಲ್ಲಿ ಜೂನ್ ತಿಂಗಳಿನಿಂದಲೇ ಕೆರೆಗಳನ್ನು ತುಂಬಿಸಲು ಮೋಟಾರ್ ಚಾಲನೆ ಮಾಡಲಾಗುತ್ತಿತ್ತು ಅದರೆ ಅಕ್ಟೋಬರ್ ಅಂತ್ಯವಾದರು ಮೋಟಾರ್ ಚಾಲನೆ ನೀಡಿಲ್ಲ ಶಾಸಕರು ರಿಪೇರಿ ನೆಪದಲ್ಲಿ ಡ್ರಾಮಾ ಮಾಡುತ್ತಿದ್ದಾರೆ ಎಂದು ವ್ಯಂಗ್ಯ ವಾಡಿದರು.

ತಾಲೂಕಿನ ಕಾಡಂಚಿನ ಗ್ರಾಮ ಗಳಲ್ಲಿ ಕಾಡುಪ್ರಾಣಿಗಳ ಹಾವಳಿ ಮಿತಿ ಮೀರಿದೆ.ಬೋಮ್ಮಲಾಪುರದಲ್ಲಿ ಅರಣ್ಯ ಇಲಾಖೆ ಮತ್ತು ಗ್ರಾಮಸ್ಥರ ಮೇಲೇ ಪರಸ್ಪರ ಪ್ರಕರಣ ದಾಖಲಾಗಿದ್ದು ಸಮಸ್ಯೆಯನ್ನು ಬಗ್ಗೆ ಹರಿಸಲು ಸಂಪೂರ್ಣ ವಿಪಲಾಗಿದ್ದಾರೆ ಎಂದರು

ಚುನಾವಣೆಯಲ್ಲಿ ಗೆಲ್ಲುವುದಕ್ಕಿಂತ ಜವಾಬ್ದಾರಿ ಹೆಚ್ಚುಹಾಗಾಗಿ ಶಾಸಕರು ರೈತರ ಸಮಸ್ಯೆಯನ್ನು ಕೂಡಲೆ ಬಗ್ಗೆ ಹರಿಸಬೇಕು ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಬಿಜೆಪಿ ಯಿಂದ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದ್ದರು

ಈ ಸಂದರ್ಭದಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ಮಹದೇವ ಪ್ರಸಾದ್ ಪುರಸಭೆ ಮಾಜಿ ಅಧ್ಯಕ್ಷ ಜಿ ಡಿ ಎಲ್ ಸುರೇಶ.ಎನ್ ಮಲ್ಲೇಶ್. ಪುರಸಭೆ ಸದಸ್ಯ ನಾಗೇಶ್. ಕನ್ನೇಗಾಲ ಸ್ವಾಮಿ ಮಂಗಳಮ್ಮ.ಮಾಡ್ರಹಳ್ಳಿ ನಾಗೇಂದ್ರ ನಾಗುಸ್ವಾಮಿ ಸೇರಿದಂತೆ ಇತರರಿದ್ದರು.

# ಅಧಿಕಾರಿಗಳ ಮೇಲಿನ ಆರೋಪ ನಿರಾದಾರ

ಎಚ್.ಡಿ.ಕೋಟೆ: ಪುರಸಭೆ ವ್ಯಾಪ್ತಿಯಲ್ಲಿ ವಾಣಿಜ್ಯ ಮಳಿಗೆಗಳ ಹರಾಜು ಪ್ರಕ್ರಿಯೆ ಹಾಗೂ ತೆರಿಗೆ ಸಂಗ್ರಹದಲ್ಲಿ ಸರ್ಕಾರದ ನಿಯಮಗಳನ್ನು ಉಲ್ಲಂಘಿಸಿಲ್ಲ ಎಂದು ಪುರಸಭೆ ಮುಖ್ಯಾಧಿಕಾರಿ ಸುರೇಶ್ ಸ್ಪಷ್ಟಪಡಿಸಿದರು.

ಹರಾಜು ಬಾಬ್ತುಗಳ ಸಾರ್ವಜನಿಕ ಬಹಿರಂಗ ಹರಾಜು ಮಾಡುವಲ್ಲಿ ಸರ್ಕಾರಿ ಸುತ್ತೋಲೆ ಹಾಗೂ



ನಿಯಮಾವಳಿಗಳನ್ನು ಪುರಸಭೆಯ ಅಧಿಕಾರಿಗಳು ಪಾಲಿ ಸಿಲ್ಲ ಎಂದು ಪುರಸಭೆಯ ಕೆಲ ಸದಸ್ಯರು ಕಚೇರಿ ಮುಂಭಾಗ ಎರಡು ದಿನಗಳ ಹಿಂದೆ ಪ್ರತಿಭಟನೆ ನಡೆಸಿದ್ದರು.

ನಮ್ಮ ಇಲಾಖೆಯ ಅಧಿಕಾರಿಗಳ ಮೇಲೆ ಯಾವುದೇ ಆಧಾರಗಳಿಲ್ಲದೆ ಸುಖಾ ಸುಮ್ಮನೆ ಆರೋಪ ಮಾಡಿರುವುದು ಸತ್ಯಕ್ಕೆ ದೂರವಾದದ್ದು. ಸಾರ್ವಜನಿಕ ಬಹಿರಂಗ ಹರಾಜು ಪ್ರಕ್ರಿಯೆಯನ್ನು ಸಭೆಯಲ್ಲಿ ಮಂಡಿಸಿ, ಅಧ್ಯಕ್ಷರ ಒಪ್ಪಿಗೆ ಪಡೆದ ನಂತರ ಒಂದು ತಿಂಗಳ ಮುಂಚಿತವಾಗಿ ಸ್ಥಳೀಯ ಸುದ್ದಿ ಪತ್ರಿಕೆಯಲ್ಲಿ ಜಾಹೀರಾತು ನೀಡಿ ಮಾಹಿತಿ ತಿಳಿಸಲಾಗಿದೆ ಎಂದು ತಿಳಿಸಿದರು. ತೆರಿಗೆಗೆ ಸಂಬಂಧಿಸಿದಂತೆ ನಮ್ಮ ಇಲಾಖೆಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡುತ್ತಿದ್ದು, ಸೆ.–ಅ. ತಿಂಗಳಲ್ಲಿ 1.18 ಲಕ್ಷದಷ್ಟು ತೆರಿಗೆ ಸಂಗ್ರಹವಾಗಿದೆ. ಬಾಕಿ ಉಳಿಸಿಕೊಂಡಿರುವವರಿಗೆ ನೊಟೀಸ್ ಜಾರಿ ಮಾಡಲಾಗುವುದು. ಪುರಸಭೆ ವ್ಯಾಪ್ತಿಯಲ್ಲಿ ಮೂಲ ಸೌಲಭ್ಯಗಳಿಗೆ ಸಂಬಂಧಿಸಿದಂತೆ ಕುಡಿಯುವ ನೀರು, ಚರಂಡಿ, ರಸ್ತೆಗಳನ್ನು ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸೇರಿದಂತೆ ಸದಸ್ಯರ ಸೂಚನೆಯಂತೆ ಅಭಿವೃದ್ಧಿ ಮಾಡುತ್ತಿದ್ದು, ಸಾರ್ವಜನಿಕರಿಗೆ ಜನಸ್ನೇಹಿಯಾಗಿ ನಮ್ಮ ಇಲಾಖೆಯ ನೌಕರರು ಕೆಲಸ ಮಾಡುತ್ತಿದ್ದಾರೆ ಎಂದು ತಿಳಿಸಿದರು.



**ಸ್ಥಳಕ್ಕೆ ಭೇಟಿ ನೀಡಿ ಕಂದಾಯ ಕಟ್ಟಿಸುವ ಕೆಲಸವನ್ನು ನಾನು ಪ್ರಾಮಾಣಿಕವಾಗಿ ಮಾಡುತ್ತಿದ್ದೇನೆ. ನನ್ನ ಅವಧಿಯಲ್ಲಿ 1.18ಲಕ್ಷ ರೂ. ಆದಾಯ ಬಂದಿದೆ. ಪುರಸಭೆಯ ಕೆಲವು ಸದಸ್ಯರು ನನ್ನ ಮೇಲೆ ಮಾಡಿರುವ ಆರೋಪ ಸತ್ಯಕ್ಕೆ ದೂರವಾದದ್ದು. ಹರಾಜು ಪ್ರಕ್ರಿಯೆಗೆ ಸಂಬಂಧಿಸಿದಂತೆ ಸುದ್ದಿ ಪತ್ರಿಕೆ ಹಾಗೂ ಕಚೇರಿಯ ನಾಮ ಫಲಕದಲ್ಲಿ ಮಾಹಿತಿ ನೀಡಿದ್ದೇವೆ.**

ರಾಣಿ ಪುರಸಭೆ ಕಂದಾಯ ಅಧಿಕಾರಿ

## ಭಗೀರಥ ಉಪ್ಪಾರ ಯುವಕರ ಸಂಘ ಒತ್ತಾಯ

# ಪುಟ್ಟರಂಗಶೆಟ್ಟಿಗೆ ಸಚಿವ ಸ್ಥಾನ ನೀಡಲು ಒತ್ತಾಯ

ಚಾಮರಾಜನಗರ, ಚಾಮರಾಜನಗರ ವಿಧಾನಸಭಾ ಕ್ಷೇತ್ರದಿಂದ ಸತತ 4 ಬಾರಿ ಶಾಸಕರಾಗಿ ಆಯ್ಕೆಯಾಗಿ ದಾಖಲೆ ನಿರ್ಮಿಸಿರುವ ಸಿ. ಪುಟ್ಟರಂಗಶೆಟ್ಟಿ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಯಳಂದೂರು ಪಿಎಸಿಸಿಎಸ್ ಅಧ್ಯಕ್ಷ ವೈ.ಬಿ.ಮಹೇಶ್, ತಾಲೂಕು ಭಗೀರಥ ಉಪ್ಪಾರ ಯುವಕರ ಸಂಘದ ಅಧ್ಯಕ್ಷ ಪಿ. ಮಾದೇಶ್ ಉಪ್ಪಾರ್ ಒತ್ತಾಯಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ದಿನಾಂಕಗಳನ್ನು ಮಾತನಾಡಿ, ಪುಟ್ಟರಂಗಶೆಟ್ಟಿ ಅವರು ರಾಜ್ಯದ ಉಪ್ಪಾರ ಜನಾಂಗದ ಏಕೈಕ ಶಾಸಕರು. ಕಾಂಗ್ರೆಸ್ ಗೆಲುವಿಗೆ ಶ್ರಮಿಸಿದ್ದಾರೆ. ಉಪ್ಪಾರ ಸಮಾಜ ಮತದಾರರು ಹೆಚ್ಚು ಇರುವ ಕ್ಷೇತ್ರದಲ್ಲಿ ಕಾಂಗ್ರೆಸ್ ಬೆಂಬಲಿಸುವಂತೆ ಜಾಗೃತಿ ಮೂಡಿಸಿದ್ದಾರೆ. 2008ರಿಂದ ನಿರಂತರ ಆಯ್ಕೆಯಾಗಿದ್ದಾರೆ. ಜಿಲ್ಲಾ ಕೇಂದ್ರದ ಅಭಿವೃದ್ಧಿ ಗಾಗಿ ಶ್ರಮಿಸಿದ್ದಾರೆ ಎಂದರು.

ಶಾಸಕರಾದ ಸಿ.ಪುಟ್ಟರಂಗಶೆಟ್ಟಿ ಅವರು ಕಾಂಗ್ರೆಸ್ ಪಕ್ಷದಿಂದಲ್ಲೇ ರಾಜಕೀಯ ಆರಂಭಿಸಿದರು. ಅಧಿಕಾರ ಇರಲಿ, ಇಲ್ಲದಿದ್ದ ಸಂದರ್ಭದಲ್ಲೂ ಕಾಂಗ್ರೆಸ್ ಬಿಟ್ಟು ಹೋಗಿಲ್ಲ. ಅವರಿಗೆ ಬೇರೆ ಪಕ್ಷಗಳಿಂದಲ್ಲೂ ಅಫರ್ ಬಂದರು ಕೂಡ ಪಕ್ಷಾಂತರ ಮಾಡದೆ ಕಾಂಗ್ರೆಸ್ ನಲ್ಲಿ ನಿಷ್ಠಾವಂತರಾಗಿದ್ದು ಪಕ್ಷ ಬೆಳೆಸಿದ್ದಾರೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಕಟ್ಟ ಅಭಿಮಾನಿಯಾಗಿರುವ ಶಾಸಕ ಸಿ.ಪುಟ್ಟರಂಗಶೆಟ್ಟಿ ಅವರಿಗೆ ಸಚಿವ ಸ್ಥಾನ ನೀಡಿ ಚಾಮರಾಜನಗರ ಜಿಲ್ಲಾ ಉಸ್ತುವಾರಿ ಸಚಿವರನ್ನಾಗಿ ಮಾಡಬೇಕು ಕಾಂಗ್ರೆಸ್ ವರಿಷ್ಠರಿಗೆ , ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸುವುದಾಗಿ ತಿಳಿಸಿದರು. ಪತ್ರಿಕಾಗೋಷ್ಠಿಯಲ್ಲಿ ಹಾಪ್ ಕಾಮ್ಸ್ ನಿರ್ದೇಶಕ ಬಸವಶೆಟ್ಟಿ, ರಂಗಸ್ವಾಮಿ ಮದ್ದೂರು, ಮಹದೇವಶೆಟ್ಟಿ ಕಂದಹಳ್ಳಿ, ಗ್ರಾ.ಪಂ.ಮಾಜಿ ಸದಸ್ಯ ಮಾದೇಶ್ ಹಾಜರಿದ್ದರು.



**ಚಾಮರಾಜನಗರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಯಳಂದೂರು ಪಿಎಸಿಸಿಎಸ್ ಅಧ್ಯಕ್ಷ ವೈ.ಬಿ.ಮಹೇಶ್ ಮಾತನಾಡಿದರು, ತಾಲೂಕು ಭಗೀರಥ ಉಪ್ಪಾರ ಯುವಕರ ಸಂಘದ ಅಧ್ಯಕ್ಷ ಪಿ.ಮಾದೇಶ್ ಉಪ್ಪಾರ್ ಇತರರು ಹಾಜರಿದ್ದರು.**

# ಮಾಲಿನ್ಯ ನಿಯಂತ್ರಣ ಮಂಡಳಿ 50ರ ಸಂಭ್ರಮ

## ಅ.27ರಂದು ಸುವರ್ಣ ಮಹೋತ್ಸವ ಆಯೋಜನೆ: ಡಿಸಿ ಲಕ್ಷ್ಮಿಕಾಂತ್ ರೆಡ್ಡಿ



**ಮೈಸೂರು:** ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸ್ಥಾಪನೆಗೊಂಡು 50 ವರ್ಷಗಳು ಪೂರೈಸಿರುವ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಅ.27 ರಂದು ಸುವರ್ಣ ಮಹೋತ್ಸವ ಆಚರಿಸಲಾಗುವುದು ಎಂದು ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತ್ ರೆಡ್ಡಿ ಹೇಳಿದರು.

ಜಿಲ್ಲಾ ಪಂಚಾಯತ್ ಮಿನಿ ಸಭಾಂಗಣದಲ್ಲಿ ಸುವರ್ಣ ಮಹೋತ್ಸವ ಆಚರಿಸುವ ಸಂಬಂಧ ಆಯೋಜಿಸಲಾಗಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಅಕ್ಟೋಬರ್ 27 ರಂದು ಕಾರ್ಯಕ್ರಮ ಆಯೋಜಿಸಲು ಉತ್ತಮ ಸ್ಥಳವನ್ನು ಗುರುತಿಸಿ. ಕಾರ್ಯಕ್ರಮವನ್ನು ಮೈಸೂರು ಹಾಗೂ ಕೊಡಗು ಜಿಲ್ಲೆಗೆ ಸೇರಿದಂತೆ ಸಂಘಟಿಸಲಾಗುವುದು. ಸಂಘ ಸಂಸ್ಥೆಗಳ ಅಧ್ಯಕ್ಷರು, ಪದಾಧಿಕಾರಿಗಳು, ಸದಸ್ಯರು, ಸ್ಥಳೀಯ ಪರಿಸರವಾದಿಗಳು, ಕೈಗಾರಿಕೋದ್ಯಮಿಗಳು ಭಾಗವಹಿಸಲು ಆಹ್ವಾನ ನೀಡಿ ಎಂದರು.

ಕಾರ್ಯಕ್ರಮವನ್ನು ಉತ್ತಮ ರೀತಿಯಲ್ಲಿ ಆಚರಿಸುವ ಉದ್ದೇಶದಿಂದ ಸ್ವಾಗತ ಸಮಿತಿ, ವೇದಿಕೆ ಸಮಿತಿ, ಆಹಾರ ಸಮಿತಿ ಸೇರಿದಂತೆ ವಿವಿಧ ಸಮಿತಿಗಳನ್ನು ರಚಿಸಲಾಗಿರುತ್ತದೆ. ಅಧಿಕಾರಿಗಳು ತಮ್ಮ ಜವಾಬ್ದಾರಿಯನ್ನು ಯಾವುದೇ ಲೋಪವಾಗದಂತೆ ನಿರ್ವಹಿಸಬೇಕು. ಇ–ತ್ಯಾಜ್ಯ, ಪ್ಲಾಸ್ಟಿಕ್ ತ್ಯಾಜ್ಯ, ಘನ ತ್ಯಾಜ್ಯ, ಜಲ, ವಾಯು ಮಾಲಿನ್ಯ ತಡೆಗಟ್ಟುವ ನಿಟ್ಟಿನಲ್ಲಿ ಸಾರ್ವಜನಿಕರು ಹಾಗೂ ವಿದ್ಯಾರ್ಥಿಗಳ ಸಹಭಾಗಿತ್ವದಲ್ಲಿ ಕಾರ್ಯಕ್ರಮ ಮಾಡಲಾಗುವುದು, ಪರಿಸರ ಸಂರಕ್ಷಣೆ ಕುರಿತಾಗಿ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಲು ಜಿಲ್ಲಾ ಹಾಗೂ ತಾಲೂಕು ಮಟ್ಟದ ಸುವರ್ಣ ಮಹೋತ್ಸವ ಕಾರ್ಯಕ್ರಮ ನಡೆಸಲಾಗುವುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಾಲಾ, ಕಾಲೇಜು ವಿದ್ಯಾರ್ಥಿಗಳು, ವಸತಿ ಶಾಲೆಗಳ ವಿದ್ಯಾರ್ಥಿಗಳು ಭಾಗಿಯಾಗಬೇಕು, ಪರಿಸರ ಸಂರಕ್ಷಣೆ ಕುರಿತು ವಿದ್ಯಾರ್ಥಿಗಳು ಹಾಗೂ ಯುವಕರಲ್ಲಿ ಹೆಚ್ಚಿನ ಜಾಗೃತಿ ಮೂಡಿಸುವ ಅವಶ್ಯಕತೆ ಇದೆ ಎಂದು ಹೇಳಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಯುಕೇಶ್ ಕುಮಾರ್ ಎಸ್, ನಗರ ವಿಭಾಗದ ಪರಿಸರ ಅಧಿಕಾರಿ ವಿ.ಎಸ್. ಕುಮಾರ್, ಗ್ರಾಮೀಣ ವಿಭಾಗದ ಪರಿಸರ ಅಧಿಕಾರಿ ವಿ. ಸುನೀಲ್ ಸೇರಿ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಕೊತ್ತನೂರು ಅಸ್ಥಿಪಂಜರ ಪ್ರಕರಣ: ಗುರುತು ಪತ್ತೆಗೆ ನೆರವಾಯ್ತು ಹಲ್ಲು ಸೆಟ್..!

**ಬೆಂಗಳೂರು:** ಕೊತ್ತನೂರಿನ ನಿರ್ಮಾಣ ಹಂತದ ಕಟ್ಟಡದಲ್ಲಿ ಇತ್ತೀಚೆಗೆ ಪತ್ತೆಯಾದ ಅಸ್ಥಿಪಂಜರ ಕುತೂಹಲಕ್ಕೆ ಕೊನೆಗೂ ತೆರೆ ಬಿದ್ದಿದೆ. ಘಟನಾ ಸ್ಥಳದಲ್ಲಿ ಸಿಕ್ಕ ಹಲ್ಲು ಸೆಟ್‌ನಿಂದ ಮೃತ ವ್ಯಕ್ತಿಯ ಗುರುತು ಪತ್ತೆ ಹಚ್ಚುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ.

ಮೃತ ವ್ಯಕ್ತಿಯನ್ನು ಆವಲಹಳ್ಳಿಯ ಸೋಮಯ್ಯ (69) ಎಂದು ಗುರುತಿಸಲಾಗಿದೆ. ಕೊತ್ತನೂರಿನ ಸಮೃದ್ಧಿ ಅಪಾರ್ಟ್‌ಮೆಂಟ್ ಸಮೀಪ 10 ವರ್ಷಗಳಿಂದ ಕಾಮಗಾರಿ ಸ್ಥಗಿತಗೊಂಡಿರುವ ಕಟ್ಟಡದಲ್ಲಿ ಅ.4ರಂದು ಅಸ್ಥಿಪಂಜರ ಪತ್ತೆಯಾಗಿತ್ತು.

ಈ ಬಗ್ಗೆ ಕಾರ್ಮಿಕರು ನೀಡಿದ ಮಾಹಿತಿ ಮೇರೆಗೆ ಕೊತ್ತನೂರು ಠಾಣೆ ಪೊಲೀಸರು ಸ್ಥಳಕ್ಕೆ ಧಾವಿಸಿ ಅಸ್ಥಿಪಂಜರ ವಶಕ್ಕೆ ಪಡೆದು ತನಿಖೆ ಆರಂಭಿಸಿದ್ದರು.

ತನಿಖೆ ವೇಳೆ ಅಸ್ಥಿಪಂಜರ ಸಿಕ್ಕ ಸ್ಥಳದಲ್ಲಿ ಹಲ್ಲು ಸೆಟ್ ಕೂಡ ಪತ್ತೆಯಾಗಿತ್ತು. 2020 –21ನೇ ಸಾಲಿನಲ್ಲಿ ಅಂಬೇಡ್ಕರ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿದ್ದ ವ್ಯಕ್ತಿಯದು ಎಂಬುದು ದಾಖಲೆಗಳಿಂದ ದೃಢಪಟ್ಟಿದ್ದು, ಇದರ ಆಧಾರದ ಮೇಲೆ ಪೊಲೀಸರು ತನಿಖೆ ಮುಂದುವರಿಸಿದ್ದರು.

ಈ ನಡುವೆ ನಾಪತ್ತೆ ಪ್ರಕರಣಗಳ ಪರಿಶೀಲನೆ ವೇಳೆ 2023ನೇ ಸಾಲಿನಲ್ಲಿ ಸೋಮಯ್ಯ ಎಂಬುವವರು ನಾಪತ್ತೆಯಾಗಿರುವ ಬಗ್ಗೆ ಅವರ ಪುತ್ರ ಕಿರಣ್ ಕುಮಾರ್ ಆವಲಹಳ್ಳಿ ಪೊಲೀಸ್ ಠಾಣೆಗೆ ದೂರು ನೀಡಿದ್ದರು.

ಅಸ್ಥಿಪಂಜರ ಪತ್ತೆಯಾದ ಸ್ಥಳದಲ್ಲಿ ಸ್ಟೈಲ್ ಯೂನಿಯನ್ ಬ್ರಾಂಡ್ ಟೀ ಶರ್ಟ್ ಮತ್ತು ಪ್ಯಾರಾಗಾನ್ ಚಪ್ಪಲಿ ಸಹ ಸಿಕ್ಕಿದ್ದವು.

ಸೋಮಯ್ಯ ನಾಪತ್ತೆ ವೇಳೆ ಧರಿಸಿದ್ದ ಉಡುಪುಗಳು ಇದೇ ಮಾದರಿಯಾಗಿದ್ದವು. ಈ ಬಗ್ಗೆ ಅನುಮಾನಗೊಂಡು ದೂರುದಾರ ಕಿರಣ್‌ರನ್ನು ಕರೆಸಿ ವಸ್ತು ತೋರಿಸಿದಾಗ ಅವು ತಮ್ಮ ತಂದೆ ಸೋಮಯ್ಯ ಅವರದೇ ಎಂದು ಖಚಿತಪಡಿಸಿದ್ದಾರೆ. ಬಳಿಕ ಪೊಲೀಸರು ಸೋಮಯ್ಯ ಅಸ್ಥಿಪಂಜರವನ್ನು ಪುತ್ರ ಕಿರಣ್‌ಗೆ ಒಪ್ಪಿಸಿದ್ದಾರೆ.

ಇನ್ನು ಸಾವಿಗೆ ಕಾರಣ ನಿಗೂಢವಾಗಿದ್ದು, ಸೋಮಯ್ಯ ನಿರ್ಮಾಣ ಹಂತದ ಕಟ್ಟಡದೊಳಗೆ ಏಕೆ ಬಂದರು?ಹೇಗೆ ಮೃತಪಟ್ಟರು ಎಂಬುದನ್ನು ಪತ್ತೆ ಮಾಡಲು ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

# ಕುರುಬೂರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ನೂತನ ಅಧ್ಯಕ್ಷ-ಉಪಾಧ್ಯಕ್ಷರ ಅವಿರೋಧ ಆಯ್ಕೆ



ತಿ.ನರಸೀಪುರ: ಕುರುಬೂರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ (ಪಿಎಸ್‌ಎಸ್‌ಎಸ್) ಚುನಾವಣೆಯಲ್ಲಿ ಅಧ್ಯಕ್ಷರಾಗಿ ಮಹದೇವಸ್ವಾಮಿ ಹಾಗೂ ಉಪಾಧ್ಯಕ್ಷರಾಗಿ ಕೆ.ಎಂ. ಶಿವಕುಮಾರ್ ಅವಿರೋಧವಾಗಿ ಆಯ್ಕೆಯಾದರು.

ಕುರುಬೂರು ಸಹಕಾರ ಸಂಘದ ಕಚೇರಿಯಲ್ಲಿ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನ ಬಯಸಿ ಮಹದೇವಸ್ವಾಮಿ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಶಿವಕುಮಾರ್ ವರೆತು ಪಡೆಸಿ ಮತ್ಯಾರು ನಾಮ ಪತ್ರ ಸಲ್ಲಿಸದ ಕಾರಣ ಮಹದೇವಸ್ವಾಮಿ ಹಾಗೂ ಕೆ.ಎಂ.ಶಿವಕುಮಾರ್ ರವರು ಅಧ್ಯಕ್ಷ ಮತ್ತು ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದರೆಂದು ಚುನಾವಣೆ ಅಧಿಕಾರಿ ಘೋಷಣೆ ಮಾಡಿದರು

ನೂತನ ಆಯ್ಕೆಯಾದ ಅಧ್ಯಕ್ಷ ಮಹದೇವಸ್ವಾಮಿ ಮಾತನಾಡಿ,ನಮ್ಮ ಸಂಘ ಈಗಾಗಲೇ ಲಾಭದಲ್ಲಿದೆ. ಮುಂದಿನ ದಿನಗಳಲ್ಲಿ ಆಡಳಿತ ಮಂಡಳಿಯ ಸದಸ್ಯರ ಸಹಕಾರದಿಂದ ಸಂಘವನ್ನು ಇನ್ನಷ್ಟು ಬಲಿಷ್ಠವಾಗಿಸಿ, ರೈತರ ಹಿತಕ್ಕಾಗಿ ಕಾರ್ಯ ಚಟುವಟಿಕೆಗಳನ್ನು ವಿಸ್ತರಿಸಲಾಗುವುದು ಎಂದರು. ಉಪಾಧ್ಯಕ್ಷ ಕೆ.ಎಂ. ಶಿವಕುಮಾರ್ ಅವರು ಮಾತನಾಡಿ, ?ಸರ್ಕಾರದಿಂದ ಸಿಗುವ ಎಲ್ಲ ರೀತಿಯ ಸೌಲಭ್ಯಗಳನ್ನು ರೈತರಿಗೆ ತಲುಪಿಸುವುದೇ ನಮ್ಮ ಮೊದಲ ಆದ್ಯತೆ. ಸಹಕಾರಿ ಬಂಧುಗಳು ಹಾಗೂ ಸದಸ್ಯರ ಸಲಹೆ?ಸಹಕಾರದೊಂದಿಗೆ ಸಂಘವನ್ನು ಇನ್ನಷ್ಟು ಸದೃಢಗೊಳಿಸಲು ನಾವು ಬದ್ಧರಾಗಿದ್ದೇವೆ,? ಎಂದು ಹೇಳಿದರು. ಈ ಸಂದರ್ಭದಲ್ಲಿ ನಿರ್ದೇಶಕರುಗಳಾದ ಕುರುಬೂರು ಕೆ. ಎಸ್.ನಾಗರಾಜು ಮೂರ್ತಿ, ಕೊತ್ತೆಗಾಲ ಕೆ.ಎಂ ಮಹದೇವಸ್ವಾಮಿ, ಕುರುಬೂರು ಎನ್ ಶಾಂತ, ತೊಟ್ಟವಾಡಿ ಎಂ. ರವಿ, ಮಾಡ್ರಳ್ಳಿ ಜಯಪ್ಪ, ಮಂಜುಳ, ಲಲಿತಮ್ಮ, ಪುಟ್ಟಸ್ವಾಮಿ,ಶಿವಮಲ್ಲಯ್ಯ, ಸಹಕಾರ ಸಂಘದ ವ್ಯಾಪ್ತಿಗೆ ಸೇರಿದ ಎಲ್ಲಾ ಗ್ರಾಮದ ಮುಖಂಡಗಳಿಗೂ.ತಾ.ಪಂ. ಸದಸ್ಯರಾದ ಸೀಹಳ್ಳಿ ಗುರುಮೂರ್ತಿ ಅಭಿನಂದಿಸಿದ್ದರು.

# ನ್ಯಾಯಮೂರ್ತಿಗಳ ಮೇಲೆ ಶೂ ಎಸೆದವನ ಗಡಿಪಾರಿಗೆ ಆಗ್ರಹ



**ಮೈಸೂರು:** ನ್ಯಾಯಮೂರ್ತಿಗಳ ಮೇಲೆ ಶೂ ಎಸೆದ ಮನುವಾದಿ ವಕೀಲನನ್ನು ದೇಶದಿಂದಲೇ ಗಡಿಪಾರು ಮಾಡಿ ಆತನ ವಿರುದ್ಧ ಕ್ರಮಕ್ಕೆ ದೇಶದ ಎಲ್ಲಾ ನ್ಯಾಯಮೂರ್ತಿಗಳು ಪತ್ರಬರೆಯಬೇಕೆಂದು ಮೈಸೂರು ಜಿಲ್ಲಾ ಕಾಂಗ್ರೆಸ್ ಸಂಶೋಧನಾ ವಿಭಾಗದ ಅಧ್ಯಕ್ಷ ಡಾ.ಎಂ.ನಾಗರಾಜು ಒತ್ತಾಯಿಸಿದರು.

ಸರ್ವೋಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಭೂಷಣ್ ರಾಮಕೃಷ್ಣ ಗವಾಯಿ ಅವರ ಮೇಲೆ ವಕೀಲ ರಾಕೇಶ್ ಕಿಶೋರ್ ಶೂ ಎಸೆದ ಪ್ರಕರಣವನ್ನು ಖಂಡಿಸಿ ನಗರದ ಜಿಲ್ಲಾಧಿಕಾರಿ ಕಚೇರಿ ಮುಂದೆ ಮೈಸೂರು ಜಿಲ್ಲಾ ಕಾಂಗ್ರೆಸ್ ಸಂಶೋಧನೆ ಹಾಗೂ ತರಬೇತಿವಿಭಾಗವತಿಯಿಂದ ಪ್ರತಿಭಟಿಸಲಾಯಿತು. ಪ್ರತಿಭಟನೆ ನೇತೃತ್ವವಹಿಸಿ ಮಾತನಾಡಿದ ಅವರು, ನ್ಯಾಯಮೂರ್ತಿಗಳನ್ನು ಗುರಿಯಾಗಿಟ್ಟುಕೊಂಡು ನಡೆದ ಬೆಳವಣಿಗೆ ಆಘಾತಕಾರಿಯಾಗಿದೆ. ದೇಶದ ನ್ಯಾಯಾಂಗ ವ್ಯವಸ್ಥೆ ಮೇಲೆ ನಡೆದಿರುವ ಪೈಶಾಚಿಕ ಕೃತ್ಯವಾಗಿರುತ್ತದೆ. ನ್ಯಾಯಮೂರ್ತಿಯವರು ದಲಿತ ಸಮುದಾಯಕ್ಕೆ ಸೇರಿದ್ದು ಸಾಮಾಜಿಕ ಪ್ರತಿರೋಧಕಗಳನ್ನು ಹೆದರಿಸಿ ಅರ್ಹತೆ ಮತ್ತು ಸಾಧನೆ ಮೂಲಕ ಇಂತಹ ಅತ್ಯುನ್ನತ ಸ್ಥಾನವನ್ನು ಹೊಂದಿರುವುದನ್ನು ಸಹಿಸದೇ ಈ ಕೃತ್ಯ ಎಸಗಿರುತ್ತಾರೆ. ಶೂ ಎಸೆದ ವ್ಯಕ್ತಿ ಸನಾತನಕ್ಕೆ ಅಗೌರವ ತೋರುವುದನ್ನು ಭಾರತ ಸಹಿಸುವುದಿಲ್ಲ ಎಂಬ ಘೋಷಣೆ ಕೂಗಿರುವುದರಿಂದ ಇವನೊಬ್ಬ ಜಾತಿವಾದಿಯಾಗಿದ್ದಾನೆ.

ಮತಿಯವಾದಿ ಹಾಗೂ ಸನಾತನವಾದಿಯಾಗಿದ್ದು, ದೇವರ ಪ್ರೇರಣೆಯಿಂದ ಈ ಕೃತ್ಯ ಎಸಗಿರುವುದಾಗಿ ಹೇಳಿಕೆ ನೀಡಿರುವುದು ನಿಜಕ್ಕೂ ಆಶ್ಚರ್ಯ ಉಂಟು ಮಾಡುತ್ತದೆ. ಭಾರತ ಸಂವಿಧಾನವನ್ನು ಅಡಿಪಾಯವನ್ನಾಗಿರಿಸಿಕೊಂಡು ದೇಶವನ್ನು ಕಟ್ಟಲಾಗಿದೆ ವಿನಃ ಸನಾತನ ಧರ್ಮದಿಂದಲ್ಲ ಎಂಬುದನ್ನು ಯಾರೂ ಮರೆಯಬಾರದು ಎಚ್ಚರಿಕೆ ನೀಡಿದರು.

ಇಡೀ ದೇಶ ಈ ಕೃತ್ಯವನ್ನು ಕಂಡಿಸಬೇಕು ಎಂದಿದ್ದಾರೆ. ವಿದೇಶದಲ್ಲಿಯೂ ಸಹ ಈ ಕೃತ್ಯದ ಬಗ್ಗೆ ಚರ್ಚೆಯಾಗಿರುತ್ತದೆ. ಭಾರತ ಸಂವಿಧಾನವನ್ನು ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ರಕ್ಷಣೆ ಮಾಡುವ ಹಾಗೂ ಎತ್ತಿ ಹಿಡಿಯುವ ನ್ಯಾಯಮೂರ್ತಿಗಳನ್ನು ಹೆದರಿಸುವ ಅವಮಾನಿಸುವ ಯತ್ನ ಇದಾಗಿದ್ದು, ಇದರ ಹಿಂದೆ ಸನಾತನ ಧರ್ಮವನ್ನು ಪ್ರತಿಪಾದಿಸುವ ಜಾತಿವಾದಿಗಳ, ಮನುವಾದಿಗಳ ಹಾಗೂ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಬೆಂಬಲ ಇರುತ್ತದೆ ಎನ್ನುವ ಅನುಮಾನ ವ್ಯಕ್ತವಾಗುತ್ತಿದೆ. ಈ ಹಿನ್ನೆಲೆಯಲ್ಲಿ ರಾಷ್ಟ್ರಪತಿಗಳು ಈ ಬಗ್ಗೆ ಸೂಕ್ತ ಕ್ರಮ ಜರುಗಿಸಬೇಕೆಂದು ಈ ಮೂಲಕ ಕೋರಲಾಗಿದೆ ಎಂದರು.

# ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ನೀಡಲು ಅರ್ಜಿ ಆಹ್ವಾನ

**ತುಮಕೂರು:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ತಾಲ್ಲೂಕು ಮಟ್ಟದ ಪತ್ರಕರ್ತರು ತಮ್ಮ ವೃತ್ತಿನಿರತ ಚಟುವಟಿಕೆಗಳ ಸಂಬಂಧ ತಮ್ಮ ಜಿಲ್ಲಾದ್ಯಂತ ಉಚಿತವಾಗಿ ಸಂಚರಿಸಲು ಅನುಕೂಲವಾಗುವಂತೆ ಉಚಿತ ಬಸ್ ಪಾಸ್ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಪತ್ರಕರ್ತರು ತಾವು ಕಾರ್ಯನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಗಳಿಂದ ಸೇವಾ ಪ್ರಮಾಣಪತ್ರ, ಶಿಫಾರಸ್ಸು ಪತ್ರ ಮತ್ತು 11 ತಿಂಗಳುಗಳ ವೇತನಪತ್ರ (ಲೈನೇಜ್/ಸಂಭಾವನೆ/ಕಮೀಷನ್ ಪಡೆದಿರುವ ದಾಖಲೆ)ಗಳನ್ನು ಅಥವಾ ವೇತನ ಜಮಾ ಆಗಿರುವ ಮಾಹಿತಿ ಇರುವಂತಹ ಬ್ಯಾಂಕ್ ಸ್ಟೇಟ್‌ಮೆಂಟ್ ಲಗತ್ತಿಸಿ "ಸೇವಾಸಿಂಧು" ಪೋರ್ಟಲ್ https://sevasindhu.karnataka.gov.in ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆನ್‌ಲೈನ್‌ನಲ್ಲಿ ಸಲ್ಲಿಸಲಾದ ಅರ್ಜಿ ಮತ್ತು ಲಗತ್ತಿಸಲಾಗಿರುವ ದಾಖಲೆಗಳ ಒಂದು ಪ್ರತಿಯನ್ನು ಆಯಾ ಜಿಲ್ಲೆಯ ವಾರ್ತಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು. ಸ್ವೀಕೃತ ಅರ್ಜಿಗಳನ್ನು ಆಯ್ಕೆ ಸಮಿತಿಯ ಸಭೆಯಲ್ಲಿ ಪರಿಶೀಲಿಸಿ ಬಸ್ ಪಾಸ್ ಮಂಜೂರು ಮಾಡಲಾಗುತ್ತದೆ.

ರಾಜ್ಯದ ಎಲ್ಲ ತಾಲ್ಲೂಕುಗಳ ಅರ್ಹ ಪತ್ರಕರ್ತರು ಕೂಡಲೇ "ಸೇವಾಸಿಂಧು" ಪೋರ್ಟಲ್ ಮೂಲಕ ಅರ್ಜಿಯನ್ನು ಸಲ್ಲಿಸುವುದರ ಮೂಲಕ ಈ ಸದುಪಯೋಗ ಪಡೆದುಕೊಳ್ಳಬಹುದು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತ ಹೇಮಂತ್ ನಿಂಬಾಳ್ಕರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತುಮಕೂರು ನಗರ ಉಪವಿಭಾಗ–1: ಅ.15 ರಿಂದ ವಿದ್ಯುತ್ ವ್ಯತ್ಯಯ

ತುಮಕೂರು: ಬೆಸ್ಕಾಂ ನಗರ ಉಪವಿಭಾಗ–1ರ ವ್ಯಾಪ್ತಿಯಲ್ಲಿ ರಾಷ್ಟ್ರೀಯ ಹೆದ್ದಾರಿ ಅಗಲೀಕರಣ ಕಾಮಗಾರಿ ಕೈಗೊಂಡಿರುವುದರಿಂದ ಅಕ್ಟೋಬರ್ 15 ಮತ್ತು 16ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ರಂಗಾಪುರ, ಲಿಂಗಾಪುರ, ಬಾಲಾಜಿಲೇಔಟ್, ಅಣ್ಣೇನಹಳ್ಳಿ, ತಿಮ್ಮಲಾಪುರ, ನರಸಾಪುರ, ಶ್ರೀದೇವಿ ಕಾಲೇಜು, ಸಿರಾಗೇಟ್, ವಾಸವಿನಗರ, ಹೊಸಹಳ್ಳಿ, ಎ.ಎಮ್.ಪಾಳ್ಯ, ಹೊನ್ನೇನಹಳ್ಳಿ, ಹೌಸಿಂಬೋರ್ಡ್, ಎಸ್.ಎನ್.ಪಾಳ್ಯ, ಶಿರಾಗೇಟ್ 80 ಅಡಿ ರಸ್ತೆ, ನಾಗಣ್ಣನಪಾಳ್ಯ, ಚಿಕ್ಕವೀರಯ್ಯನಪಾಳ್ಯ, ಟೂಡಾ ಲೇಔಟ್, ಎಸ್.ಎನ್.ಪಾಳ್ಯ, ಸಾಯಿನಗರ, ಹೊನ್ನೇನಹಳ್ಳಿ, ಸಿರಾಗೇಟ್ ಹೌಸಿಂಗ್ ಬೋರ್ಡ್, ಲಿಂಗಾಪುರ ವಾಸವಿನಗರ, ಅರಳೀಮರದ ಪಾಳ್ಯ, ಮಲ್ಲೇನಹಳ್ಳಿ, ಹೆಬ್ಬಾಕ, ಊರುಕೆರೆ ಕರೇಕಲ್ಲು ಸೇರಿದಂತೆ ಇತರೆ ಪ್ರದೇಶಗಳಲ್ಲಿ ಮಧ್ಯಂತರ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸಬೇಕೆಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ನಾಗರಾಜು ಹೆಚ್.ಪಿ. ಮನವಿ ಮಾಡಿದ್ದಾರೆ.

# ಶಿರಾ ನಗರ ಉಪವಿಭಾಗ: ಅ.15 ರಿಂದ ವಿದ್ಯುತ್ ವ್ಯತ್ಯಯ

**ತುಮಕೂರು:** ಬೆಸ್ಕಾಂ ಶಿರಾ ನಗರ ಉಪವಿಭಾಗ ವ್ಯಾಪ್ತಿಯ ದುರಸ್ತಿ ಕಾಮಗಾರಿ ಕೈಗೊಂಡಿರುವ ಹಿನ್ನೆಲೆಯಲ್ಲಿ ಅಕ್ಟೋಬರ್ 15 ಮತ್ತು 16ರಂದು ಬೆಳಿಗ್ಗೆ 9 ರಿಂದ ಸಂಜೆ 6 ಗಂಟೆವರೆಗೆ ಯಲಿಯೂರು ಮತ್ತು ಭೂವನಹಳ್ಳಿ ಪಂಚಾಯ್ತಿಯ ಗ್ರಾಮಗಳು, ಶಿವಾಜಿನಗರ ಆರ್.ಎಂ.ಸಿ ಮಾರ್ಕೆಟ್ ಮಂಭಾಗ, ಕೆ.ಎಸ್.ಆರ್.ಟಿ.ಸಿ. ಡಿಪೋ ಹಿಂಭಾಗದ ಸಂತೆಪೇಟೆ, ಕೋಟೆ, ರಬ್ ನಗರ, ಗಡಿಮಾರನಹಟ್ಟಿ, ಲಾಡ್‌ಪುರ, ಎಂ.ಬಿ.ಟಿ ಲೇಔಟ್, ಚನ್ನನಕುಂಟೆ ರಸ್ತೆ, ಶಿರಾ ಸುತ್ತಮುತ್ತಲಿನ ಎಲ್ಲಾ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸಬೇಕೆಂದು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಮನವಿ ಮಾಡಿದ್ದಾರೆ.

# ಲೋಕ್ ಅದಾಲತ್‌ನಲ್ಲಿ 13,17,162 ಪ್ರಕರಣಗಳ ವಿಲೇವಾರಿ–ನ್ಯಾ. ಜಯಂತ್ ಕುಮಾರ್



**ತುಮಕೂರು:** ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ಕಳೆದ ಲೋಕ್ ಅದಾಲತ್‌ನಲ್ಲಿ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಬಾಕಿಯಿದ್ದ 1,05,209 ಪ್ರಕರಣಗಳ ಪೈಕಿ 13968 ಪ್ರಕರಣ ಹಾಗೂ 13,03,194 ವ್ಯಾಜ್ಯ ಪೂರ್ವ ಪ್ರಕರಣಗಳು ಸೇರಿದಂತೆ ಒಟ್ಟು 13,17,162 ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಬಿ. ಜಯಂತ್ ಕುಮಾರ್ ಹೇಳಿದರು.

ರಾಷ್ಟ್ರೀಯ ಲೋಕ್ ಅದಾಲತ್ ಕಾರ್ಯಕ್ರಮ ಕುರಿತು ನಗರದ ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿ ಸೋಮವಾರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾಹಿತಿ ಹಂಚಿಕೊಂಡು ಮಾತನಾಡಿದ ಅವರು, ಸಮಾಜದ ದುರ್ಬಲ ವರ್ಗಗಳಿಗೆ ಉಚಿತ ಮತ್ತು ಸಕ್ಷಮ ಕಾನೂನು ಸೇವೆಗಳನ್ನು ಒದಗಿಸುವ ಸಲುವಾಗಿ ಡಿಸೆಂಬರ್ 13ರಂದು ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ರಾಷ್ಟ್ರೀಯ ಜನತಾ ನ್ಯಾಯಾಲಯ(ಲೋಕ್ ಆದಾಲತ್) ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಜನರು ಈ ಅದಾಲತ್ತಿನ ಸದುಪಯೋಗ ಪಡೆದುಕೊಳ್ಳಬೇಕೆಂದು ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ನಡೆಸಲಾಗುವ ಲೋಕ್ ಆದಾಲತ್ ಅಥವಾ ಜನತಾ ನ್ಯಾಯಾಲಯದಲ್ಲಿ ವ್ಯಾಜ್ಯಪೂರ್ವ ಹಾಗೂ ಬಾಕಿ ಇರುವ ಪ್ರಕರಣಗಳನ್ನು ಶೀಘ್ರವಾಗಿ ಇತ್ಯರ್ಥ ಪಡಿಸಿಕೊಳ್ಳಬಹುದಾಗಿದೆ. ಜನಸಾಮಾನ್ಯರಿಗೆ ರಾಜಿ ಸಂಧಾನದ ಮೂಲಕ ವ್ಯಾಜ್ಯಗಳನ್ನು ಇತ್ಯರ್ಥಪಡಿಸಲು ಈ ಜನತಾ ನ್ಯಾಯಾಲಯವನ್ನು ಸ್ಥಾಪಿಸಲಾಗಿದೆ ಎಂದು ತಿಳಿಸಿದರು.

ಜನತಾ ನ್ಯಾಯಾಲಯದಲ್ಲಿ ಚೆಕ್ ಅಮಾನ್ಯ, ಬ್ಯಾಂಕ್ ವಸೂಲಾತಿ, ಕಾರ್ಮಿಕ ವಿವಾದ, ವಿದ್ಯುತ್ ಹಾಗೂ ನೀರಿನ ಶುಲ್ಕ ಪ್ರಕರಣ ಸೇರಿದಂತೆ ವ್ಯಾಜ್ಯಪೂರ್ವ ಪ್ರಕರಣಗಳು ಹಾಗೂ ರಾಜಿಯಾಗಬಲ್ಲ ಅಪರಾಧಿಕ ಪ್ರಕರಣ, ಬ್ಯಾಂಕ್ ವಸೂಲಾತಿ, ಕಾರ್ಮಿಕ ವಿವಾದ, ಭೂಸ್ವಾಧೀನ, ಸಾಲ ವಸೂಲಾತಿ ನ್ಯಾಯಾಧೀಕರಣ, ಮೋಟಾರು ಅಪಘಾತ ಪರಿಹಾರ ನ್ಯಾಯಾಧೀಕರಣ ಸೇರಿದಂತೆ ನ್ಯಾಯಾಲಯದಲ್ಲಿ ಬಾಕಿಯಿರುವ ಪ್ರಕರಣಗಳನ್ನು ಶೀಘ್ರವಾಗಿ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ಜನತಾ ನ್ಯಾಯಾಲಯಗಳಲ್ಲಿ ಕಕ್ಷಿದಾರರು ನೇರವಾಗಿ ಅಥವಾ ವಕೀಲರ ಮೂಲಕ ಭಾಗವಹಿಸಬಹುದು. ನ್ಯಾಯಾಲಯದಲ್ಲಿ ಇರುವ(ವ್ಯಾಜ್ಯಪೂರ್ವ) ಪ್ರಕರಣಗಳನ್ನೂ ರಾಜಿ ಸಂಧಾನದ ಮೂಲಕ ಬಗೆಹರಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಉಭಯ ಪಕ್ಷಕಾರರು ರಾಜಿ ಮಾಡಿಕೊಳ್ಳಲು ಮಾರ್ಗದರ್ಶನ ನೀಡಲಾಗುವುದು. ಸಂಧಾನಕಾರರು ಸೂಚಿಸುವ ಪರಿಹಾರ ಕಕ್ಷಿದಾರರಿಗೆ ಒಪ್ಪಿಗೆಯಾದಲ್ಲಿ ಮಾತ್ರ ರಾಜಿ ಮಾಡಿಕೊಳ್ಳಬಹುದಾಗಿದೆ. ಕಡಿಮೆ ಖರ್ಚಿನಲ್ಲಿ ಶೀಘ್ರ ತೀರ್ಮಾನಕ್ಕಾಗಿ ಜನತಾ ನ್ಯಾಯಾಲಯವು ವಿಶೇಷ ಅವಕಾಶವಾಗಿದೆ ಎಂದರು.

ಮಧ್ಯಸ್ಥಿಕೆ ರಾಷ್ಟ್ರಕ್ಕಾಗಿ 90 ದಿನಗಳ ವಿಶೇಷ ಅಭಿಯಾನದಡಿ ಜಿಲ್ಲೆಯಲ್ಲಿ ಸಾರ್ವಜನಿಕರಿಂದ ಉತ್ತಮ ಸ್ಪಂದನೆ ದೊರೆತಿದ್ದು, ಜಿಲ್ಲಾ ನ್ಯಾಯಾಲಯಗಳಲ್ಲಿ ಒಟ್ಟು 82,546 ಪ್ರಕರಣಗಳಲ್ಲಿ 2,402 ಪ್ರಕರಣಗಳನ್ನು ಮಧ್ಯಸ್ಥಿಕೆಗಾಗಿ ಗುರುತಿಸಲಾಗಿದ್ದು, ಒಟ್ಟು 142 ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿದೆ ಎಂದು ಹೇಳಿದರಲ್ಲದೆ, ಈ ಅಭಿಯಾನದ, ಟ್ರಾಫಿಕ್ ನಿಯಮ ಉಲ್ಲಂಘನೆ ಪ್ರಕರಣಗಳಿಗೆ ಶೇಕಡಾ 50 ರಿಯಾಯಿತಿ ನೀಡಲಾಗಿದ್ದು, ಜಿಲ್ಲೆಯಲ್ಲಿ 24,725 ಪ್ರಕರಣಗಳಿಂದ 71,53,150 ರೂ.ಗಳನ್ನು ಶೇಖರಿಸಲಾಗಿದೆ ಎಂದು ತಿಳಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ನೂರುನ್ನೀಸ ಮಾತನಾಡಿ, ಲೋಕ್ ಅದಾಲತ್‌ನಲ್ಲಿ ಆಗುವ ತೀರ್ಮಾನವೇ ಅಂತಿಮ. ಪ್ರಕರಣ ಇತ್ಯರ್ಥವಾದ ಬಳಿಕ ಮೇಲ್ಮನವಿಗೆ ಅವಕಾಶ ಇರುವುದಿಲ್ಲ. ಸಾರ್ವಜನಿಕರು ತಮ್ಮ ವ್ಯಾಜ್ಯಪೂರ್ವ ಹಾಗೂ ನ್ಯಾಯಾಲಯದಲ್ಲಿ ಬಾಕಿಯಿರುವ ಪ್ರಕರಣಗಳನ್ನು ಡಿಸೆಂಬರ್ 13ರಂದು ನಡೆಯಲಿರುವ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ಲೋಕ್ ಅದಾಲತ್‌ನಲ್ಲಿ ರಾಜಿ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲಿಚ್ಛಿಸುವವರು ಹೆಚ್ಚಿನ ಮಾಹಿತಿಗಾಗಿ ಇ–ಮೇಲ್ ವಿಳಾಸ: ಘುಚಿಣಣಟಇಣಡಿ1@ರಟಚುಟ.ಥಿಂಟ ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಯವರ ಕಚೇರಿ ದೂರವಾಣಿ ಸಂಖ್ಯೆ: 0816–2255133 ಮತ್ತು ಮೊ.ಸಂ.9141193959 ಹಾಗೂ ಕಾನೂನು ಸಹಾಯಕ್ಕಾಗಿ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ಸಹಾಯವಾಣಿ ಸಂಖ್ಯೆ: 15100ಯನ್ನು ಸಂಪರ್ಕಿಸಬಹುದು ಎಂದು ಅವರು ತಿಳಿಸಿದರು.

# ನ.14ರಂದು ಜಿಲ್ಲಾ ಉದ್ಯೋಗ ಮೇಳ: ಜಿಲ್ಲಾಧಿಕಾರಿ ಶುಭ ಕಲ್ಯಾಣ್



**ತುಮಕೂರು:** ಜಿಲ್ಲೆಯ ನಿರುದ್ಯೋಗಿಗಳಿಗೆ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶದಿಂದ ನವೆಂಬರ್ 14ರಂದು ನಗರದ ವಿಶ್ವವಿದ್ಯಾನಿಲಯದಲ್ಲಿ ಜಿಲ್ಲಾ ಉದ್ಯೋಗ ಮೇಳವನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮವಾರ ಪೂರ್ವಭಾವಿ ಸಭೆ ನಡೆಸಿ ಮಾತನಾಡುತ್ತಾ, ಈ ಉದ್ಯೋಗ ಮೇಳವು ನಿರುದ್ಯೋಗಿ ಯುವಕ/ಯುವತಿಯರಿಗೆ ಉದ್ಯೋಗ ಕಲ್ಪಿಸುವ ಉತ್ತಮ ವೇದಿಕೆಯಾಗಿದ್ದು, ನಗರದ ಹೊರವಲಯದಲ್ಲಿರುವ ಕೈಗಾರಿಕಾ ಸಂಸ್ಥೆಗಳು ಹಾಗೂ ಖಾಸಗಿ ಕಂಪನಿಗಳ ಮುಖ್ಯಸ್ಥರೊಂದಿಗೆ ಸಭೆ ನಡೆಸಿ, ಸಂಸ್ಥೆಗಳಲ್ಲಿ ಖಾಲಿ ಇರುವ ಹುದ್ದೆಗಳ ಕುರಿತು ಮಾಹಿತಿ ಪಡೆದುಕೊಳ್ಳಬೇಕು. ಈ ಮಾಹಿತಿಯನುಸಾರ ನಿರುದ್ಯೋಗಿ ಯುವಕ ಹಾಗೂ ಯವತಿಯರಿಗೆ ಸೂಕ್ತ ಮಾರ್ಗದರ್ಶನ ನೀಡುವ ವ್ಯವಸ್ಥೆ ಮಾಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಉದ್ಯೋಗ ಮೇಳದಲ್ಲಿ ವಿವಿಧ ಕಂಪನಿ, ಕೈಗಾರಿಕಾ ಘಟಕ ಹಾಗೂ ಶಿಕ್ಷಣ ಸಂಸ್ಥೆಗಳು ಭಾಗವಹಿಸುವ ವ್ಯವಸ್ಥೆ ಮಾಡಬೇಕು. ಇಂಜಿನಿಯರಿಂಗ್, ಡಿಪ್ಲೋಮಾ, ಐಟಿಐ, ಪದವಿ ಹಾಗೂ ಪಿಯುಸಿ ಅರ್ಹತೆಯುಳ್ಳ ಅಭ್ಯರ್ಥಿಗಳಿಗೆ ಉದ್ಯೋಗಾವಕಾಶ ಕಲ್ಪಿಸಬೇಕೆಂದು ನಿರ್ದೇಶನ ನೀಡಿದರು. ಸಭೆಯಲ್ಲಿ ತಹಶೀಲ್ದಾರ್ ರಾಜೇಶ್ವರಿ, ಜಿಲ್ಲಾ ಉದ್ಯೋಗಾಧಿಕಾರಿ ಕಿಶೋರ್ ಕುಮಾರ್, ಕೌಶಲ್ಯಾಭಿವೃದ್ಧಿ ಇಲಾಖೆ ಅಧಿಕಾರಿ ಅಂಜನ್ ಮೂರ್ತಿ, ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ವಿಜಯ ಜ್ಯೋತಿ ರಥಯಾತ್ರೆಗೆ ಭವ್ಯ ಸ್ವಾಗತ


**ತುಮಕೂರು:** ಸ್ವಾತಂತ್ರ್ಯ ಹೋರಾಟದ ವೀರರಾಣಿ ಕಿತ್ತೂರು ಚೆನ್ನಮ್ಮನವರ ಗೌರವಾರ್ಥ ಪ್ರತಿವರ್ಷ ಅಕ್ಟೋಬರ್ 23, 24 ಹಾಗೂ 25ರಂದು ಬೆಳಗಾವಿ ಜಿಲ್ಲೆಯ ಕಿತ್ತೂರಿನ ಕೋಟೆ ಆವರಣದಲ್ಲಿ ಕಿತ್ತೂರು ಉತ್ಸವವನ್ನು ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ. ಉತ್ಸವದ ಪೂರ್ವಭಾವಿಯಾಗಿ ವಿಜಯ ಜ್ಯೋತಿ ರಥಯಾತ್ರೆಯು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸಂಚರಿಸಿ ಸೋಮವಾರ ತುಮಕೂರು ಜಿಲ್ಲೆಗೆ ಆಗಮಿಸಿದ್ದು, ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು ಭವ್ಯವಾಗಿ ಸ್ವಾಗತಿಸಿದರು.

ಕಿತ್ತೂರು ರಾಣಿ ಚೆನ್ನಮ್ಮನ ಪ್ರತಿಮೆಗೆ ಪುಷ್ಪಾರ್ಚನೆ ಮಾಡಿ ಮಾತನಾಡಿದ ಅವರು, ವೀರರಾಣಿ ಕಿತ್ತೂರು ಚೆನ್ನಮ್ಮ ವಿಜಯಜ್ಯೋತಿ ರಥಯಾತ್ರೆಯು ರಾಜ್ಯದ ವಿವಿಧ ಜಿಲ್ಲೆಗಳಿಗೆ ಸಂಚರಿಸುತ್ತಿದ್ದು, ಜನರಲ್ಲಿ ದೇಶಭಕ್ತಿ ಮತ್ತು ರಾಷ್ಟ್ರಾಭಿಮಾನವನ್ನು ಬೆಳೆಸುವ ಉದ್ದೇಶ ಹೊಂದಿದೆ ಎಂದರು.

ಬ್ರಿಟಿಷರ ವಿರುದ್ಧ ಅಸಾಧಾರಣ ಧೈರ್ಯದಿಂದ ಹೋರಾಡಿದ ರಾಣಿ ಚೆನ್ನಮ್ಮ ಭಾರತ ದೇಶದ ಮೊದಲ ವೀರವನಿತೆಯಾಗಿದ್ದರು.

ರಾಣಿ ಚೆನ್ನಮ್ಮ ನಮ್ಮೆಲ್ಲರಿಗೂ ಸ್ಫೂರ್ತಿದಾಯಕ. ಅವರ ಧೈರ್ಯ, ಶೌರ್ಯ ಮತ್ತು ದಿಟ್ಟತನವನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರಲ್ಲದೆ, ವಿದ್ಯಾರ್ಥಿಗಳು ಅವರ ಆದರ್ಶಗಳನ್ನು ಪಾಲಿಸುವುದರೊಂದಿಗೆ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ, ತಹಶೀಲ್ದಾರ್ ರಾಜೇಶ್ವರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಈಶ್ವರ್ ಕು. ಮಿರ್ಜಿ, ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾ ಅಧ್ಯಕ್ಷ ಕೆ.ಎಸ್. ಸಿದ್ದಲಿಂಗಪ್ಪ ಸೇರಿದಂತೆ ಮತ್ತಿತರರು ಹಾಜರಿದ್ದರು.



# ಅಮೆರಿಕದ ಅಕ್ಕ ಸಂಸ್ಥೆಯ 25ನೇ ಬೆಳ್ಳಿ ಮಹೋತ್ಸವ ಸಂಭ್ರಮ ಮಂಡ್ಯದಲ್ಲಿ ಅ.19 ರಂದು ವಾಕಥಾನ್ ಕಾರ್ಯಕ್ರಮ

**ಮಂಡ್ಯ:** ಅಮೆರಿಕ ಅಕ್ಕಿ ಸಂಸ್ಥೆಯ 25 ನೇ ಬೆಳ್ಳಿ ಮಹೋತ್ಸವ ಸಂಭ್ರಮದ ಹಿನ್ನೆಲೆಯಲ್ಲಿ ಹಾಗೂ ಆರೋಗ್ಯ ಜಾಗೃತಿ ಹಾಗೂ ವನ್ಯ ಜೀವಿಗಳ ಸಂರಕ್ಷಣೆ ಸಂದೇಶ ಜನರಿಗೆ ತಲುಪಿಸುವ ಉದ್ದೇಶದಿಂದ ಮಂಡ್ಯದಲ್ಲಿ ಅಕ್ಟೋಬರ್ 19 ರಂದು ವಾಕಥಾನ್ ನಡೆಸಲಾಗುತ್ತಿದೆ ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ಅವರು ಹೇಳಿದರು.



ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಅಮೆರಿಕಾ ಕನ್ನಡ ಕೂಟಗಳ ಅಗರ (ಅಕ್ಕ) ಸಂಸ್ಥೆಯವರು ಮಂಡ್ಯದಲ್ಲಿ ಆಯೋಜಿಸಲಾಗುವ ಅಕ್ಕ 5ಏ ನಡಿಗೆ ಕಾರ್ಯಕ್ರಮದ ಕುರಿತು ರೂಪುರೇಷೆಗಳನ್ನು ಚರ್ಚಿಸಲು ಇಂದು ಜಿಲ್ಲಾಧಿಕಾರಿಗಳು ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಅಕ್ಟೋಬರ್ 19 ರಂದು ಬೆಳಿಗ್ಗೆ 7 ಗಂಟೆಗೆ ನಗರದ ಸರ್.ಎಂ.ವಿಶ್ವೇರಯ್ಯ ಕ್ರೀಡಾಂಗಣದಲ್ಲಿ ವಾಕಥಾನ್ ಗೆ ಚಾಲನೆ ನೀಡಲಾಗುವುದು. ಈ ಸಂದರ್ಭದಲ್ಲಿ ವಾಕಥಾನ್ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳನ್ನು ಸೇರಿಸುವಂತೆ ಹಾಗೂ ನೋಂದಣಿಗಾಗಿ ಮೂರು ಕೌಂಟರ್ ಗಳನ್ನು ಸ್ಥಾಪಿಸಿ ಸ್ವಯಂ ಸೇವಕರನ್ನು ನಿಯೋಜಿಸಲು ಅಗತ್ಯ ಕ್ರಮವಹಿಸುವಂತೆ ಸಂಬಂಧ ಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳಕ ತಿಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅಮೆರಿಕ ಕನ್ನಡ ಕೂಟಗಳ ಅಧ್ಯಕ್ಷ ಮಧು ರಂಗಯ್ಯ ಅವರು ಅ.19 ರಂದು ನಡೆಯುವ ವಾಕಥಾನ್ ಕಾರ್ಯಕ್ರಮಕ್ಕೆ ಆದಿ ಚುಂಚನಗಿರಿ ಮಠದ ನಿರ್ಮಲಾನಂದನಾಥ ಸ್ವಾಮೀಜಿ, ಸುತ್ತೂರು ಮಠದ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜೀ ಸಾನಿಧ್ಯ ವಹಿಸುವರು. ಕೇಂದ್ರ ಸಚಿವರಾದ ಎಚ್.ಡಿ.ಕುಮಾರಸ್ವಾಮಿ, ಉಪಸ್ಥಿತಿಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಎನ್.ಚೆಲುವರಾಯಸ್ವಾಮಿ ಉದ್ಘಾಟಿಸುವರು ಹಾಗೂ ಜಿಲ್ಲೆಯ ಶಾಸಕರು ಹಾಗೂ ಜನಪ್ರತಿನಿಧಿಗಳು ಕಾರ್ಯಕ್ರಮದಲ್ಲಿ ಭಾಗವಹಿಸುವರು ಎಂದು ತಿಳಿಸಿದರು.

ಅತಿಥಿಗಳಾಗಿ ನಟರಾದ ನೆನಪಿರಲಿ ಪ್ರೇಮ್, ನಟಿ ಅಮೃತಾ ಪ್ರೇಮ್, ನಟಿ ಸಾನ್ಯ ಅಯ್ಯರ್ ಭಾಗವಹಿಸುವರು ಎಂದು ಸಭೆಯಲ್ಲಿ ಮಾಹಿತಿ ನೀಡಿದರು.

ವಾಕಥಾನ್ ಭಾಗವಹಿಸುವವರ ನೋಂದಣಿ ಅಂದು ಅ. 19 ರಂದು ಬೆಳಿಗ್ಗೆ 6 ಗಂಟೆಗೆ ಆರಂಭವಾಗಲಿದೆ. ಎಲ್ಲರ ಸಹಕಾರದಿಂದ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಸಭೆಯಲ್ಲಿ ತಿಳಿಸಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿ ಕೆ. ಆರ್. ನಂದಿನಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡೆ, ಅಪರ ಜಿಲ್ಲಾಧಿಕಾರಿ ಬಿ. ಸಿ. ಶಿವಾನಂದ ಮೂರ್ತಿ, ಅಕ್ಕ ಸಂಸ್ಥೆಯ ಬಸವರಾಜು, ಚಂದ್ರು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ರೈತರಿಗೆ ಬಾಕಿಯಿರುವ ಪಾವತಿ ಹಣ ನೀಡಿ: ಡಾ. ಕುಮಾರ



ಮಂಡ್ಯ: ಜಿಲ್ಲೆಯಲ್ಲಿನ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಒದಗಿಸುವ ರೈತರಿಗೆ ನ್ಯಾಯಯುತವಾಗಿ ಪಾವತಿ ನೀಡಿ ಮತ್ತು ಹೀಗಾಗಲೇ ಬಾಕಿಯಿರುವ ಪಾವತಿಯನ್ನು ಶೀಘ್ರದಲ್ಲೆ ಒದಗಿಸಿ ಎಂದು ಜಿಲ್ಲಾಧಿಕಾರಿ ಡಾ. ಕುಮಾರ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದರು.


ಸಕ್ಕರೆ ಕಾರ್ಖಾನೆಗಳು ರೈತರಿಗೆ ಪಾವತಿ ಹಣವನ್ನು ನೀಡುತ್ತಿರುವ ಬಗ್ಗೆ ಅಧಿಕಾರಿಗಳು ನಿಗಾ ವಹಿಸಿ ಮತ್ತು ರೈತರಿಗೆ ಪಾವತಿ ಹಣ ಸಲ್ಲಿಸದ ಕಾರ್ಖಾನೆಗಳಿಗೆ ನೋಟಿಸ್ ನೀಡಿ ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಹೇಳಿದರು.

ಜಿಲ್ಲೆಯಲ್ಲಿನ ಸಕ್ಕರೆ ಕಾರ್ಖಾನೆಗಳು ಪಾವತಿ ಹಣವನ್ನು ನೀಡುತ್ತಿಲ್ಲ ಎಂದು ರೈತರಿಂದ ದೂರು ಬರುತ್ತಿದ್ದು, ರೈತರಿಗೆ ಅಧಿಕೃತವಾಗಿ ನೀಡಬೇಕಾದ ಪಾವತಿಯನ್ನು 14 ದಿನದೊಳ ಸಕ್ಕರೆ ಕಾರ್ಖಾನೆಗಳು ನೀಡಬೇಕು ಮತ್ತು ಹಣ ಪಾವತಿ ಕುರಿತು ವರದಿಯನ್ನು ಒದಗಿಸಬೇಕು ಎಂದು ತಿಳಿಸಿದರು.

ರೈತರು ಕಬ್ಬು ನೀಡಿದ 14 ದಿನದೊಳಗೆ ಕಡ್ಡಾಯವಾಗಿ ಸಕ್ಕರೆ ಕಾರ್ಖಾನೆಗಳು ಪಾವತಿಯನ್ನು ನೀಡಬೇಕು 14 ದಿನದೊಳಗೆ ನಂತರ ಪಾವತಿ ನೀಡಿದಲ್ಲಿ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು. ಯಾವುದೇ ಕಾರಣಕ್ಕೂ ರೈತರನ್ನು ಪಾವತಿ ವಿಷಯವಾಗಿ ಅಲೆದಾಡಿಸಬಾರದು ಎಂದು ಎಚ್ಚರಿಸಿದರು. ಸಭೆಯಲ್ಲಿ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ಪ್ರತೀಕ್ ಹೆಗ್ಡೆ, ಸಹಾಯ ನಿರ್ದೇಶಕ ಶ್ರೀನಿವಾಸ್, ವ್ಯವಸ್ಥಾಪಕ ರೇಣುಕಾ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ರೈತ ಮುಖಂಡರುಗಳು ಉಪಸ್ಥಿತರಿದ್ದರು.

# ವಿಷಯುಕ್ತ 'ಕೋಲ್ಡ್ರಿಫ್' ಸಿರಪ್; ಶ್ರೀಸನ್ ಫಾರ್ಮಾ ಕಂಪನಿಯ ಲೈಸನ್ಸ್ ರದ್ದುಗೊಳಿಸಿ, ಬಾಗಿಲು ಮುಚ್ಚಿಸಿದ ಸ್ಟಾಲಿನ್ ಸರ್ಕಾರ!

**ಚೆನ್ನೈ:** ವಿಷಯುಕ್ತ ಕೋಲ್ಡ್ರಿಫ್ ಕೆಮ್ಮಿನ ಸಿರಪ್ ತಯಾರಕರಾದ ಸ್ರೆಸನ್ ಫಾರ್ಮಾ ಕಂಪನಿಯ ಉತ್ಪಾದನಾ ಪರವಾನಗಿಯನ್ನು ಸಂಪೂರ್ಣವಾಗಿ ರದ್ದುಗೊಳಿಸಲಾಗಿದೆ. ಅಲ್ಲದೇ ಕಂಪನಿಯನ್ನು ಮುಚ್ಚಲು ರಾಜ್ಯ ಸರ್ಕಾರ ಆದೇಶಿಸಿದೆ.



ರಾಜ್ಯ ಔಷಧ ನಿಯಂತ್ರಣ ಇಲಾಖೆ ಅಧಿಕಾರಿಗಳು ತಪಾಸಣೆ ನಡೆಸಿದಾಗ ಕೆಮ್ಮಿನ ಸಿರಪ್‌ನಲ್ಲಿ ಶೇ.48.6 ರಷ್ಟು ಡೈಎಥಿಲೀನ್ ಗ್ಲೈಕಾಲ್ (DEG) ಅಂಶವಿರುವುದು ಪತ್ತೆಯಾಗಿದೆ. ಈ ಔಷಧಿ ಮಧ್ಯಪ್ರದೇಶದ ಮಕ್ಕಳ ಸಾವಿಗೂ ಕಾರಣವಾಗಿದೆ.

ಕಂಪನಿಯು ಸರಿಯಾದ ಉತ್ತಮ ಉತ್ಪಾದನಾ ವ್ಯವಸ್ಥೆ (GMP) ಮತ್ತು ಉತ್ತಮ ಪ್ರಯೋಗಾಲಯ ವ್ಯವಸ್ಥೆ (GLP) ಹೊಂದಿಲ್ಲ ಎಂಬುದನ್ನು ಅಧಿಕಾರಿಗಳು ಗುರುತಿಸಿದ್ದು, 300 ಕ್ಕೂ ಹೆಚ್ಚು ನಿರ್ಣಾಯಕ ಮತ್ತು ಪ್ರಮುಖ ಉಲ್ಲಂಘನೆಗಳನ್ನು ದಾಖಲಿಸಿದ್ದಾರೆ.

ಕಂಪನಿಯ ಮಾಲೀಕ ಜಿ ರಂಗನಾಥನ್ ಅವರನ್ನು ಇತ್ತೀಚೆಗೆ ಮಧ್ಯಪ್ರದೇಶದ ವಿಶೇಷ ತನಿಖಾ ತಂಡ ಬಂಧಿಸಿತ್ತು. ಜಾರಿ ನಿರ್ದೇಶನಾಲಯದ ತಂಡವು ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆ (ಕಒಐಂ) ಪ್ರಕರಣದಲ್ಲಿ ಶ್ರೀಸನ್ ಫಾರ್ಮಾಸ್ಯುಟಿಕಲ್ಸ್ ಮತ್ತು ಕೆಲವು ಅಧಿಕಾರಿಗಳ ನಿವಾಸದ ಮೇಲೆ ದಾಳಿ ನಡೆಸಿದೆ.

ಸ್ರೇಸನ್ ಫಾರ್ಮಾಸ್ಯುಟಿಕಲ್ಸ್‌ನ ಔಷಧ ತಯಾರಿಕಾ ಪರವಾನಗಿಯನ್ನು ಸಂಪೂರ್ಣವಾಗಿ ರದ್ದುಗೊಳಿಸಲಾಗಿದ್ದು, ಕಂಪನಿಯನ್ನು ಮುಚ್ಚಲಾಗಿದೆ.

ತಮಿಳುನಾಡಿನಲ್ಲಿರುವ ಇತರ ಔಷಧ ತಯಾರಿಕಾ ಕಂಪನಿಗಳ ವಿವರವಾದ ತಪಾಸಣೆ ನಡೆಸಲು ಆದೇಶ ನೀಡಲಾಗಿದೆ ಎಂದು ರಾಜ್ಯ ಸರ್ಕಾರ ಹೇಳಿಕೆಯಲ್ಲಿ ತಿಳಿಸಿದೆ.

# ಕರೂರ್ ಕಾಲ್ತುಳಿತ ಪ್ರಕರಣ ಸಿಬಿಐಗೆ ವರ್ಗಾಯಿಸಿದ ಸುಪ್ರೀಂ ಕೋರ್ಟ್

ನವದೆಹಲಿ: ಸೆಪ್ಟೆಂಬರ್ 27 ರಂದು ಟಿವಿಕೆ ಮುಖ್ಯಸ್ಥ ಮತ್ತು ನಟ ವಿಜಯ್ ಅವರ ರ್ಯಾಲಿಯ ಸಂದರ್ಭದಲ್ಲಿ ಸಂಭವಿಸಿದ ಕರೂರ್ ಕಾಲ್ತುಳಿತ ಪ್ರಕರಣದ ತನಿಖೆಯನ್ನು ಸುಪ್ರೀಂ ಕೋರ್ಟ್ ಸೋಮವಾರ ಸಿಬಿಐಗೆ ವಹಿಸಿದೆ.

ಈ ಕಾಲ್ತುಳಿತ ಘಟನೆಯಲ್ಲಿ 41 ಜನರು ಸಾವನ್ನಪ್ಪಿದ್ದರು ಮತ್ತು ಅನೇಕರು ಗಾಯಗೊಂಡಿದ್ದರು. ನ್ಯಾ. ಜೆಕೆ ಮಹೇಶ್ವರಿ, ನ್ಯಾ. ಎನ್ ವಿ ಅಂಜಾರಿಯಾ ಅವರಿದ್ದ ಪೀಠ, ದುರಂತದ ಬಗ್ಗೆ ನಿಷ್ಪಕ್ಷಪಾತ ತನಿಖೆ ನಡೆಯುವುದನ್ನು ಖಾತ್ರಿಪಡಿಸಿಕೊಳ್ಳುವುದಕ್ಕಾಗಿ ಸಿಬಿಐ ತನಿಖೆಯ ಮೇಲ್ವಿಚಾರಣೆಗಾಗಿ ಸುಪ್ರೀಂ ಕೋರ್ಟ್ ನ ನ್ಯಾಯಮೂರ್ತಿ ಅಜಯ್ ರಸ್ತೋಗಿ ಅವರ ನೇತೃತ್ವದ ತ್ರಿಸದಸ್ಯ ಸಮಿತಿಯನ್ನೂ ರಚಿಸಿದೆ. ಇದಕ್ಕೂ ಮೊದಲು, ಕರೂರ್ ಕಾಲ್ತುಳಿತದ ತನಿಖೆಗೆ ಸಂಬಂಧಿಸಿದಂತೆ ವಿಜಯ್ ಅವರ ಟಿವಿಕೆ (ತಮಿಳಗ ವೆಟ್ರಿ ಕಳಗಂ), ಮೃತರ ಎರಡು ಕುಟುಂಬಗಳು ಮತ್ತು ಇತರ ಪಕ್ಷಗಳು ಸಲ್ಲಿಸಿದ ವಿವಿಧ ಅರ್ಜಿಗಳ ಮೇಲಿನ ಆದೇಶವನ್ನು ಸುಪ್ರೀಂ ಕೋರ್ಟ್ ಕಾಯ್ದಿರಿಸಿತ್ತು. ಎಲ್ಲಾ ಪಕ್ಷಗಳು ತನ್ನ ಮುಂದೆ ಮಾಡಿದ ವಿವರವಾದ ಸಲ್ಲಿಕೆಗಳನ್ನು ಆಲಿಸಿದ ನಂತರ, ನ್ಯಾಯಮೂರ್ತಿಗಳಾದ ಜೆ.ಕೆ. ಮಹೇಶ್ವರಿ ಮತ್ತು ಎನ್.ವಿ. ಅಂಜಾರಿಯಾ ಅವರ ಪೀಠವು ತನ್ನ ಆದೇಶವನ್ನು ಕಾಯ್ದಿರಿಸುವ ಮೊದಲು ಮೃತ ವ್ಯಕ್ತಿಗಳ ಪರವಾಗಿ ಕೇಂದ್ರ ಸಂಸ್ಥೆಯ ತನಿಖೆ ಕೋರಿ ಸಲ್ಲಿಸಲಾದ ಮನವಿಗಳಿಗೆ ಪ್ರತಿಕ್ರಿಯೆಯಾಗಿ ಅಫಿಡವಿಟ್ ಸಲ್ಲಿಸುವಂತೆ ತಮಿಳುನಾಡು ಸರ್ಕಾರವನ್ನು ಕೇಳಿದೆ.


ಕರೂರ್ ಕಾಲ್ತುಳಿತ ಪ್ರಕರಣದ ತನಿಖೆಗೆ ಸಂಬಂಧಿಸಿದಂತೆ ರಾಜ್ಯ ಪೊಲೀಸರ ಸ್ವಾತಂತ್ರ್ಯದ ಬಗ್ಗೆ ಅನುಮಾನಗಳನ್ನು ಹುಟ್ಟುಹಾಕಿದ್ದರೂ, ತನಿಖೆಯನ್ನು ವಿಶೇಷ ತನಿಖಾ ತಂಡ (ಎಸ್‌ಐಟಿ) ತನಿಖೆಗೆ ಆದೇಶಿಸುವ ಮದ್ರಾಸ್ ಹೈಕೋರ್ಟ್ ನಿರ್ಧಾರವನ್ನು ಟಿವಿಕೆ ತನ್ನ ಪ್ರಧಾನ ಕಾರ್ಯದರ್ಶಿ ಆಧವ್ ಅರ್ಜುನ ಮೂಲಕ ಪ್ರಶ್ನಿಸಿತ್ತು.

# ಸಾವಿನ ಸಮಯ ಸಮೀಪಿಸಿದಾಗ?!



ಜೀವನದ ಆರಂಭ ಮತ್ತು ಅಂತ್ಯ ಎರಡರಲ್ಲೂ ಮತ್ತೊಬ್ಬರ ಸಹಾಯ ನಮಗೆ ಬೇಕೇ ಬೇಕು, ಆದರೂ ಮನುಷ್ಯ ನಾನು ಎಂಬ ಅಹಂಕಾರ ಮಾತ್ರ ಬಿಟ್ಟಿಲ್ಲ. ಜಗತ್ತಿನ ಅನೇಕ ಸಮಸ್ಯೆಗಳಿಗೆ ಇವತ್ತಿಗೂ ಉತ್ತರ ಸಿಕ್ಕಿಲ್ಲ. ಆದರೆ, ಜಗತ್ತು ಬೆಳೆಯುವುದು ಮಾತ್ರ ನಿಂತಿಲ್ಲ. ಸಾವು ಅನಿವಾರ್ಯ ಸತ್ಯ. ಹುಟ್ಟಿದ ಯಾರೇ ಆದರೂ ಒಂದಲ್ಲ ಒಂದು ದಿನ ಈ ಲೋಕವನ್ನು ಬಿಟ್ಟು ಹೋಗಲೇಬೇಕು. ಕುಟುಂಬದ ಸದಸ್ಯರು ಅಕಾಲಿಕವಾಗಿ ಮರಣ ಹೊಂದಿದಾಗ, ಅವರು ಅಸಹನೀಯ ದುಃಖವನ್ನು ಎದುರಿಸಬೇಕಾಗುತ್ತದೆ. ಆದರೆ ಯಾವುದೇ ಜೀವಿ ಅಕಾಲಿಕವಾಗಿ ಮರಣಹೊಂದುವುದಿಲ್ಲ ಎಂದು ಧರ್ಮಗ್ರಂಥಗಳು ಹೇಳುತ್ತವೆ. ಎಲ್ಲಾ ಜೀವಿಗಳ ಜನನ ಮತ್ತು ಮರಣದ ಸಮಯವು ಪೂರ್ವನಿರ್ಧರಿತವಾಗಿದೆ. ಆದ್ದರಿಂದ, ಒಬ್ಬ ವ್ಯಕ್ತಿಯು ಅಕಾಲಿಕವಾಗಿ ಮರಣಹೊಂದಿದ್ದಾನೆ ಎಂದು ಹೇಳುವುದು ತಪ್ಪಾಗುತ್ತದೆ. ಗರುಡ ಪುರಾಣ ಮತ್ತು ಗೀತೆಯಲ್ಲಿ ಮರಣವು ಅಂತ್ಯವಲ್ಲ, ಆರಂಭ ಎಂದು ಹೇಳಲಾಗಿದೆ. ಸಾವು ದೇಹದ ಅಂತ್ಯ ಮಾತ್ರ, ಆತ್ಮವು ಎಂದಿಗೂ ಸಾಯುವುದಿಲ್ಲ. ಸಾವು ಭಯಂಕರ ವೈರಿ ಅದನ್ನು ಜಯಿಸಲು ಶಕ್ತಿಮೀರಿ ಪ್ರಯತ್ನಿಸುತ್ತೇವೆ. ಅದು ನಮ್ಮ ಪ್ರಿಯರನ್ನು ನಮ್ಮಿಂದ ಕಸಿದುಕೊಂಡಾಗ ಆ ನಿಜಾಂಶವನ್ನು ಅರಗಿಸಿಕೊಳ್ಳುವುದು ತುಂಬ ಕಷ್ಟವಾಗುತ್ತದೆ. ಸಾವು ನಮ್ಮನ್ನು ಮುಟ್ಟಲೂ ಸಾಧ್ಯವಿಲ್ಲ ಅನ್ನುವ ಭ್ರಮೆಯನ್ನು ಆದಷ್ಟು ದಿನ ಭದ್ರವಾಗಿ ಹಿಡಿದುಕೊಳ್ಳಲು ಪ್ರಯತ್ನಿಸುತ್ತೇವೆ. ಬಿಸಿರಕ್ತ ಮೈಯಲ್ಲಿ ಓಡುತ್ತಿರುವ ಯೌವನದಲ್ಲಿ ಈ ಭ್ರಮೆ ಸ್ವಲ್ಪ ಜಾಸ್ತಿಯೇ ಇರುತ್ತದೆ. ಯಾರೂ ಅಕಾಲಿಕ ಮರಣ ಹೊಂದುವುದಿಲ್ಲ, ಯಮರಾಜನು ತಿಳಿಸಿದ 24 ಚಿಹ್ನೆಗಳನ್ನು ಪ್ರತಿಯೊಬ್ಬ ವ್ಯಕ್ತಿಗೂ ತನ್ನ ಪ್ರಾಣ ತೆಗೆಯುವ 4 ಗಂಟೆಗಳ ಮೊದಲು ನೀಡುತ್ತಾನೆ. ಒಬ್ಬ ವ್ಯಕ್ತಿಯು ಅಪಘಾತ ಅಥವಾ ಅನಾರೋಗ್ಯದಿಂದ ಚಿಕ್ಕ ವಯಸ್ಸಿನಲ್ಲಿ ಹಠಾತ್ತನೆ ಮರಣಹೊಂದಿದರೆ ಅದನ್ನು ಅಕಾಲಿಕ ಮರಣ ಎಂದು ಕರೆಯಲಾಗುತ್ತದೆ. ಆದರೆ ಸತ್ಯವೆಂದರೆ ಸಾವಿನ ಸಮಯ ಈಗಾಗಲೇ ನಿರ್ಧರಿಸಲ್ಪಟ್ಟಿದೆ. ಆದ್ದರಿಂದ ಯಾರೂ ಅಕಾಲಿಕ ಮರಣವನ್ನು ಅನುಭವಿಸುವುದಿಲ್ಲ. ವ್ಯಕ್ತಿಯ ಅಂತ್ಯ ಸಮಯ ಬಂದಾಗ ಸಾವಿನ ದೇವರು ಯಮರಾಜನು ಖಂಡಿತವಾಗಿಯೂ ನಮಗೆ ಒಂದು ಸಂಕೇತವನ್ನು ನೀಡುತ್ತಾನೆ. ಬದಲಾವಣೆಗಳನ್ನು ಗಮನಿಸುವ ಮೂಲಕ ಒಬ್ಬ ವ್ಯಕ್ತಿಯು ಸಾವಿಗೆ ಮುಂಚಿನ ಚಿಹ್ನೆಗಳನ್ನು ತಿಳಿದುಕೊಳ್ಳಬಹುದು.

ಯಮರಾಜನು ಸಾವಿಗೆ ಮೊದಲು ಚಿಹ್ನೆಗಳನ್ನು ನೀಡುತ್ತಾನೆ ಎಂದು ಧರ್ಮಗ್ರಂಥಗಳು ಹೇಳುತ್ತವೆ, ಇದರಿಂದಾಗಿ ಜೀವನದ ಕೊನೆಯಲ್ಲಿ ವ್ಯಕ್ತಿಯು ತನ್ನ ಎಲ್ಲಾ ಸಮಯವನ್ನು ತನ್ನ ಪ್ರೀತಿಪಾತ್ರರಿಗೆ ಮತ್ತು ದೇವರಿಗೆ ಮೀಸಲಿಡಬಹುದು. ಅವನು ಬಾಂಧವ್ಯ ಮತ್ತು ಭ್ರಮೆಯಿಂದ ಹೊರಬಂದು ನಿಜವಾದ ಹೃದಯದಿಂದ ದೇವರನ್ನು ಸ್ಮರಿಸಬಹುದು. ಬಾಂಧವ್ಯವು ಸಹಜ ಮತ್ತು ಹೊಂದಾಣಿಕೆಯ ಪ್ರಕ್ರಿಯೆಯಾಗಿದೆ ಎಂದು ಇದು ಪ್ರಸ್ತಾಪಿಸುತ್ತದೆ, ಅದು ಮಗುವಿಗೆ ಅವರ ಪರಿಸರದಲ್ಲಿ ಬದುಕಲು ಮತ್ತು ಅಭಿವೃದ್ಧಿ ಹೊಂದಲು ಸಹಾಯ ಮಾಡುತ್ತದೆ. ಸಾವು ತುಂಬಾ ಹತ್ತಿರದಲ್ಲಿದ್ದಾಗ ವ್ಯಕ್ತಿಯು ತನ್ನ ಎಚ್ಚರದ ಸ್ಥಿತಿಯಲ್ಲಿಯೂ ತನ್ನ ಪೂರ್ವಜರನ್ನು ನೋಡಬಹುದು. ಸುತ್ತಲೂ ಪೂರ್ವಜರ ಉಪಸ್ಥಿತಿಯನ್ನು ಅನುಭವಿಸುವುದು ಯಮರಾಜನು ಕರೆಯಲಿರುವ ಸಂಕೇತ ಎಂದು ಧರ್ಮಗ್ರಂಥಗಳು ಹೇಳುತ್ತವೆ. ಶಾಸ್ತ್ರಗಳ ಪ್ರಕಾರ, ಆತ್ಮವು ದೇಹವನ್ನು ಬಿಡುವ ಸಮಯ ಬಂದಾಗ, ಯಮರಾಜನು ಮರಣದ ಸಂದೇಶವಾಹಕರನ್ನು ಕಳುಹಿಸುತ್ತಾನೆ. ಕೊನೆಯಲ್ಲಿ ಸಂದೇಶವಾಹಕರ ಅಸ್ಪಷ್ಟ ನೋಟವು ಆತ್ಮವು ದೇಹದಿಂದ ಬೇರ್ಪಡುವುದನ್ನು ಸೂಚಿಸುತ್ತದೆ ಎಂದು ಹೇಳಲಾಗುತ್ತದೆ. ಒಬ್ಬ ವ್ಯಕ್ತಿಯ ದೇಹವು ತನ್ನ ಅಂತ್ಯದತ್ತ ಚಲಿಸಲು ಪ್ರಾರಂಭಿಸಿದಾಗ, ಅವನ ನೋಡುವ, ಕೇಳುವ ಮತ್ತು ಅನುಭವಿಸುವ ಸಾಮರ್ಥ್ಯವು ಸಂಪೂರ್ಣವಾಗಿ ಕೊನೆಗೊಳ್ಳಲು ಪ್ರಾರಂಭಿಸುತ್ತದೆ ಎಂದು ಶಾಸ್ತ್ರಗಳಲ್ಲಿ ಹೇಳಲಾಗಿದೆ. ಒಬ್ಬ ವ್ಯಕ್ತಿಯು ತನ್ನ ಸ್ವಂತ ನೆರಳನ್ನು ನೋಡಲು ಸಾಧ್ಯವಾಗದಿದ್ದರೆ ಅಥವಾ ಅವನ ನೆರಳು ಅಪೂರ್ಣವಾಗಿದ್ದರೆ, ಅದು ಅವನ ತಲೆಯ ಮೇಲೆ ಸಾವು ಬರುತ್ತಿದೆ ಎಂದು ಸೂಚಿಸುತ್ತದೆ. ಕೊನೆಯಲ್ಲಿ, ಅಪೂರ್ಣವಾಗಿ ಕಾಣುವ ನೆರಳು ಕೂಡ ತುಂಬಾ ಭಯಾನಕ ಮತ್ತು ಮಸುಕಾಗಿ ಕಾಣಲು ಪ್ರಾರಂಭಿಸುತ್ತದೆ. ಅಂತ್ಯಕಾಲ ಸಮೀಪಿಸಿದಾಗ ತನ್ನ ಜೀವನದ ಎಲ್ಲಾ ಒಳ್ಳೆಯ ಮತ್ತು ಕೆಟ್ಟ ಕ್ಷಣಗಳನ್ನು ನೆನಪಿಸಿಕೊಳ್ಳಲು ಪ್ರಾರಂಭಿಸುತ್ತಾನೆ. ಯಮರಾಜನು ಹೆಚ್ಚಿನ ಜನರಿಗೆ ಅವರು ಮಾಡಿದ ಕೆಟ್ಟ ಕಾರ್ಯಗಳನ್ನು ತೋರಿಸಲು ಪ್ರಯತ್ನಿಸುತ್ತಾನೆ. ಈ ಜಗತ್ತಿನಲ್ಲಿ ಯಾವುದೇ ಪಾಪ ಕಾರ್ಯವನ್ನು ಮಾಡದ ವ್ಯಕ್ತಿ ಇಲ್ಲ. ಆದರೆ ಯಾರ ಕರ್ಮಗಳು ಅತ್ಯಂತ ಅಶುದ್ಧವಾಗಿವೆಯೋ ಅವರು ಮರಣದ ಮೊದಲು ಮಾಡಿದ ಕೆಟ್ಟ ಕಾರ್ಯಗಳನ್ನು ನೆನಪಿಸಿಕೊಳ್ಳುತ್ತಾ ಪದೇ ಪದೇ ಅಳುತ್ತಾರೆ. ಯಾರೂ ಇಷ್ಟಪಡದ, ಮಾತಾಡಲೂ ಬಯಸದ ವಿಷಯವೆಂದರೆ ಸಾವು, ಅದನ್ನು ಎದುರಿಸಲೇಬೇಕು, ಸಾವು ತುಂಬ ನೋವು ತರುತ್ತದೆ. ಹೆತ್ತವರಾಗಲಿ, ಬಾಳ ಸಂಗಾತಿಯಾಗಲಿ, ಮಗುವಾಗಲಿ ಸಾವಿನಿಂದ ನಮ್ಮನ್ನು ಅಗಲಿದಾಗ ಅದನ್ನು ಒಪ್ಪಿಕೊಳ್ಳುವುದು ಸುಲಭದ ವಿಷಯವಲ್ಲ. ಸಾವು ದಿಢೀರನೆ ಬಂದೆರಗಬಹುದು ಅಥವಾ ವಿಷದಂತೆ ನಿಧಾನವಾಗಿ ಆವರಿಸಬಹುದು. ಅದು ಕೊಡುವ ನೋವಿನಿಂದ ತಪ್ಪಿಸಿಕೊಳ್ಳುವುದು ಅಥವಾ ಅದರ ಹಿಡಿತದಿಂದ ಬಿಡಿಸಿಕೊಳ್ಳುವುದು ಕಷ್ಟಸಾಧ್ಯ.



ಪುಷ್ಪ ಪ್ರಸಾದ್

# ಸಮಸ್ಯೆಯ ಆಳದ ಅರಿವು

ಅದೊಂದು ಸುಂದರ ಮುಂಜಾವಿನ ದಿನ ಕಾಡಿನ ಎಲ್ಲ ಪ್ರಾಣಿಗಳು ಸೂರ್ಯನ ಎಳೆಯ ಬಿಸಿಲಿನಿಂದ ಹೊಳೆಯುತ್ತಿರುವ ಸರೋವರದ ಬಳಿ ಸೇರಿದವು. ಎರಡು ಜಿರಾಫೆಗಳು ಮೊದಲು ಕೊಳದಲ್ಲಿ ಇಳಿದವು. ಎರಡು ಜಿರಾಫೆಗಳ ಅತ್ಯಂತ ಶಾಂತವಾಗಿದ್ದು ಆತ್ಮವಿಶ್ವಾಸದಿಂದ ಕೂಡಿದ್ದು ಅವೆರಡರ ಕುತ್ತಿಗೆಗಳು ನೀರಿನ ಮೇಲೆ ಅತ್ಯಂತ ನಿಧಾನವಾಗಿ ತೇಲಿದಂತೆ ಭಾಸವಾಗುತ್ತಿತ್ತು.

ಬನ್ನಿ ಸ್ನೇಹಿತರೆ! ಸರೋವರದ ಈ ಭಾಗ ಅಷ್ಟು ಆಳವಾಗಿಲ್ಲ. ಕರಡಿಗಳು ಪರಸ್ಪರ ಮುಖ ಮುಖ ನೋಡಿಕೊಂಡರೆ ಮೊಲಗಳು ನೀರಿಗೆ ಇಳಿಯಲು ಹಿಂಜರಿದವು. ಪುಟ್ಟ ಇಲಿಯಂತೂ ಸರೋವರದಲ್ಲಿ ಇಳಿಯುವ ಮಾತಿನಿಂದಲೇ ಗಡಗಡ ನಡುಗುತ್ತಿತ್ತು. ಜಿರಾಫೆಗಳು ಇಳಿದ ಕಾರಣ ಉಂಟಾದ ನೀರಿನ ತರಂಗಗಳು ಅದಕ್ಕೆ ಬೃಹದಾಕಾರದ ಅಲೆಗಳಂತೆ ಭಾಸವಾಗುತ್ತಿತ್ತು

ನಿಜ! ಜಿರಾಫೆಗಳಿಗೆ ನೀರು ಅಷ್ಟೇನು ಆಳವಾಗಿಲ್ಲ... ಏಕೆಂದರೆ ಅವುಗಳ ಕುತ್ತಿಗೆ ಇನ್ನೂ ನೀರಿನ ಹೊರಗೆ ಇತ್ತು. ಸ್ವಲ್ಪವೇ ಜಾರಿದರೂ ಕೈ ಕಾಲು ಬಡಿದು ಮೇಲಕ್ಕೆ ಬರುವಷ್ಟು ಶಕ್ತಿಯನ್ನು ಅವು ಹೊಂದಿದ್ದವು ಆದರೆ ಇಲಿಯ ಪಾಲಿಗೆ ಆ ಪುಟ್ಟ ಸರೋವರವೇ ಒಂದು ದೊಡ್ಡ ಸಾಗರವಾಗಿತ್ತು ಅತ್ಯಂತ ವಿಶಾಲವಾದ ಮತ್ತು ಭಯಂಕರವಾದ ನೀರಿನ ಅಗಾಧ ಜಲರಾಶಿಯನ್ನು ಹೊಂದಿದ ಆ ಸರೋವರ ಇಲಿಗೆ ಸಮುದ್ರದಂತೆ ತೋರಿದರೂ ತಪ್ಪಿಲ್ಲ ಬಿಡಿ!.

ಜಿರಾಫೆಗಳು ಅಯ್ಯೋ ಪಾಪ! ಎಂಬಂತೆ ಉಳಿದ ಪ್ರಾಣಿಗಳನ್ನು ನೋಡಿದವು. ಜಿರಾಫೆಗಳ ಕನಿಕರದ ನೋಟದಲ್ಲಿ ಯಾವುದೇ ಅಣಕವಿರಲಿಲ್ಲ ತಮಾಷೆಯಂತೂ ಮೊದಲೇ ಇರಲಿಲ್ಲ... ಆದರೆ ಅವುಗಳಿಗೆ ಅರಿವಾಗದ ಒಂದು ವಿಷಯ ಎಂದರೆ ಅವು ಉಳಿದ ಪ್ರಾಣಿಗಳ ದೃಷ್ಟಿಯಿಂದ ಸರೋವರವನ್ನು ನೋಡಿರಲಿಲ್ಲ.

ನಮ್ಮ ಬದುಕು ಕೂಡ ಹೀಗೆಯೇ ಅಲ್ಲವೇ ಸ್ನೇಹಿತರೆ?

ಎಷ್ಟೋ ಬಾರಿ ಬೇರೆಯವರಿಗೆ ಬೆಟ್ಟದಂತೆ ತೋರುವ ಅವರ ಕಡು ಕಷ್ಟಗಳು ನಮಗೆ ಮಂಜಿನಂತೆ ಭಾಸವಾಗಬಹುದು. ಅವರ ಒದ್ದಾಟ ನಮಗೆ ತಮಾಷೆ ಎನಿಸಬಹುದು. ಇದೇನು ಮಹಾ! ಇದಕ್ಕೆ ಯಾಕೆ ಅಷ್ಟು ತಲೆಕೆಡಿಸಿಕೊಳ್ಳಬೇಕು ಎಂದು ತೋರಬಹುದು.

ನಿಜ ಸ್ನೇಹಿತರೆ, ನಾವು ಬಲು ಬೇಗ ಇತರರ ಕುರಿತು ನಿರ್ಧರಿಸುತ್ತೇವೆ. ಆ ಕುರಿತು ಅವರಿಗೆ ಹೇಳುತ್ತೇವೆ ಕೂಡ.

ನೀವು ಯೋಚಿಸುತ್ತಿರುವಷ್ಟು ಪರಿಸ್ಥಿತಿ ಕಠಿಣವಾಗಿಲ್ಲ ಮತ್ತೆ ಹಿಂತಿರುಗಿ ನೋಡದೆ ಬದುಕು ತೋರಿದ ದಾರಿಯಲ್ಲಿ ಮುನ್ನಡೆಯಿರಿ ಎಂದು ನಾವು ಹೇಳುವುದು ನಮಗೆ ಸುಲಭವೆನಿಸಬಹುದು, ಆದರೆ ಆ ಬದುಕಿನ ತಿರುಗಣಿಯಲ್ಲಿ ಸಿಕ್ಕ ಅವರಿಗೆ ಅದು ಅಷ್ಟು ಸುಲಭದ ಮಾತಾಗಿರುವುದಿಲ್ಲ. ನಮಗೆ ಗಾಳಿಯ ಪುಟ್ಟ ಅಲೆ ಎಂಬಂತೆ ತೋರುವ ವಸ್ತು ಅವರ ಬದುಕಿನಲ್ಲಿ ಬಿರುಗಾಳಿಯನ್ನೇ ಬೀಸಬಹುದು ಎಂಬ ಅರಿವು ನಮಗೆ ಇರುವುದಿಲ್ಲ ಅಲ್ಲವೇ?

ಅವರ ಬದುಕಿನಲ್ಲಿ ಅಲ್ಲೋಲಕಲ್ಲೋಲವನ್ನು ಉಂಟುಮಾಡುವ ಸಂಗತಿಗಳು ನಮಗೆ ನಗಣ್ಯ ಎನಿಸಬಹುದು. ನಮಗೆ ಆರಾಮದಾಯಕ ಎಂದೆನಿಸುವ ವಿಷಯಗಳು ಅವರಿಗೆ ಮನಸ್ಸು



ಮುರಿಯುವಂತಹ ನೋವನ್ನು ಹೊತ್ತು ತರಬಹುದು.

ಇದಕ್ಕೆ ಕಾರಣ ಅವರ ಬಲಹೀನತೆಯಲ್ಲ ಹಾಗೂ ನಮ್ಮ ಬಲಶಾಲಿತನವಂತೂ ಮೊದಲೇ ಅಲ್ಲ... ಇದಕ್ಕೆ ಕಾರಣ ಅವರು ಅನುಭವಿಸುತ್ತಿರುವ ತೊಂದರೆಯ ಆಳದ ಅರಿವು ಅವರಿಗೆ ಇರುವಷ್ಟು ನಮಗೆ ಗೊತ್ತಿಲ್ಲ. ನಮ್ಮ ಕಣ್ಣಳತೆಯಿಂದ ನಾವು ಅವರು ಹೊರುವ ಭಾರವನ್ನು ಅಳೆಯಲು ಸಾಧ್ಯವಾಗದೆ ಹೋಗಬಹುದು

ಏಕೆಂದರೆ ಅವರು ತಮ್ಮ ಸಮಸ್ಯೆಯ ವರ್ತುಲದೊಳಗೆ ಸಿಲುಕಿಕೊಂಡಿದ್ದು ಆ ಕುರಿತು ಯೋಚಿಸಿದರೆ ನಾವು ಆ ವರ್ತುಲದ ಹೊರಗೆ ನಿಂತು ಅವರ ಸಮಸ್ಯೆಯ ಕುರಿತು ಹಗುರವಾಗಿ ಪರಿಗಣಿಸುತ್ತೇವೆ. ಬದುಕಿನ ಕುರಿತು ನಮ್ಮ ಲೆಕ್ಕಾಚಾರಗಳು ವಿಭಿನ್ನವಾಗಿರುತ್ತವೆ.

ಬಡತನದ ಅರಿವೇ ಇಲ್ಲದ ಪುಟ್ಟ ಬಾಲಕ ತನ್ನ ನಾಲ್ಕು ಕೋಣೆಯ ಮನೆಯನ್ನು ಚಿಕ್ಕದೆಂದು ಭಾವಿಸುವ, ಕೇವಲ ಎರಡು ಕಾರುಗಳನ್ನು ಹೊಂದಿರುವುದು ಬಡತನ ಎಂದು ಭಾವಿಸುವ, ಮನೆಯಲ್ಲಿ ಇರುವ ಚಿಕ್ಕದಾದ ಸ್ವಿಮ್ಮಿಂಗ್ ಪೂಲ್ ಗೆ ಕಾರಣ ತಮ್ಮ ಬಡತನ ಎಂದು ಭಾವಿಸುವುದನ್ನು ನಾವು ಕಥೆಗಳಲ್ಲಿ ಕೇಳಿದ್ದೇವೆ.

ಮೂರು ಹೊತ್ತು ಪುಷ್ಕಳವಾಗಿ ಉಣ್ಣುವ ವ್ಯಕ್ತಿಗೆ, ಕೇಳುವ ಮುನ್ನವೇ ತಟ್ಟೆಗೆ ಆಹಾರ ಬಂದು ಬೀಳುವ ವ್ಯಕ್ತಿಗೆ ಹಸಿವಿನ ಸಂಕಟದ ಅರಿವು ಇರುವುದಿಲ್ಲ ಇದ್ದರೂ ಅದು ಪುಸ್ತಕದ ಭಾಷೆಯಲ್ಲಿ ಮಾತ್ರ. ಹಸಿವು ಹೆಚ್ಚಾಗಿ ತಲೆ ತಿರುಗಿ ಕಣ್ಣು ಕತ್ತಲಿಡುವುದನ್ನು, ದೇಹ ನಿತ್ರಾಣವಾಗುವುದನ್ನು ಅನುಭವಿಸಿದವನೇ ಬಲ್ಲ... ಅಲ್ಲವೇ? ಆದ್ದರಿಂದ ಸ್ನೇಹಿತರೆ, ಇನ್ನು ಮುಂದೆ ಬೇರೆಯವರು ನಿಮ್ಮ ಮುಂದೆ ಹೇಳಿಕೊಳ್ಳುವ ಸಮಸ್ಯೆಗಳನ್ನು ಗಮನವಿಟ್ಟು ಕೇಳಿ. ನಿಧಾನವಾಗಿ ಅವರ ಸಮಸ್ಯೆಯ ಆಳಕ್ಕೆ ಇಳಿಯುವ ಪ್ರಯತ್ನವನ್ನು ಮಾಡಿ. ನಿಮಗೆ ಸಾಧ್ಯವೆನಿಸಿದರೆ ಅವರ ಸಮಸ್ಯೆಗೆ ಪುಟ್ಟ ಪರಿಹಾರ ಸೂಚಿಸಲು ಪ್ರಯತ್ನಿಸಿ..... ಆದರೆ ಅವರು ಸಮಸ್ಯೆಯನ್ನು ನಿಮ್ಮ ಮುಂದೆ ಹೇಳಿಕೊಂಡಾಗ ತತ್ ಕ್ಷಣವೇ ದೊಡ್ಡದಾಗಿ ದೇಶಾವರಿ ನಗೆ ಬೀರುತ್ತಾ ಇದೇನು ಮಹಾ! ಎಂದು ಹೇಳುವ ಮುನ್ನ ನಿಲ್ಲಿ.... ಒಂದು ದೀರ್ಘವಾದ ಉಸಿರನ್ನು ತೆಗೆದುಕೊಳ್ಳಿ. ಸಮಸ್ಯೆ ನೀವು ತಿಳಿದುಕೊಂಡಷ್ಟೇ ಸರಳವಾಗಿದ್ದರೆ ಅವರು ನಿಮ್ಮ ಬಳಿ ಬರುತ್ತಿರಲಿಲ್ಲ ಎಂಬುದನ್ನು ನೆನಪಿಸಿಕೊಳ್ಳಿ. ನೀವು ಜಿರಾಫೆ ಮತ್ತು ಅವರು ಇಲಿ ಎಂಬ ದೃಷ್ಟಿಕೋನದಿಂದ ಅವರನ್ನು ಪರಿಗಣಿಸದಿರಿ.

ಅವರ ಸಮಸ್ಯೆಯನ್ನು ಕೇಳಿದ ನಂತರ ನಿಧಾನವಾಗಿ ಅವರ ಗ್ರಹಿಕೆಯ ದೃಷ್ಟಿಕೋನದಿಂದ ಸಮಸ್ಯೆಯನ್ನು ಯೋಚಿಸಿ ಚಿಂತಿಸಿ ಆಗ ನಿಮಗೆ ಹೊಳೆಯುವ ಪರಿಹಾರವನ್ನು ಅವರೊಂದಿಗೆ ಹಂಚಿಕೊಳ್ಳಿ ಅದೂ ಅವರು ಒಪ್ಪಿದರೆ ಮಾತ್ರ, ಅವರ ಮನಸ್ಸಿಗೆ ಹಿಡಿಸಿದರೆ ಮಾತ್ರ ಕಾರ್ಯರೂಪಕ್ಕೆ ತರಲಿ ಎಂಬ ಶರತ್ತಿನೊಂದಿಗೆ ಪರಿಹಾರ ಸೂಚಿಸಿ. ನಾಳೆ ನೀವು ಸೂಚಿಸಿದ ಪರಿಹಾರ ದಿಂದ ಅವರಿಗೆ ಅನಾನುಕೂಲವಾದರೆ ಅದರ ಭಾರವನ್ನು ನೀವು ಹೊರಲು ಸಾಧ್ಯವಿಲ್ಲ ಎಂಬುದನ್ನು ಖಾತರಿಪಡಿಸಿ ಮುಂದೆ ಅವರು ಅನುಭವಿಸುವ ಅಥವಾ ಹಾಗೆಂದು ಭಾವಿಸುವ ಎಲ್ಲ ತೊಂದರೆಗಳಿಗೆ ಅವರೇ ಜವಾಬ್ದಾರರು ಎಂಬುದನ್ನು ಅವರಿಗೆ ಮನಗಾಣಿಸಿ.

ಸ್ನೇಹಿತರೆ, ಸಹಾನುಭೂತಿ ಎಂಬ ಪದಕ್ಕೆ ವಿಶಾಲವಾದ ಅರ್ಥ ವ್ಯಾಪ್ತಿ ಇದೆ. ಸಹ+ಅನುಭೂತಿ = ಸಹಾನುಭೂತಿ. ಅವರ ಮನದ ಭಾವನೆಗಳನ್ನು ಅವರಷ್ಟೇ ತೀವ್ರವಾಗಿ ಅನುಭವಿಸುವ ಮತ್ತು ಅರಿಯುವ ಭಾವವೇ ಸಹಾನುಭೂತಿ. ಬೇರೆಯವರ ಕುರಿತು ನಿರ್ಣಯಾತ್ಮಕವಾಗಿ ಮಾತನಾಡುವುದನ್ನು

ಬಿಟ್ಟಾಗ ಮಾತ್ರ ನಮಗೆ ನಿಜವಾದ ಸಹಾನುಭೂತಿಯ ಅರಿವಾಗುತ್ತದೆ. ಬೇರೊಬ್ಬರ ನೋವಿನ ಆಳದ ಅರಿವಾಗುವುದು ನಾವು



ಸಹಾನುಭೂತಿಯಿಂದ ಯೋಚಿಸಿದಾಗ ಮಾತ್ರ. ಇಲ್ಲದೆ ಹೋದರೆ ನಮಗೆ ಕಾಣುವುದು ಕೇವಲ ಸಮಸ್ಯೆಯ ಮೇಲ್ನೋಟದಲ್ಲಿರುವ ಅಲೆಗಳು ಮಾತ್ರ. ಆದ್ದರಿಂದ ಬೇರೊಬ್ಬರ ಸಮಸ್ಯೆಯನ್ನು ಕುರಿತು ಮಾತನಾಡುವ ಮೊದಲು ಎರಡು ಬಾರಿ ಯೋಚಿಸಿ. ಮೆದುವಾಗಿ ಮಾತನಾಡಿ ಪ್ರೀತಿ ಪೂರ್ವಕವಾಗಿ ತಿಳಿದುಕೊಳ್ಳಿ ಹಾಗೂ ನಿಧಾನವಾಗಿ ತಿಳಿ ಹೇಳಿ.

ಏಕೆಂದರೆ ಅವರ ನೋವಿನ ಆಳದ ಅರಿವು ನಮಗೆ ಇರುವುದಿಲ್ಲ ಅವರು ಅನುಭವಿಸುತ್ತಿರುವ ಮಾನಸಿಕ ಬಿರುಗಾಳಿಯ ಒಂದು ಪುಟ್ಟ ಅಲೆಯನ್ನು ನಾವು ಅನುಭವಿಸಿರುವುದಿಲ್ಲ. ಅವರ ಮನದಲ್ಲಿ ಕುದಿಯುತ್ತಿರುವ ಜ್ವಾಲಾಮುಖಿಯ ಪ್ರಖರತೆಯ ಝಳ ನಮಗೆ ತಾಕಿರುವುದಿಲ್ಲ. ಅವರ ಬದುಕಿನ ಬವಣೆಯ ಅರಿವು ನಮಗೆ ಇರುವುದಿಲ್ಲ..... ನಮಗೆ ಇರಬೇಕಾಗಿರುವುದು ನಿಧಾನವಾಗಿ ಅವರ ಸಮಸ್ಯೆಯನ್ನು ಕೇಳಿಸಿಕೊಳ್ಳುವ ತಾಳ್ಮೆ ಏಕೆಂದರೆ ಅವರು ನಮ್ಮಲ್ಲಿರುವ (ಅದು ತಮಗಿಲ್ಲವೆಂಬ ಭಾವದಿಂದ!) ಯೋಗ್ಯತೆಯನ್ನು ನಂಬಿ ನಮ್ಮಿಂದ ಪರಿಹಾರ ಪಡೆಯಲು ಬಂದಿರುತ್ತಾರೆ. ಅವರ ಮೌನದ ಹಿಂದಿರುವ ಮಾತುಗಳನ್ನು, ಭಾವವನ್ನು ಅರಿಯಲು ನಾವು ಪ್ರಯತ್ನಿಸಬೇಕು. ಹಾಗಾದರೆ ಅವರು ನಮ್ಮ ಬಳಿ ಯಾಕೆ ಬರಬೇಕು ? ತಮ್ಮ ಸಮಸ್ಯೆಗಳನ್ನು ನಮ್ಮಲ್ಲಿ ಏಕೆ ಹೇಳಿಕೊಳ್ಳಬೇಕು? ಎಂಬುದು ನಿಮ್ಮ ಪ್ರಶ್ನೆ ಆಗಿರಬಹುದು.... ಅವರು ಸಮಸ್ಯೆಯ ಚಕ್ರಸುಳಿಯಲ್ಲಿ ಸಿಲುಕಿರುವವರು ಹಾಗೂ ನಾವು ದಡದಲ್ಲಿ ನಿಂತಿರುವವರು ಆಗಿರುವ ಕಾರಣಕ್ಕೆ.ದಡದಲ್ಲಿರುವವರು ಮಾತ್ರವೇ ಸುಳಿಯಲ್ಲಿ ಸಿಲುಕಿದವರನ್ನು ಮೇಲೆತ್ತಲು ಪ್ರಯತ್ನಿಸಬಹುದು. ಯಾವುದೇ ಸಮಯದಲ್ಲಿ ಈ ಪಾತ್ರಗಳು ಅದಲು ಬದಲಾಗಬಹುದು. ನಮಗೂ ಕೂಡ ಬೇರೊಬ್ಬರ ಸಹಾಯ ಬೇಕಾಗಬಹುದು ಎಂಬ ಸಾಮಾಜಿಕ ಕಾರಣ ದಿಂದ ನಾವು ಇತರರ ಸಮಸ್ಯೆಗಳಿಗೆ ಕಿವಿಯಾಗಬೇಕು.

ಏನಂತೀರಾ ಸ್ನೇಹಿತರೆ?





ವೀಣಾ ಹೇಮಂತ್ ಗೌಡ ಪಾಟೀಲ್
ಮುಂಡರಗಿ ಗದಗ್

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from Mihir Akash K.R, #78, Daya Marga Near Geetha School, Siddartha Nagar Mysore-570011, Editor K.N Ravi,